ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 25 ಶನಿವಾರ 2023

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 44 | ಸಂಚಿಕೆ: 218 | ಪುಟಗಳು: 12
ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com

ಇಂದು, ನಾಳೆ 'ಅಭಿವ್ಯಕ್ತಿ ಹಬ್ಬ'

ಮೈಸೂರು, ನ.24(ಎಂಕೆ)– ಮೈಸೂರಿನ ರಾಮಕೃಷ್ಣನಗರದಲ್ಲಿರುವ ರಮಾಗೋವಿಂದ ರಂಗಮಂದಿರದಲ್ಲಿ ಅಭಿವ್ಯಕ್ತಿ ಕಲಾ ಮತ್ತು ಸಾಂಸ್ಕೃತಿಕ ಕೇಂದ್ರದ ವತಿಯಿಂದ ಎರಡು ದಿನಗಳ(ನ.25 ಮತ್ತು 26) 'ಅಭಿವ್ಯಕ್ತಿ ಹಬ್ಬ' ಹಮ್ಮಿಕೊಳ್ಳಲಾಗಿದೆ.

ನಾಳೆ(ನ.25) ಸಂಜೆ 6.15ಕ್ಕೆ ಅಭಿವ್ಯಕ್ತಿ ಹಬ್ಬ ಉದ್ಘಾಟನೆಗೊಳ್ಳಲಿದ್ದು, ಉದ್ಘಾಟನಾ ಸಮಾರಂಭದ ಮುಖ್ಯ ಅತಿಥಿಗಳಾಗಿ ಹಿಂದೂಸ್ತಾನಿ ಗಾಯಕ ಡಾ.ಎಂ.ಎಸ್. ಬಾಸ್ಕರ್, ವಿದ್ಯಾ ವಿಕಾಸ ಶಿಕ್ಷಣ ಸಂಸ್ಥೆಯ ಕವೀಶ್‌ಗೌಡ ಭಾಗವಹಿಸಲಿದ್ದಾರೆ. ಬಳಿಕ ಅಭಿವ್ಯಕ್ತಿ ತಂಡದ ವತಿಯಿಂದ 'ಭರತ ನಾಟ್ಯ' ಪ್ರದರ್ಶನ ನಡೆಯಲಿದೆ.

ನ.26 ರಂದು ಸಂಜೆ 6.15ಕ್ಕೆ ಮುಖ್ಯ ಅತಿಥಿಗಳಾಗಿ ರಾಸ ವೃಂದದ ಡಾ.ರೋಹಿತ ಈಶ್ವರ್, ಜಯಲಕ್ಷ್ಮಿದೇವಿ ವಿದ್ಯಾ ಸಂಸ್ಥೆ ಅಧ್ಯಕ್ಷ ಡಾ.ವಿ.ಎನ್.ನಾಯಕ್ ಭಾಗವಹಿಸಲಿದ್ದು, ನಂತರ ವೈಭವ್ ಅರೇಕರ್ ಅವರಿಂದ ಭರತನಾಟ್ಯ ಪ್ರದರ್ಶನ ಇರಲಿದೆ. ಹಾಗೆಯೇ ನ.27ರಿಂದ 28ರವರೆಗೆ ಜಯಲಕ್ಷ್ಮಿದೇವಿ ಪಿಯು ಕಾಲೇಜಿನಲ್ಲಿ ಭರತನಾಟ್ಯ ನೃತ್ಯ ಕಾರ್ಯಾಗಾರ ನಡೆಯಲಿದೆ ಎಂದು ಅಭಿವ್ಯಕ್ತಿ ಸಂಸ್ಥೆಯ ಸಂಚಾಲಕಿ ಸುಹಾಸಿನಿ ಕೌಲಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾವೇರಿ ನದಿ ನೀರು ನಿರ್ವಹಣಾ ಸಮಿತಿ ಆದೇಶಕ್ಕೆ ಕಾವೇರಿ ಕ್ರಿಯಾ ಸಮಿತಿ ತೀವ್ರ ವಿರೋಧ

ಸಂಘ–ಸಂಸ್ಥೆಗಳು, ರಾಜಕೀಯ ಪಕ್ಷಗಳೊಡಗೂಡಿ ಹೋರಾಟ ತೀವ್ರಗೊಳಿಸಲು ನಿರ್ಧಾರ



ಮೈಸೂರು, ನ.24(ಎಸ್‌ಪಿಎನ್)– ಕಾವೇರಿ ನದಿ ನೀರು ನಿರ್ವಹಣಾ ಸಮಿತಿಯು ತಮಿಳುನಾಡಿಗೆ ಒಂದು ತಿಂಗಳು ನಿತ್ಯ 2,700 ಕ್ಯೂಸೆಕ್ ನೀರು ಹರಿಸಬೇಕು ಎಂದು ಮತ್ತೆ ಆದೇಶಿಸಿರುವುದನ್ನು ಕಾವೇರಿ ಕ್ರಿಯಾ ಸಮಿತಿ ತೀವ್ರ ವಿರೋಧಿಸಿದೆ.

ಮೈಸೂರು ಜಲದರ್ಶಿನಿ ಅತಿಥಿ ಗೃಹದ ಆವರಣದ ಕಾವೇರಿ ಕ್ರಿಯಾ ಸಮಿತಿ ಅಧ್ಯಕ್ಷ ಜಯಪ್ರಕಾಶ್ ಸೇರಿದಂತೆ ಇತರೆ ಹೋರಾಟಗಾರರ ನೇತೃತ್ವದಲ್ಲಿ ಶುಕ್ರವಾರ ನಡೆದ ಸಭೆಯಲ್ಲಿ ಕಾವೇರಿ ನದಿ ನೀರು ನಿರ್ವಹಣಾ ಸಮಿತಿಯ ಆದೇಶವನ್ನು ಖಂಡಿಸಲಾಯಿತು. ಅಲ್ಲದೇ ಮುಂದಿನ ದಿನಗಳಲ್ಲಿ ಎಲ್ಲಾ ಸಂಘ–ಸಂಸ್ಥೆಗಳು ಹಾಗೂ ರಾಜಕೀಯ ಪಕ್ಷಗಳೊಡಗೂಡಿ ಹೋರಾಟವನ್ನು ತೀವ್ರಗೊಳಿಸಲು ನಿರ್ಧರಿಸಲಾಯಿತು. ಹಾಗೂ ಈ ಸಂಬಂಧ ನಾಳೆ (ನ.25) ಮತ್ತೊಂದು ಸಭೆ ನಡೆಸಿ ಹೋರಾಟದ ರೂಪು–ರೇಷೆಗಳನ್ನು ರಚಿಸಲು ನಿರ್ಣಯಿಸಲಾಯಿತು. ಸಭೆ ನಂತರ ಮಾಧ್ಯಮದೊಂದಿಗೆ ಮಾತನಾಡಿದ ಸಮಿತಿ ಅಧ್ಯಕ್ಷ ಜಯಪ್ರಕಾಶ್, ಮಾಜಿ ಮುಖ್ಯಮಂತ್ರಿ ಎಸ್.ಬಂಗಾರಪ್ಪ ಅಧಿಕಾರಾವಧಿಯಲ್ಲಿ ಇಂತಹುದ್ದೇ ಸಂದರ್ಭ ಎದುರಾಗಿತ್ತು. ತಮಿಳುನಾಡಿಗೆ ನೀರು ಬಿಡಬೇಕೆಂಬ ಸುಪ್ರೀಂಕೋರ್ಟ್ ಆದೇಶದ ವಿರುದ್ಧ ಸುಗ್ರಿವಾಜ್ಞೆ ಹೊರಡಿಸಿ ನೀರು ನಿಲ್ಲಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.

ಆದರೆ, ಇಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಕಾವೇರಿ ನೀರು ಬಿಡಬೇಕೆಂದು ಕಾವೇರಿ ನದಿ ನೀರು ನಿರ್ವಹಣಾ ಸಮಿತಿ ಮತ್ತು ಪ್ರಾಧಿಕಾರ, ಕರ್ನಾಟಕ ವಿರುದ್ಧ ಜೂನ್‌ನಿಂದಲೂ ಆದೇಶ ನೀಡುತ್ತಿದ್ದರೂ ಯಾವುದೇ ದೃಢ ನಿಲುವು ತಾಳಿಲ್ಲ ಎಂದು ಆರೋಪಿಸಿದರು.

ಕರ್ನಾಟಕದಲ್ಲಿ ಬರ ಪರಿಸ್ಥಿತಿ ತೀವ್ರವಾಗಿದ್ದು, ಮುಂದಿನ ದಿನಗಳಲ್ಲಿ ರೈತರ ಬೆಳೆಗೆ ಮಾತ್ರವಲ್ಲದೆ ಕುಡಿಯುವ ನೀರಿಗೂ ಹಾಹಾಕಾರ ತಲೆದೋರುವ ಲಕ್ಷಣ ಗೋಚರಿಸುತ್ತಿದ್ದರೂ, ಸರ್ಕಾರ ದೃಢ ನಿಲುವು ತಾಳದೇ ಇರುವುದು ಬೇಸರದ ಸಂಗತಿ ಎಂದರು. ಈ ಸಭೆಯಲ್ಲಿ ಸಮಿತಿಯ ಉಪಾಧ್ಯಕ್ಷ ಸುರೇಶಗೌಡ, ಸದಸ್ಯರಾದ ಮೂಗೂರು ನಂಜುಂಡಸ್ವಾಮಿ, ತೇಜೇಶ್ ಲೋಕೇಶ್ ಗೌಡ, ಮಂಜುಳಾ, ಪುಷ್ಪಾವತಿ, ಇಂದ್ರಾಣಿ, ಡಾ. ರಾಜಕುಮಾರ ಸಂಘದ ಮಹಾದೇವಸ್ವಾಮಿ, ಶ್ರೀನಿವಾಸ, ಕಿರಂಗೂರು ಕುಮಾರಸ್ವಾಮಿ, ನಗುವನಹಳ್ಳಿ ಬಾಲು, ಹನುವಂತೇಗೌಡ, ಸಯ್ಯದ್ ರಸೀಧ್, ಗೋವಿಂದರಾಜ್, ಪ್ರಮೋದ್, ಕೃಷ್ಣಯ್ಯ, ಹನುವಂತಯ್ಯ, ಜೆ.ಕುಮಾರ, ಶಿವನಾಯಕ, ಸಂಜಯ್ ಉಪಸ್ಥಿತರಿದ್ದರು.

ಕನ್ನಡ ರಾಜ್ಯೋತ್ಸವದ ಅಂಗವಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರ



ಮೈಸೂರು, ನ. 24–ಮೈಸೂರು ಜಿಲ್ಲಾ ಚಿನ್ನ–ಬೆಳ್ಳಿ ಕೆಲಸಗಾರರ ಅಭಿವೃದ್ಧಿ ಸಂಘ ಹಾಗೂ ಲಯನ್ಸ್‌ಕ್ಲಬ್ ಆಫ್ ಮೈಸೂರು ಗೋಲ್ಡನ್ ಸಿಟಿ, ಕೆ.ಆರ್. ಆಸ್ಪತ್ರೆ ಮತ್ತು ಕ್ಲಿಯರ್ ಮೆಡಿ ರೇಡಿಯಂಟ್ ಆಸ್ಪತ್ರೆಯ ತಜ್ಞರ ಸಹಯೋಗದೊಂದಿಗೆ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ಇರ್ವಿನ್ ರಸ್ತೆಯಲ್ಲಿರುವ ತಿಮ್ಮಾಚಾರ್ ಕಲ್ಯಾಣ ಮಂಟಪದಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ ಆಯೋಜಿಸಲಾಗಿತ್ತು.

ಇದರ ಉದ್ಘಾಟನೆಯನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದ ಪರಮಪೂಜ್ಯ ಅರ್ಜುನ ಅವಧೂತ ಮಹಾರಾಜ ಭಕ್ತಾದಿಗಳಿಗೆ ಆಶೀರ್ವಚನ ನೀಡಿ ಶುಭ ಹಾರೈಸಿ, ಕಲಿಯುಗದಲ್ಲಿ ಭಗವಂತನನ್ನ ಪ್ರತ್ಯಕ್ಷವಾಗಿ ಕಾಣಲು ಕಾರಣಕರ್ತರು ವಿಶ್ವಕರ್ಮದವರು. ಹಾಗಾಗಿ ಶಿಲ್ಪಕಲೆ, ಚಿನ್ನ ಬೆಳ್ಳಿ ಒಡವೆಗಳ ವಿನ್ಯಾಸ, ಪಾರಂಪರಿಕ ಶೈಲಿಯ ಮರಗೆಲಸಗಳಲ್ಲಿ ವಿಶ್ವಕರ್ಮದವರ ಪಾತ್ರ ಮಹತ್ವವಾದುದು, ಕರ್ನಾಟಕದವರಿಗೆ ಕುಡಿಯಲು ನೀರು, ಕೃಷಿ, ರೈತಾಪಿ ವರ್ಗಕ್ಕೆ, ಗ್ರಾಮೀಣ ಪ್ರದೇಶಕ್ಕೆ ಕಾವೇರಿ ಪೂರ್ಣ ಪ್ರಮಾಣದಲ್ಲಿ ಸಿಗದಿರುವುದು ಬೇಸರದ ಸಂಗತಿ, ಕನ್ನಡ ಕರ್ನಾಟಕ ನಮ್ಮ ಅಸ್ಮಿತೆ, ಅದನ್ನು ರಾಜಕೀಯವಾಗಿ ಬಳಸಬಾರದು ಎಂದರು.

ವಿಧಾನಪರಿಷತ್ ಸದಸ್ಯರಾದ ಮಂಜೇಗೌಡ ಮಾತನಾಡಿ, ಜನರ ಆರೋಗ್ಯ ಜಾಗೃತಿಗೆ ಉಚಿತ ಆರೋಗ್ಯ ಶಿಬಿರಗಳು ಸಹಕಾರಿಯಾಗಿವೆ. ಬಡ ಜನತೆ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ತೋರದೆ ತಜ್ಞ ವೈದ್ಯರು ಲಭ್ಯವಿದ್ದಾಗ ಶಿಬಿರದಲ್ಲಿ ಪಾಲ್ಗೊಂಡು ಉಚಿತ ಆರೋಗ್ಯ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. 200ಕ್ಕೂ ಹೆಚ್ಚು ರೋಗಿಗಳ ಕಣ್ಣಿನ ತಪಾಸಣೆ, ದಂತ ತಪಾಸಣೆ, ಮೂಳೆ ತಪಾಸಣೆ, ಬಿಪಿ, ಶುಗರ್ ಇತ್ಯಾದಿ ಆರೋಗ್ಯ ತಪಾಸಣೆ ನಡೆಸಲಾಯಿತು. ಇದೇ ಸಂದರ್ಭದಲ್ಲಿ ಮೈಸೂರು ಜಿಲ್ಲಾ ಚಿನ್ನ ಬೆಳ್ಳಿ ಕೆಲಸಗಾರರ ಅಭಿವೃದ್ಧಿ ಸಂಘದ ಸದಸ್ಯರುಗಳಿಗೆ ಸರ್ಕಾರದಿಂದ ದೊರೆಯುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಲಾಯಿತು. ಹಾಗೂ ಸಂಘದ ಸದಸ್ಯರಿಗೆ ಮೊದಲ ಹಂತದ ಗುರುತಿನ ಚೀಟಿಯನ್ನು ವಿತರಿಸಿದರು.

ಪಾಸ್ಟ್ ಮಲ್ಟಿಪಲ್ ಕೌನ್ಸಿಲ್ ಅಧ್ಯಕ್ಷರು ಹಾಗೂ ಲಯನ್ಸ್ ಸಂಸ್ಥೆ ಲಯನ್ ಡಾ. ನಾಗರಾಜು ವಿ. ಬೈರಿ, ಲಯನ್ಸ್ ಕ್ಲಬ್ ಆಫ್ ಮೈಸೂರು ಗೋಲ್ಡನ್ ಸಿಟಿ ಹಾಗೂ ಮೈಸೂರು ಜಿಲ್ಲಾ ಚಿನ್ನ ಬೆಳ್ಳಿ ಕೆಲಸಗಾರರ ಅಭಿವೃದ್ಧಿ ಸಂಘದ ಅಧ್ಯಕ್ಷ ಸುರೇಶ್ ಗೋಲ್ಡ್, ಜೆಡಿಎಸ್ ಮುಖಂಡರಾದ ಕೆ.ಆರ್.ಮಿಲ್ ಶಿವಣ್ಣ, ರಾಜಕೀಯ ರವಿ, ಚಲನಚಿತ್ರ ನಟರು ಹಾಗೂ ನಿರ್ಮಾಪಕರಾದ ಲಕ್ಷ್ಮಿಪತಿ ಬಾಲಾಜಿ, ಮೈಸೂರು ಜಿಲ್ಲಾ ಚಿನ್ನ–ಬೆಳ್ಳಿ ಕೆಲಸಗಾರರ ಅಭಿವೃದ್ಧಿ ಸಂಘದ ಗೌರವಾಧ್ಯಕ್ಷರು ರವಿಪ್ರಕಾಶ್ ಹಾಗೂ ಇನ್ನಿತರರು ಹಾಜರಿದ್ದರು.

ನಾಳೆ ಹಂಚ್ಯಾ–ಸಾತಗಳ್ಳಿಯಲ್ಲಿ ರಾಜ್ಯೋತ್ಸವ, ಜಿಟಿಡಿ ಹುಟ್ಟುಹಬ್ಬ ಆಚರಣೆ

ಮೈಸೂರು, ನ.24–ಮೈಸೂರಿನ



ಹಂಸವಾಣಿ ಕನ್ನಡ ಬಳಗ, ಹಂಸವಾಣಿ ಹಿರಿಯ ನಾಗರಿಕರ ಹಿತರಕ್ಷಣಾ ಸಮಿತಿ ಮತ್ತು ಹಂಸವಾಣಿ ಸ್ತ್ರೀ ಶಕ್ತಿ ಸ್ವಸಹಾಯ ಸಂಘದ ಸಂಯುಕ್ತಾಶ್ರಯದಲ್ಲಿ ನ.26ರಂದು 68ನೇ ಕನ್ನಡ ರಾಜ್ಯೋತ್ಸವ ಹಾಗೂ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರ ಹುಟ್ಟುಹಬ್ಬ ಆಚರಿಸಲಾಗುತ್ತಿದೆ.

ಹಂಚ್ಯಾ–ಸಾತಗಳ್ಳಿಯಲ್ಲಿರುವ ಹಂಸಾ ಪಾರ್ಕ್‌ನಲ್ಲಿ ಅಂದು ಬೆಳಗ್ಗೆ 8 ಗಂಟೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ರಾಜ್ಯೋತ್ಸವ ಕಾರ್ಯಕ್ರಮ ನಡೆದರೆ, ಸಂಜೆ ಈ ಸಂಘಟನೆಗಳು ಜಿ.ಟಿ.ದೇವೇಗೌಡರ ಹುಟ್ಟುಹಬ್ಬ ಆಚರಿಸಲಿವೆ. ಅಂದು ಬೆಳಗ್ಗೆ 8 ಗಂಟೆಗೆ ತೆರೆದ ಅಲಂಕೃತ ವಾಹನದಲ್ಲಿ ತಾಯಿ ಭುವನೇಶ್ವರಿ ಚಿತ್ರದ ಮೆರವಣಿಗೆ ನಡೆಸಲಿದ್ದು, ನಂತರ ನಡೆಯಲಿರುವ ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನ ಸ್ವಾಮಿ ಕನ್ನಡ ಧ್ವಜಾರೋಹಣ ಮಾಡಲಿದ್ದು, ಮಹಾಜನ ಕಾಲೇಜು ಕನ್ನಡ ವಿಭಾಗದ ಮುಖ್ಯಸ್ಥ ಡಾ. ಹೆಚ್.ಆರ್.ತಿಮ್ಮೇಗೌಡ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಹಂಸವಾಣಿ ಕನ್ನಡ ಬಳಗದ ಅಧ್ಯಕ್ಷ ಕೆ.ಸಿ.ಪ್ರಶಾಂತ್ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಭಾಷಕಾರರಾಗಿ ಸಾಹಿತಿ ಡಾ. ಚಿಕ್ಕಮಾದು ಆಗಮಿಸಲಿದ್ದಾರೆ.

ಈ ವೇಳೆ ಪರಿಸರ ಪ್ರೇಮಿ ಶ್ರೀಮತಿ ಮಂಜುಳಾ, ಉರುಗ ತಜ್ಞ ಪ್ರವೀಣ್ ಅವರನ್ನು ಸನ್ಮಾನಿಸಲಾಗುತ್ತಿದ್ದು, ಹಂಸವಾಣಿ ಹಿರಿಯ ನಾಗರಿಕರ ಹಿತರಕ್ಷಣಾ ಸಮಿತಿ ಅಧ್ಯಕ್ಷ ಎಲ್.ಕೃಷ್ಣ ರಂಗರಾಜು, ಸ್ತ್ರೀಶಕ್ತಿ ಮಹಿಳಾ ಸಂಘದ ಅಧ್ಯಕ್ಷೆ ಶ್ರೀಮತಿ ಶಿವಮ್ಮ ಉಪಸ್ಥಿತರಿರುವರು.

ಸಂಜೆ ನಡೆಯಲಿರುವ ಶಾಸಕ ಜಿ.ಟಿ. ದೇವೇಗೌಡರ ಹುಟ್ಟುಹಬ್ಬದ ಸಮಾರಂಭದಲ್ಲಿ ಸಂಜೆ 4 ರಿಂದ7 ಗಂಟೆವರೆಗೆ ಮಕ್ಕಳಿಂದ ಮನರಂಜನೆ ಕಾರ್ಯಕ್ರಮ, 7 ಗಂಟೆಗೆ ಸುಗಮ ಸಂಗೀತ ನಂತರ ಜಿ.ಟಿ.ದೇವೇಗೌಡರಿಗೆ ಹುಟ್ಟುಹಬ್ಬದ ಸನ್ಮಾನ ನಡೆಯಲಿದೆ. ಶಾಸಕ ಜಿ.ಡಿ.ಹರೀಶ್‌ಗೌಡ ಅಧ್ಯಕ್ಷತೆ ವಹಿಸಲಿದ್ದು, ವಿವಿಧ ಗ್ರಾಮಗಳ ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಮತಾಂತರಗೊಂಡ ಬುಡಕಟ್ಟು ಸಮುದಾಯದವರ ವಿರುದ್ಧ ಸಮಾವೇಶ



ಮೈಸೂರು,ನ.24(ಎಂಟಿವೈ)– ಬೇರೆ ಬೇರೆ ಧರ್ಮಗಳಿಗೆ ಮತಾಂತರಗೊಂಡ ಬುಡಕಟ್ಟು ಸಮುದಾಯದವರನ್ನು ಪರಿಶಿಷ್ಟ ಪಂಗಡದ ಪಟ್ಟಿಯಿಂದ ತೆಗೆದು ಹಾಕುವಂತೆ ಆಗ್ರಹಿಸಿ ಗಿರಿಜನ ಸುರಕ್ಷಾ ವೇದಿಕೆ ವತಿಯಿಂದ ಮೈಸೂರಲ್ಲಿ ನ.26ರಂದು ಡಿ ಲಿಸ್ಟಿಂಗ್ ರ‍್ಯಾಲಿ ಹಾಗೂ ಬೃಹತ್ ಸಮಾವೇಶ ಆಯೋಜಿಸಲಾಗಿದೆ ಎಂದು ಗಿರಿಜನ ಮುಖಂಡ ಶಾಂತಾರಾಂ ಸಿದ್ದಿ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಮೂಲ ಆದಿವಾಸಿಗಳನ್ನು ಆಮಿಷವೊಡ್ಡಿ ಮತಾಂತರ ಮಾಡುವ ಪ್ರಕ್ರಿಯೆ ಹೆಚ್ಚಾಗುತ್ತಿದೆ. ಮತಾಂತರದ ಪರಿಣಾಮ ಬುಡಕಟ್ಟು ಸಮುದಾಯ ಸಂಕಷ್ಟಕ್ಕೆ ಸಿಲುಕಿದೆ. ಇದನ್ನು ಮನಗಂಡು ಬುಡಕಟ್ಟು ಸಂಸ್ಕೃತಿ ಹಾಗೂ ಜನಾಂಗವನ್ನು ರಕ್ಷಿಸುವುದಕ್ಕಾಗಿ ಡಿ ಲಿಸ್ಟಿಂಗ್ ರ‍್ಯಾಲಿ ಹಾಗೂ ಸಮಾವೇಶ ನಡೆಸಲಾಗುತ್ತಿದೆ. ಈ ಕಾರ್ಯಕ್ರಮಕ್ಕೆ ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ಮಂದಿ ಮೂಲ ಬುಡಕಟ್ಟು ಸಮುದಾಯದ ಜನ ಆಗಮಿಸಲಿದ್ದಾರೆ ಎಂದರು.

ನ.26ರಂದು ಬೆಳಗ್ಗೆ 11 ಗಂಟೆಗೆ ಮಹಾರಾಜ ಪದವಿ ಪೂರ್ವ ಕಾಲೇಜು ಮೈದಾನದಿಂದ ಗಿರಿಜನರ ಬೃಹತ್ ಮೆರವಣಿಗೆ ಆರಂಭವಾಗಲಿದೆ. ವಿವಿಧ ಸಮುದಾಯಗಳ ಮೂಲ ಜಾನಪದ ಕಲೆಯೊಂದಿಗೆ ಮೆರವಣಿಗೆ ಆರಂಭಗೊಳ್ಳಲಿದ್ದು, ಜೆಎಲ್‌ಬಿ ರಸ್ತೆ, ಫೀಲ್ಡ್ ಮಾರ್ಷಲ್ ಕಾರ್ಯಪ್ಪ ವೃತ್ತ, ಶಿವರಾಂಪೇಟೆ ರಸ್ತೆ, ಮೂಲಕ ಸಾಗಿ ಮತ್ತೆ ಮಹಾರಾಜ ಪದವಿ ಪೂರ್ವ ಕಾಲೇಜು ಮೈದಾನ ತಲುಪಲಿದೆ.

ರ‍್ಯಾಲಿ ಬಳಿಕ ಮಧ್ಯಾಹ್ನ 1ರಿಂದ 3 ಗಂಟೆವರೆಗೆ ಸಮಾವೇಶ ನಡೆಯಲಿದ್ದು, ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ವಿವಿಧ ಬುಡಕಟ್ಟು ಸಮುದಾಯಗಳ ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿದೆ. ಈ ಕಾರ್ಯಕ್ರಮದಲ್ಲಿ ಜೇನು ಕುರುಬ, ಬೆಟ್ಟ ಕುರುಬ, ಸಿದ್ದಿ, ವಾಲ್ಮೀಕಿ, ಗೊಂಡ, ಹಕ್ಕಿಪಿಕ್ಕಿ, ಯರವ, ಫಣಿಯರವ, ಮಲೆಕುಡಿಯ, ಡೊಂಗ್ರಿ ಗರಾಸಿಯ, ಇರುಳಿಗ, ಫಣಿಯ, ಸೋಲಿಗ, ಸೂಜಿ, ಕೊರಗ, ಬೇಡ ಹಾಗೂ ಇನ್ನಿತರ ಬುಡಕಟ್ಟು ಸಮುದಾಯ ಪಾಲ್ಗೊಳ್ಳಲಿದೆ. ಸಮಾವೇಶದಲ್ಲಿ ಮತಾಂತರಿತ ಗಿರಿಜನರನ್ನು ಕೂಡಲೇ ಪರಿಶಿಷ್ಟ ಪಂಗಡದ ಪಟ್ಟಿಯಿಂದ ತೆಗೆದುಹಾಕಬೇಕು ಎಂದು ಆಗ್ರಹಿಸಲಾಗುವುದು. ಕ್ರೈಸ್ತ ಮತ್ತು ಮುಸ್ಲಿಂ ಮೂಲಕ ಬುಡಕಟ್ಟು ಜನಾಂಗದವರ ಮತಾಂತರ ಹೊಸದೇನಲ್ಲ. ಮತಾಂತರವು ಬುಡಕಟ್ಟು ಸಮುದಾಯವನ್ನು ಅವರ ಮೂಲ ನಂಬಿಕೆಗಳು, ಸಂಸ್ಕೃತಿ ಮತ್ತು ಸಂಪ್ರದಾಯಗಳಿಂದ ದೂರ ಇರಿಸುವ ಪಿತೂರಿ ಹೊಂದಿದೆ ಹೀಗಾಗಿ ಅಂತಹವರಿಗೆ ಮೀಸಲಾತಿ ನೀಡಬಾರದೆಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಗಿರಿಜನ ಸುರಕ್ಷಾ ವೇದಿಕೆ ಪದಾಧಿಕಾರಿಗಳಾದ ಗಣೇಶ್, ತಮ್ಮಯ್ಯ, ಜಿ. ಸೂರ್ಯನಾರಾಯಣ್, ಪುಟ್ಟಮ್ಮ ಹಾಗೂ ರವೀಂದ್ರ ಕೌಸಲ್ಯ ಇದ್ದರು.

ಕರ್ನಾಟಕದ ಜೈನ ಪರಂಪರೆ ಕುರಿತು ಉಪನ್ಯಾಸ

ಮೈಸೂರು, ನ.24– ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ವತಿಯಿಂದ ನ.29 ರಂದು ಬೆಳಿಗ್ಗೆ 11 ಗಂಟೆಗೆ ಪುರಾತತ್ವ ಇಲಾಖೆಯ ಸಭಾಂಗಣದಲ್ಲಿ ಕರ್ನಾಟಕ ಜೈನ ಪರಂಪರೆ ವಿಷಯ ಕುರಿತಂತೆ ಹಿರಿಯ ಸಂಶೋಧಕರಾದ ಡಾ. ಬಿ.ಜಯಸಿಂಹ ಉಪನ್ಯಾಸ ನೀಡಲಿದ್ದು ಆಸಕ್ತ ವಿದ್ಯಾರ್ಥಿಗಳು ಇತಿಹಾಸ ಆಸಕ್ತರು, ಸಂಶೋಧನಕಾರರು, ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿದೆ ಎಂದು ಪುರತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 25 ಶನಿವಾರ 2023

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 44 | ಸಂಚಿಕೆ: 218 | ಪುಟಗಳು: 12

ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com



ನಕ್ಕರೆ ಅದೇ ಸ್ವರ್ಗ

ಡಾಕ್ಟರ್ : "ಒಂದೇ ಸಲ ಮೂರು ಹಲ್ಲು ಹೇಗೆ ಹೋಯ್ತು?"
ಆತ : "ನನ್ನ ಹೆಂಡತಿ ಮಾಡಿದ ಮೈಸೂರ್ ಪಾಕು ತಿಂದೆ"
ಡಾಕ್ಟರ್ : "ತಿನ್ನಲ್ಲ ಅನ್ನಬೇಕಾಗಿತ್ತು"
ಆತ : "ಅಯ್ಯೋ ಬಿಡಿ ಸಾರ್, ತಿಂದಿದ್ದಕ್ಕೆ ಬರೀ ಮೂರು ಹೋದವು. ಇಲ್ಲಾಂದ್ರೆ...!"

ಮೈಸೂರು ಮಿತ್ರ

ಶನಿವಾರ, 25 ನವೆಂಬರ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಈ ಜಗತ್ತಿನಲ್ಲಿ ಒಳಿತನ್ನು ಸಾಧಿಸಲು ಸಾಧ್ಯ ಎನ್ನುವ ನಂಬಿಕೆ ಇದ್ದರೆ, ಅದಕ್ಕೆ ಬೇಕಾದ ಎಲ್ಲಾ ಶಕ್ತಿಗಳೂ ತನ್ನಷ್ಟಕ್ಕೆ ತಾನೇ ಒದಗುತ್ತವೆ. – ಬೆಂಜಮಿನ್ ಫ್ರಾಂಕ್ಲಿನ್

ವೇದ ಸುಳ್ಳಾದರೂ { ಇಲಿಯ ವ್ಯಾಜ್ಯಕ್ಕೆ
ಗಾದೆ ಸುಳ್ಳಾಗದು { ಬೆಕ್ಕು ಸಾಕ್ಷಿ

ನಿಮ್ಮ ಪತ್ರಗಳು

ಬಾಲ್ಯ ವಿವಾಹ ತಡೆಗೆ ಕಠಿಣ ಕಾನೂನು ಕ್ರಮ ಅಗತ್ಯ

ಮಾನ್ಯರೆ,

ಸಕ್ಕರೆಯ ನಾಡೆಂದೇ ಪ್ರಸಿದ್ದವಾಗಿರುವ ಮಂಡ್ಯ ಜಿಲ್ಲೆಯಲ್ಲಿ ಬಾಲ್ಯ ವಿವಾಹ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದೆ ಎಂಬ ಮಾಧ್ಯಮ ವರದಿಗಳು ಆತಂಕಕಾರಿಯಾಗಿದೆ. ಇದರ ಜೊತೆಗೆ ಅಪ್ರಾಪ್ತ ಬಾಲಕಿಯರು ಸಹ ಗರ್ಭಿಣಿಯರಾಗುತ್ತಿರುವುದು ಹೆಚ್ಚುತ್ತಿದೆ. ಇದು ಖಂಡಿತಾ ಎಳೆಯ ವಯಸ್ಸಿನ ಬಾಲಕಿಯರ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೆ ಗಂಭೀರವಾದ ಪರಿಣಾಮ ಉಂಟು ಮಾಡುವುದರಲ್ಲಿ ಸಂದೇಹವೇ ಇಲ್ಲ. ಜಿಲ್ಲಾಡಳಿತ ನೀಡಿರುವ ಅಂಕಿ ಅಂಶಗಳ ಪ್ರಕಾರ ಕಳೆದ 2023 ರ ಜನವರಿ ತಿಂಗಳಿನಿಂದ ಇದುವರೆಗೆ ಮಂಡ್ಯ ಜಿಲ್ಲೆಯಲ್ಲಿ 12,220 ಮಹಿಳೆಯರು ಗರ್ಭವತಿಯರಾಗಿದ್ದು, ಆ ಪೈಕಿ 43 ಅಪ್ರಾಪ್ತರು ಇದ್ದಾರೆ ಎಂದು ಹೇಳಲಾಗಿದೆ. ಬಾಲ್ಯ ವಿವಾಹದ ಬಗ್ಗೆ 147 ದೂರುಗಳು ದಾಖಲಾಗಿದೆ ಎಂದು ಹೇಳಲಾಗಿದೆ. ರಾಜ್ಯ ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿ, ತಪ್ಪಿತಸ್ಥರ ವಿರುದ್ದ ಉಗ್ರ ಕ್ರಮ ಜರುಗಿಸಬೇಕಾಗಿದೆ. ಬಾಲ್ಯ ವಿವಾಹ ತಡೆ ಕಾಯ್ದೆ ಅಸ್ತಿತ್ವದಲ್ಲಿದ್ದರೂ ಸಹ, ಬಾಲ್ಯವಿವಾಹ ಎಗ್ಗಿಲ್ಲದೇ ನಡೆಯುತ್ತಿದೆ. ಇದಕ್ಕೆ ಕೆಲವು ಕಾಣದ ಕೈಗಳ ಪರೋಕ್ಷ ನೆರವು ಕೂಡ ಇರುತ್ತದೆ.

ಬಾಲ್ಯವಿವಾಹ ಒಂದು ಸಾಮಾಜಿಕ ಪಿಡುಗಾಗಿದ್ದು, ಇದರಿಂದ ಸಾಕಷ್ಟು ಸಾಮಾಜಿಕ ಸಮಸ್ಯೆಗಳು ತಲೆ ದೋರುತ್ತವೆ. ಬಹು ಮುಖ್ಯವಾದ ಬಾಲಕಿಯರ ಪಾಲಿಗೆ ಇದೊಂದು ಶಾಪವಾಗಿದ್ದು, ಅವರ ಭವಿಷ್ಯವನ್ನು ಮುಸುಕಾಗಿಸುತ್ತದೆ. ಎಷ್ಟೋ ಕಡೆ, ಬಾಲಕಿಯರ ತಂದೆ ತಾಯಿಗಳೇ ಹಣದಾಸೆಗೆ ಬಲಿಯಾಗಿ ತಮ್ಮ ಕರುಳಿನ ಕುಡಿಗಳನ್ನು ಅಂಧಕಾರದತ್ತ ದೂಡುತ್ತಾರೆ. ಕಿತ್ತು ತಿನ್ನುವ ಬಡತನ, ಅನಕ್ಷರತೆ, ಅಸಮಾನತೆ, ಆರ್ಥಿಕ ಸಮಸ್ಯೆ ಮುಂತಾದವುಗಳು ಇದಕ್ಕೆ ಕಾರಣವಿರಬಹುದು. ಆದ್ದರಿಂದ ಅಂತಹ ಬಾಲಕಿಯರ ಪೋಷಕರಿಗೆ ಸರಿಯಾದ ತಿಳುವಳಿಕೆ ನೀಡುವುದು ಸಂಬಂಧಪಟ್ಟ ಇಲಾಖೆಗಳ ಕರ್ತವ್ಯವಾಗಿದೆ. ಬಾಲ್ಯ ವಿವಾಹವನ್ನು ತಡೆಗಟ್ಟಲು ಕೇಂದ್ರ, ರಾಜ್ಯ ಸರ್ಕಾರಗಳ ಜೊತೆಗೆ ಸಾವಿರಾರು ಸಂಘ ಸಂಸ್ಥೆಗಳು ಅವಿರತವಾಗಿ ದುಡಿಯುತ್ತಿದ್ದರೂ ಸಹ ನಿರೀಕ್ಷಿತ ಯಶಸ್ಸು ದೊರಕಿಲ್ಲ. ಇನ್ನು ಮುಂದಾದರೂ ಸಂಬಂದಪಟ್ಟ ಇಲಾಖೆಗಳು ಈ ಬಗ್ಗೆ ಹೆಚ್ಚು ಜಾಗ್ರತೆ ವಹಿಸಬೇಕಾಗಿದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ವಿತರಕರ ಬಂಡವಾಳಕ್ಕೆ ಸೂಕ್ತ ಭದ್ರತೆ

ಮಾನ್ಯರೆ,

ಇತ್ತೀಚಿನ ದಿನಗಳಲ್ಲಿ ನಗರ ಹಾಗೂ ತಾಲೂಕು ಪ್ರದೇಶಗಳಲ್ಲಿ ಹಲವಾರು ಯುವಕರು ಸ್ವಯಂ ಉದ್ಯೋಗದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದು, ಅದರಲ್ಲಿ ಹೆಚ್ಚಾಗಿ ಬಹುರಾಷ್ಟ್ರೀಯ ಹಾಗೂ ಸ್ವದೇಶಿ ಕಂಪನಿಗಳ ಆಹಾರ ಪದಾರ್ಥಗಳು ಹಾಗೂ ಇನ್ನಿತರ ಜೀವನಾವಶ್ಯಕ ವಸ್ತುಗಳು, ಆಟೋಮೊಬೈಲ್, ಮೊಬೈಲ್ ಹೀಗೆ ನಾನಾ ತರಹದ ಉದ್ಯಮಗಳ ಪದಾರ್ಥಗಳ ವಿತರಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇವರು ಹೆಚ್ಚಾಗಿ ಬ್ಯಾಂಕ್, ಹಣಕಾಸಿನ ಸಂಸ್ಥೆಗಳ ಹಾಗೂ ಇನ್ನಿತರ ಮೂಲಗಳ ಮೂಲಕ ತಮ್ಮ ಕುಟುಂಬದ ಆಸ್ತಿ ದಾಖಲೆಗಳನ್ನು ಅಡಮಾನ ವಿಟ್ಟು ಸಾಲ ಸೋಲ ಮಾಡಿ ಉದ್ಯೋಗದಲ್ಲಿ ಬಂಡವಾಳ ಹೂಡಿಕೆ ಮಾಡಿರುತ್ತಾರೆ. ಇವರು ಯಾವುದೇ ಕಂಪನಿಗಳಿಂದ ಪದಾರ್ಥಗಳನ್ನು ತರಿಸಬೇಕಾದರೆ ಸದರಿ ಕಂಪನಿಗಳಿಗೆ ಮುಂಗಡವಾಗಿ ಹಣ ಪಾವತಿಸಬೇಕಾಗುತ್ತದೆ. ಈ ರೀತಿ ತರಿಸಿದ ಪದಾರ್ಥಗಳನ್ನು ಮಾರುಕಟ್ಟೆಗಳಿಗೆ ಹೆಚ್ಚಾಗಿ ತಿಂಗಳಾನುಗಟ್ಟಲೆ ಸಾಲದ ರೂಪದಲ್ಲಿಯೇ ವ್ಯವಹಾರ ಮಾಡಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ. ಕಂಪನಿಯವರು ತಮ್ಮ ಪದಾರ್ಥಗಳಿಗೆ ವಿತರಕರನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಕೆಲವೊಂದು ನಿರ್ಧಿಷ್ಟ ಒಪ್ಪಂದದ ಕರಾರು ಪತ್ರವನ್ನು ದಾಖಲು ಮಾಡಿಕೊಳ್ಳುವ ಮುಖಾಂತರ ವ್ಯವಹಾರವನ್ನು ಪ್ರಾರಂಭಿಸುತ್ತಾರೆ. ಈ ದಾಖಲಾತಿ ಕೇವಲ ಕಂಪನಿಯ ಹಿತದೃಷ್ಟಿ ಉದ್ದೇಶಕ್ಕೆ ಮಾತ್ರ ಸೀಮಿತವಾಗಿದ್ದು ವಿತರಕರ ಚಿಂತನೆಯ ಯಾವ ಮೂಲಭೂತ ಅಂಶವೂ ಒಳಗೊಂಡಿರುವುದಿಲ್ಲ.

ಹಳೆಯ ವಿತರಕರಿಗೆ ಕಂಪನಿಯಿಂದ ಬರಬೇಕಾದ ಪದಾರ್ಥಗಳ ಬಾಕಿ ಹಣವಾಗಲಿ ಇನ್ನಿತರ ಬಾಕಿ ಕ್ಲೈಮ್ಸ್ ಹಾಗೂ ಮಾರುಕಟ್ಟೆಗಳಿಂದ ಬಾಕಿ ಬರಬೇಕಾದ ಲಕ್ಷಾಂತರ, ಕೋಟ್ಯಂತರ ರೂಪಾಯಿಗಳ ಬಗ್ಗೆಯಾಗಲಿ ಯಾವುದೇ ಜವಾಬ್ದಾರಿ ತಕ್ಷಣಕ್ಕೆ ತೆಗೆದುಕೊಳ್ಳದೆ ವಿತರಕರು ಇನ್ನಿಲ್ಲದ ಆರ್ಥಿಕ ಸಂಕಷ್ಟಕ್ಕೆ ಸಿಲುಕಿ ಒದ್ದಾಡುವ ಪರಿಸ್ಥಿತಿಯನ್ನು ತಂದೊಡ್ಡುತ್ತಿದ್ದಾರೆ. ಆದ ಕಾರಣ ಈ ಒಂದು ವಿಷಯದಲ್ಲಿ ವಿತರಕರ ಹಿತರಕ್ಷಣೆ ದೃಷ್ಟಿಯನ್ನು ಮುಖ್ಯವಾಗಿಟ್ಟುಕೊಂಡು ಅವರು ವ್ಯವಹಾರದಲ್ಲಿ ಹೂಡುವ ಲಕ್ಷಾಂತರ, ಕೋಟ್ಯಾಂತರ ರೂಪಾಯಿಗಳ ಬಂಡವಾಳಕ್ಕೆ ಸೂಕ್ತ ಭದ್ರತೆ ಒದಗಿಸಬೇಕೆಂದು ಮನವಿ.

–ಜಿ.ಎಸ್.ಗಣೇಶ್ ರಾವ್, ಮೈಸೂರು ಜಿಲ್ಲಾ ವಿತರಕರ ಸಂಘ, ಮೈಸೂರು.

ರಾಷ್ಟ್ರಕವಿ ಕುವೆಂಪು ಪ್ರತಿಮೆ ಗ್ರಂಥಾಲಯ ಪುನರಾರಂಭಿಸಿ

ಮಾನ್ಯರೆ,



ಮೈಸೂರು ನಗರದ ವಿಶ್ವಮಾನವ ಜೋಡಿ ರಸ್ತೆಯ ರಾಷ್ಟ್ರಕವಿ ಕುವೆಂಪು ಅವರ ಪ್ರತಿಮೆಯ ತಳಭಾಗದಲ್ಲಿರುವ ಸಾರ್ವಜನಿಕ ಗ್ರಂಥಾಲಯ ಕಳೆದ ಎರಡು ತಿಂಗಳಿಂದ ಮುಚ್ಚಿದ್ದು ಕಾರಣ ತಿಳಿದು ಬಂದಿಲ್ಲ. ಹಿರಿಯ ನಾಗರಿಕರೇ ಹೆಚ್ಚಿ ವಾಸ ಮಾಡುವ ಕುವೆಂಪುನಗರದ ಈ ಸಾರ್ವಜನಿಕ ಗ್ರಂಥಾಲಯವು ಬೆಳಗ್ಗೆ ಮತ್ತು ಸಂಜೆ ವೇಳೆ ದಿನಪತ್ರಿಕೆಗಳು ಮತ್ತು ನಿಯತ ಕಾಲಿಕೆಗಳನ್ನು ಓದುವ ಹಿರಿಯ ನಾಗರಿಕರಿಗೆ ಅನುಕೂಲವಿತ್ತು. ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಆಚರಣೆ ಮಾಡುವ ಈ ತಿಂಗಳಲ್ಲೇ ಇದು ಮುಚ್ಚಿರುವುದು ವಿಪರ್ಯಾಸದ ಸಂಗತಿ. ಸಂಬಂಧಿಸಿದ ಅಧಿಕಾರಿಗಳು ಈ ಕೂಡಲೇ ಈ ಗ್ರಂಥಾಲಯದ ತೆರೆದು, ಸಾರ್ವಜನಿಕರ ಸೇವೆಗೆ ಅನುಕೂಲ ಕಲ್ಪಿಸುವ ವ್ಯವಸ್ಥೆ ಮಾಡುವಂತಾಗಲಿ.

–ಬೂಕನಕೆರೆ ವಿಜೇಂದ್ರ, ಕುವೆಂಪು ನಗರ, ಮೈಸೂರು

ತಿದ್ದುಪಡಿ ಹಾಗೂ ಸ್ಪಷ್ಟೀಕರಣ

ಶುಕ್ರವಾರ (ನ.24)ದ 'ಮೈಸೂರು ಮಿತ್ರ' ಸಂಚಿಕೆಯ ಎರಡನೇ ಪುಟದಲ್ಲಿ ಮೈಸೂರು ಬನ್ನಿಮಂಟಪದ ಜೆಎಸ್‌ಎಸ್ ಮೆಡಿಕಲ್ ಕಾಲೇಜು ಶ್ರೀ ರಾಜೇಂದ್ರ ಸಭಾಂಗಣದಲ್ಲಿ **ಕುಷ್ಠರೋಗ ಕುರಿತ ಅಂತರರಾಷ್ಟ್ರೀಯ ಸಮಾವೇಶವನ್ನು** ಕೇಂದ್ರ ರಸಾಯನಿಕ ಮತ್ತು ರಸಗೊಬ್ಬರ ಖಾತೆ ರಾಜ್ಯ ಸಚಿವ ಭಗವಂತ ಖೂಬ ಉದ್ಘಾಟಿಸಿದರು ಎಂದು ವರದಿಯಾಗಿದ್ದು, ಅದನ್ನು **ಕ್ಷಯರೋಗ ಕುರಿತ ಅಂತರರಾಷ್ಟ್ರೀಯ ಸಮಾವೇಶ** ಎಂದು ಓದಿಕೊಳ್ಳುವುದು. ಮಾಹಿತಿ ಕೊರತೆಯಿಂದ ಆದ ತಪ್ಪಿಗೆ ವಿಷಾದಿಸುತ್ತೇವೆ. –**ಸಂಪಾದಕ**



ಕಾರ್ಕಳ ಆನಂದ ಭಟ್
ಮೊ : 7676554198
ಫ್ಲಾಟ್ ನಂ.204, ಮೂರನೇ ಮಹಡಿ, ಏಕದಂತ ಅಪಾರ್ಟ್‌ಮೆಂಟ್ಸ್, Opp. H.P. ಗ್ಯಾಸ್ ಪೆರ್ವಾಜೆ ರಸ್ತೆ, ಕಾರ್ಕಳ– 574 104, ಉಡುಪಿ ಜಿಲ್ಲೆ

ದಿಕ್ಕುದೆಸೆ


ರಾಜಸ್ಥಾನ ಬಿಜೆಪಿಗೆ ಒಲಿಯುವುದೇ?

6

2018ರ ಚುನಾವಣೆಯಲ್ಲಿ ಸುಮಾರು 86 ಚಿಕ್ಕ ಪಕ್ಷಗಳು ಬಿಜೆಪಿ ಹಾಗೂ ಕಾಂಗ್ರೆಸ್‌ನ ಶೇ. 12 ರಷ್ಟು ಮತಗಳಿಗೆ ಕನ್ನ ಹಾಕಿದ್ದವು. ಪಕ್ಷೇತರರು ಕೂಡ ಶೇ.9.47ರಷ್ಟು ಮತ ಗಳಿಸಿ ಹದಿಮೂರು ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದರು. ಬಿಜೆಪಿಯು ಕೇವಲ 73 ಸ್ಥಾನ ಗಳಿಸಿ ದಯನೀಯ ಸೋಲು ಅನುಭವಿಸಿದರೆ ಕಾಂಗ್ರೆಸ್ ಒಂದು ನೂರು ಸ್ಥಾನ ಗಳಿಸಿದರೂ ಬಹುಮತಕ್ಕೆ ಒಂದು ಸ್ಥಾನದ ಕೊರತೆಯಿಂದಾಗಿ ಮುಖ್ಯಮಂತ್ರಿ ಅಶೋಕ ಗೆಹ್ಲೋಟ್‌ರು ಬಿಎಸ್‌ಪಿ ಹಾಗೂ ಪಕ್ಷೇತರರ ಬೆಂಬಲದಿಂದ ಸರಕಾರ ರಚಿಸಿದರು. ಮುಖ್ಯಮಂತ್ರಿ ಸ್ಥಾನದ ತೀವ್ರ ಆಕಾಂಕ್ಷಿಯಾಗಿದ್ದ ಸಚಿನ್ ಪೈಲಟ್‌ರ ಬಂಡಾಯ, ಪಕ್ಷದೊಳಗಿನ ಗುಂಪುಗಾರಿಕೆ, ಆಡಳಿತ ವೈಫಲ್ಯ, ಕಾನೂನು ಮತ್ತು ಶಿಸ್ತಿನ ಪರಿಸ್ಥಿತಿ ನಿಭಾಯಿಸುವಲ್ಲಿ ವೈಫಲ್ಯಗಳ ಹೊರತಾಗಿ ಗೆಹ್ಲೋಟ್‌ರು ಐದು ವರ್ಷಗಳ ಪೂರ್ಣಾವಧಿಗೆ ಮುಖ್ಯಮಂತ್ರಿ ಸ್ಥಾನ ಉಳಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.



ಗೆಹ್ಲೋಟ್



ಸಚಿನ್ ಪೈಲಟ್





ವಸುಂಧರಾ ರಾಜೇ

ರಾಜಸ್ಥಾನ ವಿಧಾನಸಭಾ ಚುನಾವಣೆ ಸನಿಹಕ್ಕೆ ಬಂದಿದ್ದು, ಎಲ್ಲಾ ರಾಜಕೀಯ ಪಕ್ಷಗಳು ವಿಶೇಷವಾಗಿ ಆಳುವ ಕಾಂಗ್ರೆಸ್ ಮತ್ತು ಬಿಜೆಪಿ ಮತದಾರರನ್ನು ಓಲೈಸಲು ಇನ್ನಿಲ್ಲದ ಕಸರತ್ತುಗಳನ್ನು ನಡೆಸುತ್ತಿವೆ. ಈ ತಿಂಗಳ 25 ರಂದು ಒಂದೇ ಹಂತದಲ್ಲಿ ಎಲ್ಲಾ 200 ವಿಧಾನ ಸಭಾ ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ಕಳೆದ ಅನೇಕ ವರ್ಷಗಳಿಂದ ರಾಜಸ್ಥಾನದಲ್ಲಿ ಒಂದೇ ಪಕ್ಷ ನಿರಂತರ ಎರಡನೇ ಅವಧಿಗೆ ಆಯ್ಕೆಯಾಗಿಲ್ಲ. ಈ ಅಲಿಖಿತ ನಿಯಮವನ್ನು ಮುರಿದು ಮತ್ತೆ ಅಧಿಕಾರ ಗಳಿಸಬೇಕೆಂಬ ಛಲದಲ್ಲಿದೆ ಕಾಂಗ್ರೆಸ್. 2013ರಲ್ಲಿ 163 ಸ್ಥಾನಗಳನ್ನು ಪಡೆದು ಪ್ರಚಂಡ ಗೆಲುವು ದಾಖಲಿಸಿದ್ದ ಬಿಜೆಪಿ 2018ರಲ್ಲಿ ರೂಢಿಯಲ್ಲಿದ್ದ ನಿಯಮ ಮುರಿಯಲು ನಡೆಸಿದ ಯತ್ನ ವಿಫಲವಾಗಿ ಕೇವಲ 73 ಸ್ಥಾನ ಗಳಿಸಿ ದಯನೀಯ ಸೋಲು ಅನುಭವಿಸಿತು. ಈ ಬಾರಿ ಬಿಜೆಪಿಯು ಶತಾಯು–ಗತಾಯ ಅಧಿಕಾರಕ್ಕೇರಿ 2024ರ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಮುನ್ನ ಆತ್ಮವಿಶ್ವಾಸ ವೃದ್ಧಿಸಿಕೊಳ್ಳುವ ಯತ್ನದಲ್ಲಿದೆ. ರಾಜ್ಯದಲ್ಲಿ ತೀವ್ರ ಹಣಾಹಣಿ ಬಿಜೆಪಿ–ಕಾಂಗ್ರೆಸ್ ನಡುವೆ ನಡೆಯಲಿದ್ದು, ಪ್ರಾದೇಶಿಕ ನೆಲೆಯಲ್ಲಿ ಕೆಲವು ಸಣ್ಣ ಪಕ್ಷಗಳು ಚುನಾವಣಾ ಕಣದಲ್ಲಿವೆ. ತೃತೀಯ ರಂಗ ರಾಜಸ್ಥಾನದಲ್ಲಿ ಅಸ್ತಿತ್ವದಲ್ಲಿಲ್ಲ. ರಾಜ್ಯದಲ್ಲಿ ಆಮ್ ಆದ್ಮಿ ಪಾರ್ಟಿ, ಬಹುಜನ ಸಮಾಜ ಪಾರ್ಟಿ (ಬಿಎಸ್‌ಪಿ), ಆಜಾದ್ ಸಮಾಜ ಪಾರ್ಟಿ, ಎಐಎಂಐಎಂ, ರಾಷ್ಟ್ರೀಯ ಲೋಕತಾಂತ್ರಿಕ ಪಾರ್ಟಿ ಹಾಗೂ ಜನನಾಯಕ ಪಾರ್ಟಿಯಂತಹ ಕೆಲವು ಪಕ್ಷಗಳು ಚುನಾವಣಾ ಕಣದಲ್ಲಿದ್ದರೂ ಇವುಗಳ ಪ್ರಭಾವ ಸೀಮಿತವಾಗಿದೆ. ಆದರೆ ಕೆಲವು ಕ್ಷೇತ್ರಗಳಲ್ಲಿ ಇವು ಬಿಜೆಪಿ ಅಥವಾ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಹೊಡೆತ ನೀಡಬಹುದು.

2018ರ ಚುನಾವಣೆಯಲ್ಲಿ ಸುಮಾರು 86 ಚಿಕ್ಕ ಪಕ್ಷಗಳು ಬಿಜೆಪಿ ಹಾಗೂ ಕಾಂಗ್ರೆಸ್‌ನ ಶೇ.12ರಷ್ಟು ಮತಗಳಿಗೆ ಕನ್ನ ಹಾಕಿದ್ದವು. ಪಕ್ಷೇತರರು ಕೂಡ ಶೇ.9.47ರಷ್ಟು ಮತ ಗಳಿಸಿ ಹದಿಮೂರು ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದರು. ಬಿಜೆಪಿಯು ಕೇವಲ 73 ಸ್ಥಾನ ಗಳಿಸಿ ದಯನೀಯ ಸೋಲು ಅನುಭವಿಸಿದರೆ ಕಾಂಗ್ರೆಸ್ ಒಂದು ನೂರು ಸ್ಥಾನ ಗಳಿಸಿದರೂ ಬಹುಮತಕ್ಕೆ ಒಂದು ಸ್ಥಾನದ ಕೊರತೆಯಿಂದಾಗಿ ಮುಖ್ಯಮಂತ್ರಿ ಅಶೋಕ ಗೆಹ್ಲೋಟ್‌ರು ಬಿಎಸ್‌ಪಿ ಹಾಗೂ ಪಕ್ಷೇತರರ ಬೆಂಬಲದಿಂದ ಸರಕಾರ ರಚಿಸಿದರು. ಮುಖ್ಯಮಂತ್ರಿ ಸ್ಥಾನದ ತೀವ್ರ ಆಕಾಂಕ್ಷಿಯಾಗಿದ್ದ ಸಚಿನ್ ಪೈಲಟ್‌ರ ಬಂಡಾಯ, ಪಕ್ಷದೊಳಗಿನ ಗುಂಪುಗಾರಿಕೆ, ಆಡಳಿತ ವೈಫಲ್ಯ, ಕಾನೂನು ಮತ್ತು ಶಿಸ್ತಿನ ಪರಿಸ್ಥಿತಿ ನಿಭಾಯಿಸುವಲ್ಲಿ ವೈಫಲ್ಯಗಳ ಹೊರತಾಗಿ ಗೆಹ್ಲೋಟ್‌ರು ಐದು ವರ್ಷಗಳ ಪೂರ್ಣಾವಧಿಗೆ ಮುಖ್ಯಮಂತ್ರಿ ಸ್ಥಾನ ಉಳಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ಮೂರು ದಶಕಗಳಿಂದ ಮುಂದುವರಿದಿರುವ ಪರಿಪಾಠ

ರಾಜಸ್ಥಾನ ಚುನಾವಣಾ ಇತಿಹಾಸವನ್ನು ವಿಶ್ಲೇಷಿಸಿದರೆ 1993 ರಿಂದ ಯಾವುದೇ ಒಂದು ಪಕ್ಷವನ್ನು ನಿರಂತರ ಎರಡನೇ ಅವಧಿಗೆ ರಾಜಸ್ಥಾನಿಗಳು ಆಯ್ಕೆ ಮಾಡಿಲ್ಲ. ಈ ಪರಂಪರೆಯಂತೆ ಹಾಗೂ ಪ್ರಸ್ತುತ ವಿವಿಧ ಸುದ್ದಿ ಮಾಧ್ಯಮಗಳ ಚುನಾವಣಾ ಸಮೀಕ್ಷೆಗಳಂತೆ ಬಿಜೆಪಿ ಬಹುಮತದಿಂದ ಅಧಿಕಾರಕ್ಕೇರುವ ಸಾಧ್ಯತೆಗಳು ನಿಚ್ಚಳವಾಗಿವೆ. 2018ರಲ್ಲಿ ಮತ್ತೆ ಅಧಿಕಾರ ಗಳಿಸುವ ಯತ್ನದಲ್ಲಿ ಬಿಜೆಪಿ ವಿಫಲವಾಯಿತು. ಆದರೆ ಬಿಜೆಪಿ ಮತ್ತು ಕಾಂಗ್ರೆಸ್ ಪಕ್ಷಗಳು ಪಡೆದ ಶೇಕಡವಾರು ಮತಗಳ ಪ್ರಮಾಣದಲ್ಲಿ ಕೇವಲ ಶೇ.0.50ರಷ್ಟು ಅಂತರವಿತ್ತು. ಕಾಂಗ್ರೆಸ್‌ಗೆ ಶೇ.39.06 ಮತಗಳು ಲಭಿಸಿದ್ದರೆ ಬಿಜೆಪಿಗೆ ಶೇ.38.56 ಮತಗಳು ದೊರೆತಿತ್ತು. ಕೇವಲ ಶೇ.0.50 ಮತಗಳ ಅಂತರದಲ್ಲಿ ಬಿಜೆಪಿಯು ತೊಂಬತ್ತು ಸ್ಥಾನಗಳನ್ನು ಕಳೆದುಕೊಂಡು ಪರಾಭವಗೊಂಡಿತು. 2013ರ ಚುನಾವಣೆಯಲ್ಲಿ ಬಿಜೆಪಿ ಶೇ.45.17ರಷ್ಟು ಮತ ಪಡೆದು 163 ಸ್ಥಾನಗಳಲ್ಲಿ ಗೆಲುವು ಸಾಧಿಸಿತ್ತು.

ಕಾಂಗ್ರೆಸ್‌ನ ಗ್ಯಾರಂಟಿ ಆಮಿಷಗಳು

ಗ್ಯಾರಂಟಿ ಯೋಜನೆಗಳಿಂದ ಕರ್ನಾಟಕದಲ್ಲಿ ಸಾಧಿಸಿದ ಅಭೂತಪೂರ್ವ ವಿಜಯದಿಂದ ಉತ್ತೇಜಿತಗೊಂಡಿರುವ ಕಾಂಗ್ರೆಸ್ ರಾಜಸ್ಥಾನದಲ್ಲೂ ಏಳು ಗ್ಯಾರಂಟಿಗಳನ್ನು ಘೋಷಿಸಿದೆ. ಪ್ರತಿ ಕುಟುಂಬದ ಯಜಮಾನಿಗೆ ವರ್ಷಕ್ಕೆ ಹತ್ತು ಸಾವಿರ ರೂ. ನೀಡುವ ಗೃಹಲಕ್ಷ್ಮಿ ಯೋಜನೆ, ರಾಜಸ್ಥಾನದ 1.05 ಕೋಟಿ ಪರಿವಾರಗಳಿಗೆ ರೂ. 500ರಲ್ಲಿ ಅಡುಗೆ ಅನಿಲ, ಛತ್ತೀಸ್‌ಘಡದಲ್ಲಿರುವ ಗೋಧನ ಯೋಜನೆಯಡಿ ಕೆಜಿಗೆ ರೂ. 2ರ ದರದಲ್ಲಿ ದನದ ಸಗಣಿ ಖರೀದಿ ಗ್ಯಾರಂಟಿ. ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್, ಪ್ರಕೃತಿ ವಿಕೋಪವಾದಲ್ಲಿ ಪರಿಹಾರದ ಗ್ಯಾರಂಟಿ. ಇಂಗ್ಲಿಷ್ ಶಿಕ್ಷಣದ ಗ್ಯಾರಂಟಿ ಮತ್ತು ವೃದ್ಧಾಪ್ಯ ವೇತನ ನೀಡುವ ವಾಗ್ದಾನ. ಇವುಗಳಿಗೆ ವಿಶೇಷ ಮಸೂದೆಯನ್ನು ತರುವುದಾಗಿ ಆಶ್ವಾಸನೆ ನೀಡಿದೆ.

ಬಿಜೆಪಿ ಸಂಕಲ್ಪ ಪತ್ರ

ಬಿಜೆಪಿಯು ಕಳೆದ ಗುರುವಾರ ತನ್ನ ಪ್ರಣಾಳಿಕೆ ಬಿಡುಗಡೆ ಮಾಡಿದೆ. ಸಂಕಲ್ಪ ಪತ್ರದಲ್ಲಿರುವಂತೆ ಉಜ್ವಲಾ ಯೋಜನೆಯ ಫಲಾನುಭವಿಗಳಿಗೆ ಪ್ರತಿ ಎಲ್‌ಪಿಜಿ ಸಿಲಿಂಡರ್‌ಗೆ ರೂ. 450 ಸಬ್ಸಿಡಿ, 2.5 ಲಕ್ಷ ಸರಕಾರಿ ಉದ್ಯೋಗ. ರೈತರಿಗೆ ಪಿಎಂ ಕಿಸಾನ್ ಸಮ್ಮಾನ್ ಮೊತ್ತ ರೂ. 6000 ರಿಂದ 12000ಕ್ಕೆ ಹೆಚ್ಚಳ. ಭೂಮಿ ಹರಾಜಾದ ರೈತರಿಗೆ ಹೊಸ ಪರಿಹಾರ ನೀತಿ. ಹೆಣ್ಣು ಮಗುವಿನ ಹೆಸರಲ್ಲಿ ರೂ. 2 ಲಕ್ಷದ ಉಳಿತಾಯ ಬಾಂಡ್, ಬಾಲಕಿಯರಿಗೆ ಸ್ಕೂಟಿ ಹಾಗೂ ಆರು ಲಕ್ಷಕ್ಕೂ ಅಧಿಕ ಮಹಿಳೆಯರಿಗೆ ವಿಶೇಷ ಕೌಶಲ್ಯ ತರಬೇತಿ. ಬಡ ಹೆಣ್ಣು ಮಕ್ಕಳಿಗೆ ಎಲ್‌ಕೆಜಿಯಿಂದ ಸ್ನಾತಕೋತ್ತರ ಪದವಿವರೆಗೆ ಶಿಕ್ಷಣಕ್ಕೆ ನೆರವು, ಒಬಿಸಿ ಕಲ್ಯಾಣ ಯೋಜನೆಯಡಿ ಬಡ ಬಾಲಕರಿಗೆ ಶಿಕ್ಷಣಕ್ಕಾಗಿ 15 ಲಕ್ಷ ರೂ. ವರೆಗೆ ಕೊಲೆಟರಲ್ ಮುಕ್ತ ಶಿಕ್ಷಣ ಸಾಲ ಮೊದಲಾದ ಯೋಜನೆಗಳನ್ನು ಗೆಹ್ಲೋಟ್ ಸರಕಾರ ಸಂಕಲ್ಪ ಪತ್ರದಲ್ಲಿ ನೀಡಿದೆ. ಈ ಆಶ್ವಾಸನೆಗಳೊಂದಿಗೆ ಬಿಜೆಪಿ ಈ ಚುನಾವಣೆಯಲ್ಲಿ ಗೆಹ್ಲೋಟ್ ಸರಕಾರದ ಮಿತಿ ಮೀರಿದ ಭ್ರಷ್ಟಾಚಾರ, ತುಷ್ಟೀಕರಣ, ಮಹಿಳೆಯರ ಮೇಲಿನ ದೌರ್ಜನ್ಯದಲ್ಲಿ ತೀವ್ರ ಏರಿಕೆ, ಪರೀಕ್ಷಾ ಪ್ರಶ್ನೆ ಪತ್ರಿಕೆ ಸೋರಿಕೆ, ನಿರುದ್ಯೋಗ, ಈಡೇರದ ರೈತರ ಸಾಲ ಮನ್ನಾ ಹಾಗೂ ಜಮೀನು ಹರಾಜು ಮೊದಲಾದ ವಿಷಯಗಳನ್ನು ಮುಂದಿಟ್ಟು ಚುನಾವಣಾ ಕಣಕ್ಕಿಳಿದಿದೆ.

ಕಾಂಗ್ರೆಸ್ ಕಲಹ

ರಾಜಸ್ಥಾನದಲ್ಲಿ ಕಾಂಗ್ರೆಸ್ ಗ್ಯಾರಂಟಿ ಯಾತ್ರೆ ನಡೆಸುತ್ತಿದೆ. ಪಕ್ಷವನ್ನು ಮತ್ತೆ ಚುನಾಯಿಸಿದಲ್ಲಿ ಈ ಗ್ಯಾರಂಟಿಗಳನ್ನು ತತ್‌ಕ್ಷಣ ಜಾರಿಗೊಳಿಸಲಾಗುವುದೆಂದು ಮುಖ್ಯಮಂತ್ರಿ ಗೆಹ್ಲೋಟ್ ರ್‍ಯಾಲಿಗಳಲ್ಲಿ ಘೋಷಿಸುತ್ತಿದ್ದಾರೆ. ಕಾಂಗ್ರೆಸ್‌ನ ಮಾಧ್ಯಮ ವಿಭಾಗದ ಪ್ರಮುಖ ಪವನ್ ಖೇಡಾರವರು ಕಾಂಗ್ರೆಸ್ ಪಕ್ಷದ ಪ್ರಚಾರ ಅಭಿಯಾನವನ್ನು 'ಗ್ಯಾರಂಟಿ' ಶಬ್ದದಿಂದಲೇ ಆರಂಭಿಸಲಾಗಿದೆ ಎಂದರು. ಆದರೆ ಅಂತ ಕಲಹದಿಂದಾಗಿ ರಾಜಸ್ಥಾನ ಕಾಂಗ್ರೆಸ್ ಒಡೆದ ಮನೆಯಂತಾಗಿದೆ. ಮುಖ್ಯಮಂತ್ರಿ ಸ್ಥಾನದ ಪ್ರಬಲ ಆಕಾಂಕ್ಷಿಯಾಗಿದ್ದ ಸಚಿನ್ ಪೈಲಟ್ ಹಾಗೂ ಅಶೋಕ್ ಗೆಹ್ಲೋಟ್ ಪರಸ್ಪರ ಕತ್ತಿ ಮಸೆಯುತ್ತಿದ್ದಾರೆ. ವಿಪಕ್ಷ ಬಿಜೆಪಿಗಿಂತ ಸಚಿನ್ ಪೈಲಟ್ ಸರಕಾರವನ್ನು ಕಟುವಾಗಿ ಟೀಕಿಸುತ್ತಿದ್ದಾರೆ. ಪೈಲಟ್‌ರು ಸರಕಾರದ ಪ್ರತಿಯೊಂದು ವೈಫಲ್ಯದ ವಿರುದ್ಧ ಹೋರಾಟ ಮಾಡಿದ್ದಾರೆ. ಆಡಳಿತದಲ್ಲಿ ವ್ಯಾಪಕವಾಗಿರುವ ಭ್ರಷ್ಟಾಚಾರದ ವಿರುದ್ಧ ತನಿಖೆಗೆ ಆಗ್ರಹಿಸಿ ಪೈಲಟ್‌ರು ಮಾಡಿದ ಸತ್ಯಾಗ್ರಹದಿಂದ ಗೆಹ್ಲೋಟ್ ಹಾಗೂ ಕಾಂಗ್ರೆಸ್‌ನ ಕೇಂದ್ರ ನಾಯಕರು ಅಸಮಾಧಾನಗೊಂಡಿದ್ದರು. ರಾಜ್ಯದಲ್ಲಿ ಕಾನೂನು ಮತ್ತು ಶಿಸ್ತು ಕಾಪಾಡುವಲ್ಲಿ ಗೆಹ್ಲೋಟ್ ಸರಕಾರ ಸಂಪೂರ್ಣ ವಿಫಲಗೊಂಡಿತ್ತು. ಮಹಿಳೆಯರ ಮೇಲಿನ ದೌರ್ಜನ್ಯ ಮಿತಿ ಮೀರಿತ್ತು. ಕೇಂದ್ರ ಸಚಿವ ಅರ್ಜುನ್ ಮೇಘವಾಲ್‌ರು ರಾಜಸ್ಥಾನದಲ್ಲಿ ಕಾಂಗ್ರೆಸ್ ಆಡಳಿತದಲ್ಲಿ ಪ್ರತಿದಿನ 17 ಅತ್ಯಾಚಾರ ಕೃತ್ಯ ಮತ್ತು 9 ಹತ್ಯೆ ನಡೆಯುತ್ತಿರುವುದು ದಾಖಲಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಹಿಂದೆ ರಾಜಸ್ಥಾನದ ಕಾಂಗ್ರೆಸ್ ಸಚಿವ ರಾಜೇಂದ್ರ ಗುಧಾ ಮಹಿಳೆಯರಿಗೆ ರಾಜಸ್ಥಾನ ಸುರಕ್ಷಿತವಲ್ಲ ಎಂದು ನೀಡಿದ ಹೇಳಿಕೆಯಿಂದ ತೀವ್ರ ಮುಜುಗರಗೊಂಡಿದ್ದ ಮುಖ್ಯಮಂತ್ರಿ ಗೆಹ್ಲೋಟ್‌ರು ಗುಧಾರನ್ನು ಸಂಪುಟದಿಂದಲೇ ವಜಾಗೊಳಿಸಿದ್ದರು. ಆದರೆ ಸೋನಿಯಾರ ಕೃಪೆ ಹಾಗೂ ವಿಸ್ಮಯವೆಂದರೆ ವಿಪಕ್ಷ ನಾಯಕಿ ಮಾಜಿ ಮುಖ್ಯಮಂತ್ರಿ ವಸುಂಧರಾರಾಜೇಯವರ ಬೆಂಬಲದಿಂದ ಅಶೋಕ್ ಗೆಹ್ಲೋಟ್‌ರು ಪೂರ್ಣಾವಧಿಗೆ ಮುಖ್ಯಮಂತ್ರಿಯಾಗಿ ಪಟ್ಟ ಉಳಿಸಿಕೊಂಡರು. ಈ ಬಾರಿಯ ಚುನಾವಣಾ ಪ್ರಚಾರ ಸಭೆ ರ್‍ಯಾಲಿಗಳಲ್ಲಿ ಸಚಿನ್ ಪೈಲಟ್ ತನ್ನೊಂದಿಗೆ ವೇದಿಕೆಯಲ್ಲಿರಬಾರದೆಂದು ಗೆಹ್ಲೋಟ್‌ರು ಖಡಕ್ಕಾಗಿ ಕೇಂದ್ರ ನಾಯಕತ್ವಕ್ಕೆ ತಿಳಿಸಿರುವುದು ಕಾಂಗ್ರೆಸ್ ಹೀನಾಯ ಪರಾಭವದ ಸಂಕೇತಗಳನ್ನು ನೀಡಿದೆ.

ಬಿಜೆಪಿಯೊಳಗಿನ ಬೇಗುದಿ

2018ರ ಹೀನಾಯ ಪರಾಭವದ ನಂತರ ಮಾಜಿ ಮುಖ್ಯಮಂತ್ರಿ ವಸುಂಧರಾ ರಾಜೇಯವರು ಪಕ್ಷದ ಚಟುವಟಿಕೆಗಳಿಂದ ದೂರ ಉಳಿದರು. ಇದರಿಂದ ಕೇಂದ್ರ ನಾಯಕತ್ವ ರಾಜೇಯವರ ಬಗ್ಗೆ ಅಸಮಾಧಾನಗೊಂಡಿತ್ತು. ರಾಜೇಯವರು ಪಕ್ಷಕ್ಕಿಂತ ಗೆಹ್ಲೋಟ್‌ರು ಮುಖ್ಯಮಂತ್ರಿಯಾಗಿ ಮುಂದುವರಿಯಲು ಗಮನಹರಿಸಿದ್ದೆ ಪಕ್ಷಕ್ಕೆ ಮುಜುಗರವನ್ನುಂಟು ಮಾಡಿತ್ತು. ಹೀಗಾಗಿ ಈ ಬಾರಿಯ ಬಿಜೆಪಿಯ ತಾರಾ ಪ್ರಚಾರಕರ ಪಟ್ಟಿಯಲ್ಲಿ ರಾಜೇ ಹೆಸರಿರಲಿಲ್ಲ ಹಾಗೂ ಚುನಾವಣೆಯಲ್ಲಿ ಸ್ಪರ್ಧಿಸಲು ಟಿಕೆಟ್ ಸಿಗುವ ಬಗ್ಗೆಯೂ ಅನುಮಾನಗಳಿತ್ತು. ಈ ವಿಚಾರವಾಗಿ ಮುಖ್ಯಮಂತ್ರಿ ಗೆಹ್ಲೋಟರು ತನಗೆ ಬೆಂಬಲಿಸಿದ್ದಕ್ಕಾಗಿ ರಾಜೇಯವರಿಗೆ ಟಿಕೆಟ್ ನಿರಾಕರಿಸದಿರಿ ಎಂದು ಬಿಜೆಪಿ ನಾಯಕತ್ವಕ್ಕೆ ಮನವಿ ಮಾಡಿದ್ದರು. ಚುನಾವಣೆ ಘೋಷಣೆಯ ಆರಂಭದಲ್ಲಿ ಬಿಜೆಪಿ ಕೇಂದ್ರ ನಾಯಕತ್ವ ರಾಜೇಯವರಿಗೆ ಟಿಕೆಟ್ ನೀಡದಿರಲು ನಿರ್ಧರಿಸಿತ್ತು. ಆದರೆ ವಸುಂಧರಾ ರಾಜೇಯವರ ರಾಜಮನೆತನಕ್ಕೆ ರಾಜಸ್ಥಾನದ ಕೆಲವು ಪ್ರದೇಶಗಳಲ್ಲಿರುವ ಗೌರವ ಹಾಗೂ ಸ್ವತಃ ರಾಜೇಯವರಿಗೆ ಕೆಲವು ಕ್ಷೇತ್ರಗಳಲ್ಲಿರುವ ವರ್ಚಸ್ಸನ್ನು ಗಮನಿಸಿದ ಪಕ್ಷದ ನಾಯಕತ್ವವು ರಾಜಸ್ಥಾನದಲ್ಲಿ ಯಾವುದೇ ರಿಸ್ಕ್ ತೆಗೆದುಕೊಳ್ಳದಿರಲು ನಿರ್ಧರಿಸಿ, ಎರಡನೇ ಪಟ್ಟಿಯಲ್ಲಿ ವಸುಂಧರ ರಾಜೇ ಮತ್ತವರ ಕೆಲವು ಬೆಂಗಲಿಗರಿಗೆ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ನೀಡಿದೆ. ಪ್ರಸ್ತುತ ರಾಜಸ್ಥಾನ ಬಿಜೆಪಿ ಸಂಘಟಿತವಾಗಿ ಚುನಾವಣೆ ಎದುರಿಸುತ್ತಿದೆ. ಮೋದಿ ಸಹಿತ ಅನೇಕ ಕೇಂದ್ರ ಸಚಿವರು ಹಾಗೂ ಕೆಲವು ಮುಖ್ಯಮಂತ್ರಿಗಳು ಚುನಾವಣಾ ರ್‍ಯಾಲಿಗಳಲ್ಲಿ ಈಗಾಗಲೇ ಭಾಗವಹಿಸಿದ್ದಾರೆ. ರಾಜ್ಯದಲ್ಲಿರುವ ಪರಿಪಾಠ, ಕೇಂದ್ರ ನಾಯಕರ ರ್‍ಯಾಲಿಗಳು ಹಾಗೂ ಮಾಧ್ಯಮಗಳ ಸಮೀಕ್ಷೆ ಪ್ರಕಾರ ರಾಜಸ್ಥಾನದಲ್ಲಿ ಈ ಬಾರಿ ಬಿಜೆಪಿ ಪ್ರಚಂಡ ಬಹುಮತ ಗಳಿಸಿ ಅಧಿಕಾರಕ್ಕೇರುವುದೆಂದು ನಿರೀಕ್ಷಿಸಲಾಗಿದೆ.

ಜೆಎಸ್‌ಎಸ್ ಆಯುರ್ವೇದ ವೈದ್ಯಕೀಯ ಕಾಲೇಜಿನಲ್ಲಿ 93 ಪದವಿ, 17 ಸ್ನಾತಕೋತ್ತರ ಪದವಿ ಪ್ರದಾನ

ವೃತ್ತಿ ನಿರತೆಯಿಂದಲೇ ಕೌಶಲ್ಯತೆ ರೂಢಿಸಿಕೊಳ್ಳಲು ಸಾಧ್ಯ: ನ್ಯಾಷನಲ್ ಕಮಿಷನ್ ಫಾರ್ ಇಂಡಿಯನ್ ಸಿಸ್ಟಮ್ ಆಫ್ ಮೆಡಿಸಿನ್ ಅಧ್ಯಕ್ಷ ಡಾ.ಯು.ರಘುರಾಮ್ ಭಟ್ಟ ಅಭಿಮತ

ಮೈಸೂರು, ನ.24(ಎಂಕೆ)– ಮೈಸೂರಿನ ಲಲಿತಾದ್ರಿಪುರದಲ್ಲಿರುವ ಜೆಎಸ್‌ಎಸ್ ಆಯುರ್ವೇದ ವೈದ್ಯಕೀಯ ಕಾಲೇಜಿನಲ್ಲಿ 93 ಪದವಿ(ಯುಜಿ) ಹಾಗೂ 17 ಸ್ನಾತಕೋತ್ತರ ಪದವಿ(ಪಿಜಿ) ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.

ಕಾಲೇಜು ಆವರಣದಲ್ಲಿ ಶುಕ್ರವಾರ ನಡೆದ ಪದವಿ ಪ್ರದಾನ ಸಮಾರಂಭದಲ್ಲಿ ನವದೆಹಲಿಯ ನ್ಯಾಷನಲ್ ಕಮಿಷನ್ ಫಾರ್ ಇಂಡಿಯನ್ ಸಿಸ್ಟಮ್ ಆಫ್ ಮೆಡಿಸಿನ್ ಅಧ್ಯಕ್ಷ ಡಾ.ಯು.ರಘುರಾಮ್ ಭಟ್ಟ ಪದವಿ ಪ್ರದಾನ ಮಾಡಿದರು. ಪದವಿ ವಿಭಾಗದಲ್ಲಿ 'ಜೀವಿಕೆ' ಅವಾರ್ಡ್, ಬೆಸ್ಟ್ ಔಟ್‌ಗೊಯಿಂಗ್ ಹಾಗೂ ಅತ್ಯುನ್ನತ ಶ್ರೇಣಿ(ಹೊರಹೋಗುವ)ಯ ಪ್ರಶಸ್ತಿ ಹಾಗೂ ಪ್ರಮಾಣ ಪತ್ರವನ್ನು ಡಾ.ಎಂ. ಸ್ಪಂದನ ಪಡೆದರೆ, 'ಆಯುರ್ವಿಷಾದ' ಹಾಗೂ ಅತ್ಯುನ್ನತ ಶ್ರೇಣಿ ಪ್ರಶಸ್ತಿ ಹಾಗೂ ಪ್ರಮಾಣ ಪತ್ರವನ್ನು ಡಾ.ಸಂಜನಾ ಪಡೆದುಕೊಂಡರು.

ಹಾಗೆಯೇ ಡಾ.ಎಸ್.ಅತ್ರಿಯಾ, ಡಾ. ಅನುರಾಧ, ಡಾ.ಜಿ.ಸಿಂಧು ಅತ್ಯುನ್ನತ ಶ್ರೇಣಿ ಪಡೆದರೆ, ಸ್ನಾತಕೋತ್ತರ ಪದವಿ ವಿಭಾಗದ ಬೆಸ್ಟ್ ಔಟ್‌ಗೊಯಿಂಗ್ ಪ್ರಶಸ್ತಿಯನ್ನು ಡಾ.ಎಸ್.ರಾಧಿಕಾ ಹಾಗೂ ಬೆಸ್ಟ್ ಔಟ್‌ಗೊಯಿಂಗ್ ಆಂತರಿಕ(internee) ಪ್ರಶಸ್ತಿಯನ್ನು ಡಾ.ನಾಗರಾಜ್ ಪಡೆದುಕೊಂಡರು.



ಕಲಿಕೆ ನಿರಂತರ ಪ್ರಕ್ರಿಯೆ: ಬಳಿಕ ನ್ಯಾಷನಲ್ ಕಮಿಷನ್ ಫಾರ್ ಇಂಡಿಯನ್ ಸಿಸ್ಟಮ್ ಆಫ್ ಮೆಡಿಸಿನ್ ಅಧ್ಯಕ್ಷ ಡಾ.ಯು.ರಘುರಾಮ್ ಭಟ್ಟ ಅವರು ಮಾತನಾಡಿ, ಪದವಿ, ಸ್ನಾತಕೋತ್ತರ ಪದವಿ ಪಡೆದ ಬಳಿಕ ಕಲಿಕೆ ನಿಂತು ಹೋಯಿತು. ಇನ್ನೂ ಓದುವುದು, ಕಲಿಯುವುದು ಬೇಡ ಎನ್ನಲಾಗುವುದು. ಕಲಿಕೆ ಎಂಬುದು ನಿರಂತರವಾಗಿ ನಡೆಯುವ ಪ್ರಕ್ರಿಯೆ. ನಿರಂತರ ಅಭ್ಯಾಸದಿಂದ ಮಾತ್ರವೇ ವೃತ್ತಿಯಲ್ಲಿ ಕೌಶಲ್ಯತೆಗಳನ್ನು ಅಳವಡಿಸಿಕೊಳ್ಳಲು ಸಾಧ್ಯ. ಆದ್ದರಿಂದ ಪದವಿ ಬಳಿಕ ವೃತ್ತಿಯಲ್ಲಿ ಹೆಚ್ಚಿನ ಸಮಯ ತೊಡಗಿಕೊಳ್ಳುವಂತೆ ಸಲಹೆ ನೀಡಿದರು.

ಅತ್ಯಂತ ಸುಮಧುರ ಭಾಷೆಯಾದ ಸಂಸ್ಕೃತ ಭಾಷೆಯ ಅರಿವು ಆಯುರ್ವೇದ ಅಧ್ಯಯನಕ್ಕೆ ಅತ್ಯಂತ ಅವಶ್ಯವಾಗಿದೆ. ಆಯುರ್ವೇದ ಸಂಬಂಧಿತ ಹೆಚ್ಚಿನ ಅಧ್ಯಯನಗಳು ನಡೆದಿರುವುದು ಸಹ ಸಂಸ್ಕೃತ ಭಾಷೆಯಲ್ಲೇ. ಶ್ಲೋಕಗಳ ಅಧ್ಯಯನ ಹಾಗೂ ಅವುಗಳ ಅರ್ಥ ತಿಳಿಯಬೇಕಾದರೂ ಸಂಸ್ಕೃತ ಅವಶ್ಯವಾಗಿದೆ ಎಂದು ಸಂಸ್ಕೃತ ಭಾಷೆಯ ಮಹತ್ವ ತಿಳಿಸಿದರಲ್ಲದೆ ಸಂಸ್ಕೃತ ಭಾಷೆಯಲ್ಲಿ ಪದವಿ ಪ್ರಮಾಣ ವಚನ ಸ್ವೀಕರಿಸಿದ್ದಕ್ಕಾಗಿ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ಜೆಎಸ್‌ಎಸ್ ಮಹಾವಿದ್ಯಾಪೀಠ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟಸೂರ ಮಠ, ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್.ಮಹೇಶ್, ಡೀನ್ ಡಾ.ರಾಜೇಶ್ ಎ.ಉದಪುಡಿ, ಪ್ರಾಂಶುಪಾಲ ಡಾ.ಸರಬೇಶ್ವರ್ ಕರ್, ಪಿಜಿ ವಿಭಾಗದ ಸಂಚಾಲಕರಾದ ಡಾ.ಎಂ. ಡಿ.ಬೀನಾ, ಆಂತರಿಕ ಸಂಚಾಲಕಿ ಡಾ.ಡಿ. ಸಂಧ್ಯಾರಾಣಿ, ಡಾ.ಬಿ.ಜಿ.ಮಧುಸೂದನ್ ಮತ್ತಿತರರಿದ್ದರು.



ಮೈಸೂರಿನ ಗೋಕುಲಂ ವಾರ್ಡ್ ಸಂಖ್ಯೆ 6ರ ಮಾಜಿ ಕಾರ್ಪೊರೇಟರ್ ಎಸ್‌ಬಿಎಂ ಮಂಜು ಅವರು ನಾರಿ ಶಕ್ತಿ ಮಹಿಳಾ ಸ್ವಸಹಾಯ ಸಂಘವನ್ನು ಉದ್ಘಾಟಿಸಿದರು. ಈ ವೇಳೆ ಸಂಘದ ಅಧ್ಯಕ್ಷೆ ಶಾಂತಮ್ಮ, ಉಪಾಧ್ಯಕ್ಷೆ ಸುಧಾ, ಕಾರ್ಯದರ್ಶಿ ವಿದ್ಯಾ ಕೇಶವ ಪ್ರಸಾದ್, ಸದಸ್ಯರಾದ ಜ್ಯೋತಿ, ಮಧು, ಶೋಭಾ, ಅರ್ಚನಾ, ಸೌಮ್ಯ ಲಕ್ಷ್ಮಿ, ನೇತ್ರಾವತಿ ಇನ್ನಿತರರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 25 ಶನಿವಾರ 2023

ಸಂಪುಟ: 44 | ಸಂಚಿಕೆ: 218 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ– ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871


ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಕಾದಾಟದಲ್ಲಿ ಗಾಯಗೊಂಡ ಹುಲಿ ಸಾವು

● ಕಾಡಂಚಿನ ಮದ್ದೂರು ಕಾಲೋನಿ ಗ್ರಾಮದಲ್ಲಿ ಘಟನೆ ● ಸೆರೆ ಹಿಡಿಯುವ ಮುನ್ನವೇ ಸಾವು ● ಇದು 3 ವರ್ಷದ ಗಂಡು ಹುಲಿ

ಬಂಡೀಪುರ,ನ.24(ಎಂಟಿವೈ)– ಸರಹದ್ದಿಗಾಗಿ ಕಾದಾಟ ನಡೆಸಿ ಗಂಭೀರವಾಗಿ ಗಾಯಗೊಂಡಿದ್ದ 3 ವರ್ಷದ ಗಂಡು ಹುಲಿ, ಕಾಡಂಚಿನ ಗ್ರಾಮದ ಹೊಲದಲ್ಲಿ ನರಳಿ ನರಳಿ ಮೃತಪಟ್ಟಿದೆ. ಈ ಘಟನೆ ಶುಕ್ರವಾರ ಬೆಳಗ್ಗೆ ನಡೆದಿದೆ. ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮದ್ದೂರು ವಲಯ ವ್ಯಾಪ್ತಿಯ ಕಾಡಂಚಿನ ಗ್ರಾಮ ಮದ್ದೂರು ಕಾಲೋನಿಯ ಅರಣ್ಯ ಡಿ–ಲೈನ್ ಸಮೀಪದ ದೊಡ್ಡಕರಿಯಯ್ಯ ಎಂಬುವರ ಜಮೀನಿನಲ್ಲಿ ಶುಕ್ರವಾರ ಬೆಳಗ್ಗೆ ಗಂಭೀರವಾಗಿ ಗಾಯಗೊಂಡು ನಿತ್ರಾಣಗೊಂಡಿದ್ದ ಹುಲಿಯೊಂದು ಸ್ಥಳೀಯರಿಗೆ ಕಂಡು ಬಂದಿದೆ. ಆ ಹುಲಿ ಮುಂದೆ ಸಾಗಲು ಸಾಧ್ಯ







ವಾಗದ ಸ್ಥಿತಿಯಲ್ಲಿರುವುದನ್ನು ಗಮನಿಸಿದ ಗ್ರಾಮಸ್ಥರು ಬಂಡೀಪುರದ ಮದ್ದೂರು ವಲಯದ ಸಿಬ್ಬಂದಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಆಗಮಿಸಿದ ಅರಣ್ಯ ಸಿಬ್ಬಂದಿ, ಮೇಲಾಧಿಕಾರಿಗಳಿಂದ ಹುಲಿ ರಕ್ಷಣೆಗೆ ಅನುಮತಿ ಪಡೆದು ಕಾರ್ಯಾಚರಣೆಗೆ ಸಿದ್ಧತೆ ಮಾಡಿಕೊಳ್ಳುತ್ತಿರುವಂತೆಯೇ ಹುಲಿ ಕೊನೆಯುಸಿರೆಳೆದಿದೆ. ಬಳಿಕ ಬಂಡೀಪುರದ ಪಶುವೈದ್ಯ ● 10ನೇ ಪುಟಕ್ಕೆ

ಹೆಡಿಯಾಲ ಬಳಿ ಹುಲಿ ದಾಳಿ: ರೈತ ಮಹಿಳೆ ಬಲಿ

● ಅರಣ್ಯ ಇಲಾಖೆ ಸಿಬ್ಬಂದಿ ನಿರ್ಲಕ್ಷ್ಯ ಖಂಡಿಸಿ ಗ್ರಾಮಸ್ಥರ ಪ್ರತಿಭಟನೆ
● ಹುಲಿ ಸೆರೆ ಹಿಡಿಯುವ ಭರವಸೆ; 15 ಲಕ್ಷ ಪರಿಹಾರ ಕಲ್ಪಿಸುವ ಆಶ್ವಾಸನೆ

ನಂಜನಗೂಡು, ನ.24– ಇತ್ತೀಚೆಗೆ ರೈತನ ಮೇಲೆ ದಾಳಿ ನಡೆಸಿ, ಎತ್ತೊಂದನ್ನು ಹುಲಿ ಬಲಿ ಪಡೆದಿತ್ತು. ಅದನ್ನು ಅರಣ್ಯ ಇಲಾಖೆ ಗಂಭೀರವಾಗಿ ಪರಿಗಣಿಸದೇ ಹೋಗಿದ್ದರಿಂದ ಇಂದು ದನಗಾಹಿ ಮಹಿಳೆಯೊಬ್ಬರನ್ನು ಹುಲಿ ಬಲಿ ಪಡೆದಿದೆ. ಈ ಘಟನೆ ತಾಲೂಕಿನ ಬಳ್ಳೂರು ಹುಂಡಿ ಗ್ರಾಮದಲ್ಲಿ ನಡೆದಿದೆ. ಈ ಭಾಗದಲ್ಲಿ ಹುಲಿ ಹಾವಳಿ ಬಗ್ಗೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ಇದ್ದರೂ, ಅದರ ಸೆರೆಗಾಗಿ ಕನಿಷ್ಠ ಪಕ್ಷ ಬೋನ್ ಕೂಡ ಇಡಲಿಲ್ಲ. ಹುಲಿ ದಾಳಿ ನಡೆಸಿದ್ದ ವೇಳೆ ಸಾಕಾನೆ ಮೂಲಕ ಹುಲಿ ಸೆರೆ ನಾಟಕವಾಡಿದ ಅರಣ್ಯ ಸಿಬ್ಬಂದಿ, ಗ್ರಾಮೀಣ ● 10ನೇ ಪುಟಕ್ಕೆ


ರತ್ನಮ್ಮ

ಶಕ್ತಿಯಡಿ ಶತಕೋಟಿ ಮಹಿಳೆಯರ ಉಚಿತ ಬಸ್ ಪ್ರಯಾಣ

ಶತಕೋಟಿ ಸಂಭ್ರಮ ಸಮಾರಂಭದಲ್ಲಿ ಅಪಘಾತರಹಿತ ಬಸ್ ಚಾಲನೆಗಾಗಿ 83 ಚಾಲಕರಿಗೆ ಚಿನ್ನದ ಪದಕ ಪ್ರದಾನ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ




ಬೆಂಗಳೂರು, ನ. 24 (ಕೆಎಂಶಿ)–ರಾಜ್ಯದಲ್ಲಿ ಗ್ಯಾರಂಟಿ ಯೋಜನೆ ಜಾರಿ ಆಗೋದಿಲ್ಲ, ಜಾರಿ ಆದರೆ ರಾಜ್ಯ ಆರ್ಥಿಕವಾಗಿ ದಿವಾಳಿ ಆಗುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಸೇರಿ ಬಿಜೆಪಿ ನಾಯಕರು ಆಡಿಕೊಂಡಿದ್ದರು. ಈಗ ನಾಡು ಶತಕೋಟಿ ಸಂಭ್ರಮ ಆಚರಿಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಟೀಕಿಸಿದರು.



ಸಾರಿಗೆ ಇಲಾಖೆ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಂಡಿದ್ದ ಶಕ್ತಿ ಯೋಜನೆಯ ಶತಕೋಟಿ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಅಪಘಾತರಹಿತ 83 ಚಾಲಕರಿಗೆ ಚಿನ್ನದ ಪದಕ ಪ್ರದಾನ ಮಾಡಿ ಮಾತನಾಡಿದರು. ದೇಶದ ಯಾವ ಸರ್ಕಾರಗಳೂ ಹಿಂದೆಂದೂ ಮಾಡದ ಸಾಧನೆಯನ್ನು ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಆರೇ ತಿಂಗಳಲ್ಲಿ ಸಾಧಿಸಿ ತೋರಿಸಿದೆ ಅದರ ದಾಖಲೆ ಕಣ್ಣ ಮುಂದಿದೆ. ಬಿಜೆಪಿಯವರು ನಿರ್ಲಜ್ಜವಾಗಿ ಸುಳ್ಳು ಹೇಳುವುದನ್ನು ನಿಲ್ಲಿಸಬೇಕು ಎಂದರು. ಜೂನ್ 11ಕ್ಕೆ 'ಶಕ್ತಿ' ಯೋಜನೆ ಜಾರಿ ಆಯಿತು. ನವೆಂಬರ್ 23ಕ್ಕೆ 100 ಕೋಟಿ 47 ಲಕ್ಷ ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದಾರೆ. ದಾಖಲೆಗಳು ಕಣ್ಣ ಮುಂದಿವೆ. ಆದರೂ ಈ ಬಿಜೆಪಿ ನಾಯಕರು ಯಾಕಿಷ್ಟು ಸುಳ್ಳು ಹೇಳುತ್ತಾರೆ ಎಂದು ಪ್ರಶ್ನಿಸಿದರು. ಬಸ್ ಪ್ರಯಾಣಿಕರಲ್ಲಿ ಶೇ.55ರಷ್ಟು ಉಚಿತ ಬಸ್ ಪ್ರಯಾಣ ಮಾಡಿದ ಮಹಿಳೆಯರೇ ಸೇರಿದ್ದಾರೆ. ಮಹಿಳೆಯರಿಗೆ ಆರ್ಥಿಕವಾಗಿ ಶಕ್ತಿ ತುಂಬುವುದು ನಮ್ಮ ಗುರಿ. ವಿರೋಧ ಪಕ್ಷದವರ ಹೊಟ್ಟೆಕಿಚ್ಚಿನ ಟೀಕೆಗಳಿಗೆ ನಾವು ತಲೆ ಕೆಡಿಸಿಕೊಳ್ಳುವುದಿಲ್ಲ ಎಂದರು. ● 10ನೇ ಪುಟಕ್ಕೆ

ಡಿ.ಕೆ.ಶಿವಕುಮಾರ್ ವಿರುದ್ಧ ಸಿಬಿಐ ತನಿಖೆಗೆ ನೀಡಿದ್ದ ಅನುಮತಿ ವಾಪಸ್ ಕಾನೂನು ಬಾಹಿರ





ಬೆಂಗಳೂರು: ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧದ ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣಕ್ಕೆ ಸಂಬಂಧಿಸಿ ಸಿಬಿಐ ತನಿಖೆಗೆ ನೀಡಿದ್ದ ಅನುಮತಿ ವಾಪಸ್ ಪಡೆಯುವ ಕಾಂಗ್ರೆಸ್ ಸರ್ಕಾರದ ನಿರ್ಧಾರ ಅಕ್ರಮ ಮತ್ತು ಕಾನೂನಿಗೆ ವಿರುದ್ಧವಾಗಿದೆ ಎಂದು ವಿರೋಧ ಪಕ್ಷ ಬಿಜೆಪಿ ಟೀಕಿಸಿದೆ. ಈ ಬಗ್ಗೆ ಸುದ್ದಿಗೋಷ್ಠಿಯಲ್ಲಿ ಇಂದು ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ಡಿ.ಕೆ.ಶಿವಕುಮಾರ್ ಅವರಿಗೆ ಚಿನ್ನದಂತಹ ಅವಕಾಶವಿದೆ. ತಾವು ಸತ್ಯ ಹರಿಶ್ಚಂದ್ರ ಅಂತ ಸಾಬೀತು ಮಾಡುವ ಅವಕಾಶ ಇದೆ. ನೀವು ತಪ್ಪು ಮಾಡಿಲ್ಲ ಅನ್ನೋದನ್ನು ತನಿಖೆ ಎದುರಿಸಿ ತೋರಿಸಲಿ. ನಮ್ಮ ಅವಧಿಯಲ್ಲಿ ತೆಗೆದುಕೊಂಡ ನಿರ್ಧಾರ ರಾಜಕೀಯ ಪ್ರೇರಿತವಲ್ಲ. ಪ್ರಾಥಮಿಕ ತನಿಖೆ ಮಾಹಿತಿ ಆಧರಿಸಿ ಸಿಬಿಐ ತನಿಖೆಗೆ ಕೊಡಲಾಗಿತ್ತು ಎಂದು ಹೇಳಿದರು.

ಕುಮಾರಸ್ವಾಮಿ ಟೀಕೆ: ಮಾಜಿ ಸಿಎಂ ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್.ಡಿ.ಕುಮಾರಸ್ವಾಮಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಕೀಲರಾಗಿ, ಉಪನ್ಯಾಸಕರಾಗಿ ಕೆಲಸ ಮಾಡಿದ್ದಾರೆ. ಸಚಿವ ಸಂಪುಟದ ನಿರ್ಧಾರ ಸರಿಯಿಲ್ಲ, ಈ ಬಗ್ಗೆ ಸುಪ್ರೀಂ ಕೋರ್ಟ್, 2 ಬಾರಿ ಹೈಕೋರ್ಟ್ ತೀರ್ಪನ್ನು ಉಲ್ಲೇಖಿಸಿದ ನಿದರ್ಶನಗಳಿವೆ. ಪ್ರಕರಣ ನ್ಯಾಯಾಲಯ ದಲ್ಲಿರುವಾಗ, ಸರ್ಕಾರ ಸಚಿವ ಸಂಪುಟದಲ್ಲಿ ತೆಗೆದುಕೊಂಡ ತೀರ್ಮಾನ ತಪ್ಪಾಗುತ್ತದೆ. ಸರ್ಕಾರ ಕಾನೂನಿಗಿಂತ ಮೇಲಿದ್ದಾರೆಂದು ಪ್ರದರ್ಶಿಸಲಾಗುತ್ತಿದೆ.

ಜಯಪ್ರಕಾಶ್ ಹೆಗ್ಡೆ ಸೇವಾವಧಿ ಎರಡು ತಿಂಗಳು ವಿಸ್ತರಣೆ



ಬೆಂಗಳೂರು: ಜಾತಿ ಗಣತಿ ವರದಿ ಕುರಿತಂತೆ ವ್ಯಾಪಕ ಚರ್ಚೆಗಳಾಗುತ್ತಿರುವ ಹೊತ್ತಿನಲ್ಲೇ ರಾಜ್ಯ ಸರ್ಕಾರ ಕರ್ನಾಟಕ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಅವರ ಅಧಿಕಾರಾವಧಿಯನ್ನು ವಿಸ್ತರಿಸಿದೆ.

ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಅವರ ಅಧಿಕಾರಾವಧಿಯನ್ನು 2024ರ ಜನವರಿ 31 ರವರೆಗೆ ವಿಸ್ತರಿಸಲಾಗಿದೆ. ಅವರ ಅವಧಿ ಇಂದಿಗೆ ಮುಕ್ತಾಯಗೊಳ್ಳುತ್ತಿತ್ತು. ಮೂಲಗಳ ಪ್ರಕಾರ ಈ ಹಿಂದೆಯೇ ಸಿಎಂ ಸಿದ್ದರಾಮಯ್ಯ ಈ ಸಂಬಂಧ ಮೌಖಿಕವಾಗಿ ಮುಂದುವರಿಯುವಂತೆ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಅವರಿಗೆ ಸೂಚಿಸಿದ್ದರು. ಆದರೆ, ಈ ಸಂಬಂಧ ಸರ್ಕಾರದಿಂದ ಅಧಿಕೃತ ಆದೇಶ ಹೊರಬಿದ್ದಿರಲಿಲ್ಲ. ಸಿಎಂ ಸಿದ್ದರಾಮಯ್ಯ ನೇತೃತ್ವದ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತ ಮಹತ್ವದ ನಿರ್ಣಯ ಕೈಗೊಳ್ಳಲಾಗಿತ್ತು. ಈ ಮೂಲಕ ಡಿಸೆಂಬರ್ ಒಳಗೆ ಜಾತಿ ಗಣತಿ ವರದಿಯನ್ನು (Caste Census Report) ಸ್ವೀಕರಿಸಲು ಸಿಎಂ ಸಿದ್ದರಾಮಯ್ಯ ಸರ್ಕಾರ ನಿರ್ಧರಿಸಿದೆ. ಈ ಸಂಬಂಧ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಅವರು ನವೆಂಬರ್ 22ರಂದು ● 10ನೇ ಪುಟಕ್ಕೆ

ದೌರ್ಜನ್ಯ ಪ್ರಕರಣಗಳಿಗೆ ಎಸ್ಪಿ, ಡಿಸಿ ಹೊಣೆ

ಸಮಾಜ ಕಲ್ಯಾಣ ಸಚಿವರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಎಚ್ಚರಿಕೆ



ಮೈಸೂರು, ನ. 24(ಆರ್‌ಕೆ)–ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ದೌರ್ಜನ್ಯ ಕಾಯ್ದೆಯಡಿ ಜಾತಿ ನಿಂದನೆ ಪ್ರಕರಣಗಳನ್ನು ಸರಿಯಾಗಿ ತನಿಖೆ ಮಾಡದೇ ನಿರ್ಲಕ್ಷ್ಯ ವಹಿಸಿದರೆ ಆಯಾ ಜಿಲ್ಲೆಯ ಎಸ್ಪಿ ಹಾಗೂ ಜಿಲ್ಲಾಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಸಮಾಜ ಕಲ್ಯಾಣ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಇಂದಿಲ್ಲಿ ಎಚ್ಚರಿಕೆ ನೀಡಿದ್ದಾರೆ.

ಮೈಸೂರಿನ ಮುಕ್ತ ವಿಶ್ವವಿದ್ಯಾನಿಲಯದ ಆಡಳಿತ ಕಚೇರಿ ಸಭಾಂಗಣದಲ್ಲಿ ಮೈಸೂರು ವಿಭಾಗದ ಸಮಾಜ ಕಲ್ಯಾಣ ಇಲಾಖೆ ಹಾಗೂ ಅದರಡಿ ಬರುವ ನಿಗಮ ಮಂಡಳಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ವಿಡಿಯೋ ಕಾನ್ಫರೆನ್ಸ್ ಮೂಲಕ 8 ಜಿಲ್ಲೆಗಳ ಡಿಸಿ, ಎಸ್ಪಿಗಳೊಂದಿಗೆ ಎಸ್ಸಿ, ಎಸ್ಟಿ ದೌರ್ಜನ್ಯ ಪ್ರಕರಣಗಳ ತನಿಖಾ ಸ್ಥಿತಿಗತಿಗಳ ಬಗ್ಗೆ ಮಾಹಿತಿ ಪಡೆದರು.

ಕಾಯ್ದೆಯಡಿ ಜಾತಿ ನಿಂದನೆ ದೂರು ನೀಡಿದ ತಕ್ಷಣ ಎಫ್‌ಐಆರ್ ಮಾಡಿ ತನಿಖೆ ನಡೆಸಿದ ಬಳಿಕ ನಿಗದಿತ ಅವಧಿಯೊಳಗಾಗಿ ನ್ಯಾಯಾಲಯಕ್ಕೆ ಆರೋಪಿತರ ವಿರುದ್ಧ ದೋಷಾರೋಪಣಾ ಪಟ್ಟಿ ಸಲ್ಲಿಸಬೇಕು. ಅಗತ್ಯ ಸಾಕ್ಷ್ಯಾಧಾರಗಳನ್ನು ಒದಗಿಸಿ ಶಿಕ್ಷೆಯಾಗುವಂತೆ ಮಾಡಬೇಕು. ಆದರೆ, ಅಟ್ರಾಸಿಟಿ ಪ್ರಕರಣಗಳಲ್ಲಿ ತನಿಖಾಧಿಕಾರಿಗಳು ನಿರ್ಲಕ್ಷ್ಯ ಮಾಡುತ್ತಿರುವುದರಿಂದ ಆರೋಪಿತರು ರಾಜಾರೋಷವಾಗಿ ಓಡಾಡುತ್ತಿರುವುದು ವರದಿಯಾಗಿದೆ ಎಂದು ಸಚಿವರು ತಿಳಿಸಿದರು.

ನಿಯಮಾನುಸಾರ ಕ್ರಮ ವಹಿಸದೇ ಬಾಕಿ ಉಳಿದಿರುವ ಪ್ರಕರಣಗಳನ್ನು ತನಿಖೆ ಮಾಡಿ 60 ದಿನದೊಳಗಾಗಿ ದೋಷಾರೋಪಣಾ ಪಟ್ಟಿ ಸಲ್ಲಿಸಬೇಕು. ನಿರ್ಲಕ್ಷ್ಯ ● 10ನೇ ಪುಟಕ್ಕೆ

ಹಾಸ್ಟೆಲ್‌ಗಳಲ್ಲಿ ಗುಣಮಟ್ಟದ ಆಹಾರ ಕಲ್ಪಿಸಿ

ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಸೂಚನೆ

ಮೈಸೂರು, ನ. 24(ಆರ್‌ಕೆ)– ಸಮಾಜ ಕಲ್ಯಾಣ ಇಲಾಖೆಯಡಿ ಬರುವ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ ಹಾಗೂ ವಿದ್ಯಾಭ್ಯಾಸಕ್ಕೆ ಉತ್ತಮ ವಾತಾವರಣ ಒದಗಿಸಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಇಂದಿಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಮಂಡ್ಯ ಮತ್ತು ಚಾಮರಾಜನಗರ ಜಿಲ್ಲೆಗಳ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್‌ಗಳಲ್ಲಿ ಮಂಜೂರಾತಿಗಿಂತ ಕಡಿಮೆ ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದಾರೆ. ಆದರೆ ಅತೀ ಹೆಚ್ಚು ಎಸ್ಸಿ, ಎಸ್ಟಿ ಜನಸಂಖ್ಯೆ ಇರುವ ಚಾಮರಾಜನಗರದಲ್ಲಿ ವಿದ್ಯಾರ್ಥಿಗಳಿಗೆ ಕಲಿಕಾ ಸೌಲಭ್ಯ ದೊರೆಯುತ್ತಿಲ್ಲವೆಂದರ್ಥ. ಹಾಗಾದರೆ ಇಲಾಖೆ ಅನುದಾನ ಏಕೆ ಕೊಡಬೇಕು ಎಂದು ಪ್ರಶ್ನಿಸಿದರು. ಮೈಸೂರು ಮತ್ತು ಹಾಸನ ಜಿಲ್ಲೆಗಳಲ್ಲಿ ಮಂಜೂರಾತಿಗಿಂತ ಹೆಚ್ಚು ವಿದ್ಯಾರ್ಥಿಗಳಿಗೆ ಅವಕಾಶ ನೀಡಿರುವುದು ಸರಿಯಷ್ಟೇ. ಆದರೆ ಸೂಕ್ತ ಸೌಲಭ್ಯದ ಕೊರತೆಯಾಗಿ ಅವರ ಕಲಿಕೆ ● 10ನೇ ಪುಟಕ್ಕೆ

ಜಾತಿ ಗಣತಿ ವರದಿ ಸರ್ಕಾರದ ಕೈಸೇರುವ ಮುನ್ನವೇ ವಿರೋಧಿಸುವುದು ಎಷ್ಟು ಸರಿ?

ಮೈಸೂರು, ನ.24(ಆರ್‌ಕೆ)–ಜಾತಿ ಗಣತಿ ವರದಿ ಸರ್ಕಾರದ ಕೈಸೇರುವ ಮುನ್ನವೇ ವಿರೋಧಿಸುತ್ತಿರುವುದು ಸರಿಯೇ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಇಂದಿಲ್ಲಿ ಪ್ರಶ್ನಿಸಿದ್ದಾರೆ.

ಮೈಸೂರಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದ ಅವರು, ಜಾತಿ ಗಣತಿ ವರದಿ ಇನ್ನೂ ಸರ್ಕಾರಕ್ಕೆ ಸಲ್ಲಿಕೆಯಾಗಿಲ್ಲ, ಅದರಲ್ಲೇನಿದೆ ಎಂದು ಇನ್ನು ಯಾರಿಗೂ ತಿಳಿದಿಲ್ಲ. ಊಹೆ ಮಾಡಿಕೊಂಡು ಆರೋಪ ಮಾಡುವುದು ಸರಿಯಲ್ಲ. ಪ್ರತಿಯೊಬ್ಬರಿಗೂ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮಾನತೆ ಸಿಗಬೇಕು. ಈ ರಾಜ್ಯದ ಸೌಲಭ್ಯಗಳನ್ನು ಸಮಾನವಾಗಿ ಹಂಚಿಕೆಯಾಗಬೇಕೆಂಬ ಉದ್ದೇಶದಿಂದ ಜನ, ಜಾತಿ ಗಣತಿ ಮಾಡಲಾಗಿದೆ. ಅದರ ವರದಿ ಬಂದ ಮೇಲಷ್ಟೇ ಅದು ಅನುಕೂಲವೇ, ಅನಾನುಕೂಲವೇ ಎಂದು ತಿಳಿಯುತ್ತದೆ ಎಂದರು. ನಮ್ಮ ಸರ್ಕಾರ ಇದ್ದಾಗ ಈ ಹಿಂದೆ ಸಮೀಕ್ಷೆ ನಡೆಸಿತ್ತು. ವರದಿ ಬಂದಿರಲಿಲ್ಲ. ಈಗ ಸಲ್ಲಿಕೆಯಾಗಬೇಕಿದೆ. ಅಂತಿಮ ವರದಿಗೆ ಕಾಲಾವಕಾಶ ಕೇಳಿದ್ದಾರೆ. ಅದು ಕೈಸೇರುವ ಮುಂಚೆಯೇ ವಿರೋಧಿಸಿದರೆ ಅದೆಲ್ಲಾ ಹೊರಗಿನ ನಿರ್ಧಾರ. ಸಂಪುಟ ಕೈಗೊಳ್ಳುವ ತೀರ್ಮಾನ ಮಾತ್ರ ಸರ್ಕಾರದ ನಿರ್ಧಾರ ಎಂದು ● 10ನೇ ಪುಟಕ್ಕೆ

ಮೈಸೂರು ಮಿತ್ರ

2024ರ ಲೋಕಸಭಾ ಚುನಾವಣೆ: ಮೈಸೂರಲ್ಲಿ ಮತದಾರರ ಜಾಗೃತಿ ಜಾಥಾ

ಡಿ.2,3ರಂದು ಮತದಾರರ ವಿಶೇಷ ನೋಂದಣಿ ಅಭಿಯಾನ



ಮೈಸೂರು, ನ. 24(ಆರ್‌ಕೆ)– ಮುಂಬರುವ 2024ರ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮೈಸೂರಲ್ಲಿ ಮತದಾರರಿಗೆ ಜಾಗೃತಿ ಮೂಡಿಸಲು ಇಂದು ಜಿಲ್ಲಾಡಳಿತವು ಜಾಥಾ ನಡೆಸಿತು.

ಭಾರತ ಚುನಾವಣಾ ಆಯೋಗ, ಮೈಸೂರು ಮಹಾನಗರ ಪಾಲಿಕೆ ಜಿಲ್ಲಾ ಸ್ವೀಪ್ ಸಮಿತಿ, ರೋಟರಿ ಐವರಿ ಸಿಟಿ ಸಹಯೋಗದೊಂದಿಗೆ ಮೈಸೂರಿನ ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಆಯೋಜಿಸಿದ್ದ ಜಾಗೃತಿ ಜಾಥಾ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ. ಕೆ.ವಿ. ರಾಜೇಂದ್ರ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭ ಮಾತನಾಡಿದ ಅವರು, 2024ರಲ್ಲಿ ನಡೆಯಲಿರುವ ಲೋಕಸಭಾ ಚುನಾವಣೆಗೆ ಎಲ್ಲಾ ಅರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಸೇರಿಸಿ, ಪ್ರತಿಯೊಬ್ಬರಿಗೂ ಮತದಾನ ಮಾಡಲು ಅವಕಾಶ ಕಲ್ಪಿಸುವ ಸಲುವಾಗಿ ಜಿಲ್ಲಾಡಳಿತವು ಸರ್ವ ರೀತಿಯಲ್ಲಿ ಸಿದ್ಧತೆ ನಡೆಸುತ್ತಿದೆ. 18 ವರ್ಷ ಪೂರ್ಣಗೊಂಡ ಯುವ ಸಮೂಹವನ್ನು ಮತದಾರರ ಪಟ್ಟಿಗೆ ಸೇರಿಸುವುದು, ಬಿಟ್ಟು ಹೋಗಿರುವವರ ಹೆಸರು ಸೇರ್ಪಡೆ, ಮೃತಪಟ್ಟಿರುವವರ ಹೆಸರನ್ನು ತೆಗೆದುಹಾಕುವ ಮೂಲಕ ಜಿಲ್ಲೆಯಲ್ಲಿರುವ ಯಾವುದೇ ಮತದಾರ ತಮ್ಮ ಹಕ್ಕು ಚಲಾಯಿಸುವ ಪ್ರಕ್ರಿಯೆಯಿಂದ ವಂಚಿತರಾಗಬಾರದೆಂಬ ಕಾರಣಕ್ಕಾಗಿ ಅರಿವು ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಡಿಸೆಂಬರ್ 2 ಮತ್ತು 3ರಂದು ಪ್ರತೀ ಮತಗಟ್ಟೆಗಳಲ್ಲಿ ಮತದಾರರ ವಿಶೇಷ ನೋಂದಣಿ ಮತ್ತು ಪರಿಷ್ಕರಣೆ ನಡೆಯಲಿದ್ದು, ಮತದಾರರು ಅಲ್ಲಿಗೆ ತೆರಳಿ ಮತದಾರರ ಪಟ್ಟಿಯಲ್ಲಿ ಹೆಸರಿರುವುದನ್ನು ಪರಿಶೀಲಿಸಿ ದೃಢಪಡಿಸಿಕೊಳ್ಳಬೇಕು, ಯಾವುದೇ ಬದಲಾವಣೆಗಳಿದ್ದರೆ ಈಗಲೇ ಅರ್ಜಿ ನಮೂನೆಗಳಲ್ಲಿ ಮಾಹಿತಿ ನೀಡಿ ಸರಿಪಡಿಸಿಕೊಳ್ಳಬೇಕು, ಮತದಾನದ ದಿನ ತಮ್ಮ ಹೆಸರಿಲ್ಲ ಎಂಬಿತ್ಯಾದಿ ದೂರು ನೀಡಿದರೆ ಪ್ರಯೋಜನವಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಮತದಾನ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬರೂ ಪಾಲ್ಗೊಂಡು ಮತ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಸದೃಢಪಡಿಸಬೇಕು. ಅದರಲ್ಲೂ ಯುವ ಮತದಾರರ ಜವಾಬ್ದಾರಿ ಅತೀ ಪ್ರಮುಖವಾದುದು. ತಾವು ಮತದಾನ ಮಾಡಿ, ಇತರರಿಗೂ ಪ್ರೇರೇಪಣೆ ಮಾಡುವ ಮೂಲಕ ಮೈಸೂರು ನಗರ ಮತ್ತು ಜಿಲ್ಲೆಯಾದ್ಯಂತ ಹೆಚ್ಚಿನ ಪ್ರಮಾಣದ ಮತದಾನವಾಗಲು ಯುವ ಸಮೂಹ ಮುಂದಾಗಬೇಕು ಎಂದು ಡಾ.ರಾಜೇಂದ್ರ ಇದೇ ವೇಳೆ ತಿಳಿಸಿದರು.

'ಮತದಾನಕ್ಕಿಂತ ಇನ್ನೊಂದಿಲ್ಲ–ನಾನು ಖಚಿತವಾಗಿ ಮತದಾನ ಮಾಡುವೆ' ಘೋಷಣೆಯೊಂದಿಗೆ ಆರಂಭವಾದ ಮತದಾರರ ಜಾಗೃತಿ ಜಾಥಾ ಕೆ.ಆರ್. ಸರ್ಕಲ್, ಡಿ.ದೇವರಾಜ ಅರಸು ರಸ್ತೆ ಮೂಲಕ ಜಿಲ್ಲಾಧಿಕಾರಿಗಳ ಹಳೇ ಕಟ್ಟಡದವರೆಗೆ ಸಾಗಿ ಅಂತ್ಯಗೊಂಡಿತು.

ಶೇಷಾದ್ರಿಪುರಂ ಕಾಲೇಜು ಎನ್‌ಸಿಸಿ ಘಟಕ, ಜೆಎಸ್‌ಎಸ್ ಕಲಾ ಮತ್ತು ವಾಣಿಜ್ಯ ಕಾಲೇಜು ವಿದ್ಯಾರ್ಥಿಗಳು ಜಾಥಾದಲ್ಲಿ ಪಾಲ್ಗೊಂಡು ಮತದಾನದ ಬಗ್ಗೆ ಜನರಲ್ಲಿ ಅರಿವು ಮೂಡಿಸಿದರು. ಜಿಲ್ಲಾ ಸ್ವೀಪ್ ಕಮಿಟಿ ಅಧ್ಯಕ್ಷೆಯಾದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಕೆ.ಎಂ.ಗಾಯತ್ರಿ, ಮೈಸೂರು ಮಹಾನಗರ ಪಾಲಿಕೆ ಉಪ ಆಯುಕ್ತ ಸೋಮಶೇಖರ್, ಹಿರಿಯ ಆರೋಗ್ಯಾಧಿಕಾರಿ ಡಾ. ಎನ್.ಪಿ. ವೆಂಕಟೇಶ್, ಮತದಾನದ ಜಾಗೃತಿ ರಾಯಭಾರಿ ಖುಷಿ, ಅಧಿಕಾರಿಗಳು, ರೋಟರಿ ಮೈಸೂರು ಪದಾಧಿಕಾರಿಗಳು, ಮೈಸೂರು ಹಿಮೋಫಿಲಿಯಾ ಸೊಸೈಟಿ ಅಧ್ಯಕ್ಷ ಮಿತ್ತಲ್ ಸೇರಿದಂತೆ ಇತರರು ಈ ಸಂದರ್ಭ ಪಾಲ್ಗೊಂಡಿದ್ದರು.

ವಿದ್ಯಾರ್ಥಿಗಳು ರ್‍ಯಾಂಕ್ ಪಡೆಯಲಷ್ಟೇ ಸೀಮಿತವಾಗದೇ ಬದುಕು ಕಟ್ಟಿಕೊಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು

ಡಾ.ಸಬಿಹಾ ಭೂಮಿಗೌಡ ಸಲಹೆ



ಮೈಸೂರು, ನ.24(ಎಂಟಿವೈ)– ಶಾಲಾ–ಕಾಲೇಜು ವಿದ್ಯಾರ್ಥಿಗಳು ಕೇವಲ ಪರೀಕ್ಷೆಯಲ್ಲಿ ರ್‍ಯಾಂಕ್ ಗಳಿಸುವುದಕ್ಕಷ್ಟೇ ಸೀಮಿತವಾಗದೇ ಬದುಕು ಕಟ್ಟಿಕೊಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಅಕ್ಕಮಹಾದೇವಿ ಮಹಿಳಾ ವಿವಿ ವಿಶ್ರಾಂತ ಕುಲಪತಿ ಡಾ.ಸಬಿಹಾ ಭೂಮಿಗೌಡ ಸಲಹೆ ನೀಡಿದ್ದಾರೆ.

ಮೈಸೂರಿನ ಮಹಾರಾಣಿ ಮಹಿಳಾ ಕಲಾ ಕಾಲೇಜಿನಲ್ಲಿ ಶುಕ್ರವಾರ ನಡೆದ 2023–24ನೇ ಸಾಲಿನ ಐಕ್ಯೂಎಸಿ ಮತ್ತು ಸಾಂಸ್ಕೃತಿಕ ವೇದಿಕೆ, ಎನ್‌ಎಸ್‌ಎಸ್, ಯುವ ರೆಡ್‌ಕ್ರಾಸ್, ಸ್ಕೌಟ್ಸ್ ಮತ್ತು ಗೈಡ್ಸ್, ಎನ್‌ಸಿಸಿ, ಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ರ್‍ಯಾಂಕ್ ಪಡೆದವರು ಮಾತ್ರ ಬುದ್ಧಿವಂತರು ಎಂದು ತಿಳಿದುಕೊಳ್ಳುವುದು ಸರಿಯಲ್ಲ. ಹೆಚ್ಚು ಅಂಕ ಪಡೆದವರಲ್ಲಿ ಕೆಲ ವಿಷಯಗಳಲ್ಲಿ ಕೌಶಲ್ಯವೇ ಇರುವುದಿಲ್ಲ. ಆದರೆ, ಸಾಂಸ್ಕೃತಿಕ, ಕ್ರೀಡೆ ಸೇರಿದಂತೆ ಇನ್ನಿತರ ವಿಷಯಗಳ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡ ವಿದ್ಯಾರ್ಥಿಗಳಲ್ಲಿ ಬದುಕು ರೂಪಿಸಿಕೊಳ್ಳುವ ಕಲೆ ತಿಳಿದಿರುತ್ತದೆ ಎಂದರು.

ಅಂಕಗಳು ಬದುಕಿನ ಒಂದು ಭಾಗವಷ್ಟೇ. ನಿಮಗೆ ಉದ್ಯೋಗ ನೀಡುವವರು ಅಂಕ ಪಟ್ಟಿ ಹೊರತುಪಡಿಸಿ ನಿಮ್ಮಲ್ಲಿ ಏನೇನು ಕೌಶಲ್ಯವಿದೆ ಎಂಬುದನ್ನು ಗಮನಿಸುತ್ತಾರೆ. ನಾಯಕತ್ವ ಗುಣ, ಸಂವಹನ, ತಂಡ ಸ್ಫೂರ್ತಿ ಸೇರಿದಂತೆ ಇನ್ನಿತರ ವ್ಯಕ್ತಿತ್ವದ ಗುಣ ಅವಲೋಕಿಸುತ್ತಾರೆ. ಹೀಗಾಗಿ, ಪಠ್ಯೇತರ ಚಟುವಟಿಕೆಗಳು ನಿಮ್ಮ ವ್ಯಕ್ತಿತ್ವ ರೂಪಿಸುವುದಲ್ಲದೇ ಆತ್ಮವಿಶ್ವಾಸ ತುಂಬುತ್ತದೆ ಎಂದರು. ಕೋ– ಎಜುಕೇಷನ್ ವ್ಯವಸ್ಥೆಯಲ್ಲಿ ಹೆಣ್ಣು ಮಕ್ಕಳು ಕಲಿಯುವುದಕ್ಕಿಂತ ಮಹಿಳಾ ಕಾಲೇಜಿನಲ್ಲಿ ಕಲಿಯುವವರಿಗೆ ಹೆಚ್ಚಿನ ಅವಕಾಶ ಸಿಗುತ್ತದೆ. ಇದನ್ನು ವಿದ್ಯಾರ್ಥಿನಿಯರು ಸೂಕ್ತ ರೀತಿಯಲ್ಲಿ ಬಳಸಿಕೊಳ್ಳಬೇಕು. ನಾಯಕತ್ವ ಗುಣವನ್ನು ಕಲಿಸಲು ಸಾಧ್ಯವಿಲ್ಲ. ನೀವೇ ನೋಡಿ ಕಲಿಯಬೇಕು. ನನಗೆ ಬರಲ್ಲ ಎಂದರೇ ನಮ್ಮನ್ನು ನಾವೇ ಹಿನ್ನಡೆಯಾಗಿ ಕರೆದುಕೊಂಡು ಹೋಗುತ್ತೇವೆ. ಧನಾತ್ಮಕ ಆಲೋಚನೆ ಇರಬೇಕು ಎಂದು ಅವರು ಕಿವಿಮಾತು ಹೇಳಿದರು.

ಮಹಾರಾಣಿ ಮಹಿಳಾ ಕಲಾ ಕಾಲೇಜಿನಲ್ಲಿ 2700 ಹೆಚ್ಚಿನ ವಿದ್ಯಾರ್ಥಿನಿಯರಿದ್ದು, 400 ವಿದ್ಯಾರ್ಥಿನಿಯರು ಎನ್‌ಎಸ್‌ಎಸ್, 120 ವಿದ್ಯಾರ್ಥಿನಿಯರು ಎನ್.ಸಿ.ಸಿ, 200 ವಿದ್ಯಾರ್ಥಿನಿಯರು ಯುವ ರೆಡ್ ಕ್ರಾಸ್, 45 ವಿದ್ಯಾರ್ಥಿನಿಯರು ಸ್ಕೌಟ್ಸ್ ಮತ್ತು ಗೈಡ್ಸ್‌ನಲ್ಲಿ ತೊಡಗಿಸಿಕೊಂಡಿದ್ದಾರೆ. ಈ ಚಟುವಟಿಕೆಗಳು ವಿದ್ಯಾರ್ಥಿಗಳನ್ನು ಪೂರ್ಣ ವ್ಯಕ್ತಿಯಾಗಿ ರೂಪಿಸುತ್ತೇವೆ.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಡಾ.ಬಿ.ವಿ. ವಸಂತಕುಮಾರ್, ಐಕ್ಯುಎಸಿ ಸಂಯೋಜಕ ಡಾ.ಎನ್. ಪ್ರಕಾಶ್, ಸಾಂಸ್ಕೃತಿಕ ವೇದಿಕೆಯ ಅಧ್ಯಾಪಕ ಕಾರ್ಯದರ್ಶಿ ಎಂ.ನಂಜುಂಡಯ್ಯ, ಅಧ್ಯಾಪಕ ಖಜಾಂಚಿ ಅಶ್ವಿನಿ, ವಿದ್ಯಾರ್ಥಿ ಅಧ್ಯಕ್ಷೆ ರಕ್ಷಿತಾ, ವಿದ್ಯಾರ್ಥಿ ಕಾರ್ಯದರ್ಶಿ ಜಿ.ಎಸ್.ಜೇನುಶ್ರೀ ಇದ್ದರು.

ಮೈಸೂರಲ್ಲಿ ಹಿಮೋಫಿಲಿಯಾ ರೋಗದ ಬಗ್ಗೆ ಜನಜಾಗೃತಿ



ಮೈಸೂರು, ನ. 24(ಆರ್‌ಕೆ)– ಮೈಸೂರಲ್ಲಿ ಹಿಮೋಫಿಲಿಯಾ ರೋಗದ ಬಗ್ಗೆ ಮಾನವ ಸರಪಳಿ ಮೂಲಕ ಇಂದು ಜನಜಾಗೃತಿ ಕಾರ್ಯಕ್ರಮ ನಡೆಯಿತು.

ಮೈಸೂರು ಹಿಮೋಫಿಲಿಯಾ ಸೊಸೈಟಿ ವತಿಯಿಂದ ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ ಬಲೂನುಗಳನ್ನು ಹಾರಿಬಿಡುವ ಮೂಲಕ ಉದ್ಘಾಟಿಸಿದರು.

ಇದೇ ವೇಳೆ ಹಿಮೋಫಿಲಿಯಾ ರೋಗಿಗಳ ಸೇವೆಯ ಸಂಸ್ಥಾಪಕರ ದಿನದ ಅಂಗವಾಗಿ ಅಶೋಕ ವರ್ಮ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತಲ್ಲದೆ, ರಕ್ತದಾನ ಶಿಬಿರ ಏರ್ಪಡಿಸಲಾಗಿತ್ತು. 15 ಮಂದಿ ನೀಡಿದ ರಕ್ತವನ್ನು ಕೆಆರ್ ಆಸ್ಪತ್ರೆ ರಕ್ತನಿಧಿಗೆ ಹಸ್ತಾಂತರಿಸಲಾಯಿತು.

ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ. ಗಾಯತ್ರಿ, ಮೈಸೂರು ಮಹಾನಗರ ಪಾಲಿಕೆ ಉಪ ಆಯುಕ್ತ ಸೋಮಶೇಖರ, ಆರೋಗ್ಯ ಇಲಾಖೆ ಜಂಟಿ ನಿರ್ದೇಶಕಿ ಡಾ. ಹೆಚ್.ಆರ್. ರಾಜೇಶ್ವರಿ ದೇವಿ, ಕೆಆರ್ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕಿ ಡಾ.ಹೆಚ್.ಪಿ. ಶೋಭಾ, ರಕ್ತನಿಧಿ ಅಧಿಕಾರಿ ಡಾ. ಕುಸುಮಾ, ಸ್ಥಾನಿಕ ವೈದ್ಯಾಧಿಕಾರಿ ಡಾ.ನಯಾಜ್ ಪಾಷ, ಮೈಸೂರು ಹಿಮೋಫಿಲಿಯಾ ಸೊಸೈಟಿ ಅಧ್ಯಕ್ಷ ಡಾ. ಎಸ್.ಕೆ. ಮಿತ್ತಲ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ನ.27ರಿಂದ ಮುಖ್ಯಮಂತ್ರಿ ಗೃಹ ಕಚೇರಿ ಕೃಷ್ಣಾದಲ್ಲಿ ಜನತಾ ದರ್ಶನ



ಬೆಂಗಳೂರು, ನ. 24 (ಕೆಎಂಶಿ)–ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನವೆಂಬರ್ 27 ರಂದು ಬೆಳಿಗ್ಗೆ 9.30 ರಿಂದ ಗೃಹ ಕಚೇರಿ ಕೃಷ್ಣಾದಲ್ಲಿ ಜನತಾ ದರ್ಶನ ನಡೆಸಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ. ಜನರ ಬಳಿಗೇ ಆಡಳಿತ ಕೊಂಡೊಯ್ಯುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳು ಎಲ್ಲಾ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳು ಪ್ರತಿ ತಿಂಗಳು ಜನತಾ ದರ್ಶನ ನಡೆಸುವಂತೆ ಸೂಚಿಸಿದ್ದರು. ಇದೀಗ ಸ್ವತಃ ಮುಖ್ಯಮಂತ್ರಿಯವರು ಬೆಂಗಳೂರಿನಲ್ಲಿ ಜನತಾ ದರ್ಶನ ನಡೆಸಿ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ, ಬಗೆಹರಿಸಲು ಕ್ರಮ ಕೈಗೊಳ್ಳಲಿದ್ದಾರೆ.

ಲೋಕಸಭಾ ಚುನಾವಣೆವರೆಗೂ ಜಾತಿಗಣತಿ ನಾಟಕ!



ಬೆಂಗಳೂರು, ನ. 24 (ಕೆಎಂಶಿ)–ಲೋಕಸಭೆ ಚುನಾವಣೆವರೆಗೂ ಈ ಸರಕಾರ ಜಾತಿಗಣತಿ ನಾಟಕ ಆಡುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಟೀಕಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾತಿ ಗಣತಿ ವರದಿಯನ್ನು ಸರಕಾರ ಇನ್ನೂ ನಾಲ್ಕು ತಿಂಗಳು ಅಧ್ಯಯನ ಮಾಡುವುದಾಗಿ ಹೇಳುತ್ತಿದೆ. ನನ್ನ ಪ್ರಕಾರ ಲೋಕಸಭೆ ಚುನಾವಣೆ ತನಕ ಇದು ಏನೂ ಆಗಲ್ಲ. ಯಾರೂ ಗಾಬರಿ ಆಗಬೇಕಾದ ಅವಶ್ಯಕತೆ ಇಲ್ಲ. ಈ ಸರಕಾರದ ಕೈಯ್ಯಲ್ಲಿ ಏನೂ ಆಗಲ್ಲ ಎಂದು ಅವರು ಹೇಳಿದರು. ಇದೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2018ರಲ್ಲಿ ಕಾಂತರಾಜು ವರದಿ ಕೊಡಲು ಬಂದಾಗ ಆ ವರದಿಯನ್ನು ಕುಮಾರಸ್ವಾಮಿ ಸ್ವೀಕರಿಸಿಲ್ಲ ಎಂದು ಹೇಳುತ್ತಿದ್ದಾರೆ. ಹಾಗಾದರೆ, ಆಗಲೇ ವರದಿ ಸಿದ್ಧವಾಗಿತ್ತಲ್ವಾ? ನಿಮ್ಮ ಸರಕಾರ ಬಂದು 6 ತಿಂಗಳಾಗಿದೆ, ಇನ್ನೂ ಯಾಕೆ ವರದಿ ಸ್ವೀಕಾರ ಮಾಡಿಲ್ಲ ಎಂದು ಅವರು ನೇರವಾಗಿ ಸಿದ್ದರಾಮಯ್ಯ ಅವರನ್ನೇ ಪ್ರಶ್ನೆ ಮಾಡಿದರು.

ವಿಕ್ರಂ ಅಯ್ಯಂಗಾರ್‌ಗೆ ಕನ್ನಡ ಸಿರಿ ಪ್ರಶಸ್ತಿ



ಮೈಸೂರು, ನ. 24– ಶ್ರೀ ರಾಜಮಾತಾ ಸಂಸ್ಥೆ ವತಿಯಿಂದ ಪ್ರತಿ ವರ್ಷ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವವರನ್ನು ಗುರುತಿಸಿ ಕೊಡ ಮಾಡುವ ರಾಜ್ಯ ಮಟ್ಟದ ಕನ್ನಡ ಸಿರಿ ಪ್ರಶಸ್ತಿಗೆ ಸಾಮಾಜಿಕ ಕ್ಷೇತ್ರ, ಸಂಘಟನಾ ಕ್ಷೇತ್ರ, ಹವ್ಯಾಸಿ ಬರಹಗಾರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಕೆಆರ್ ಮೊಹಲ್ಲಾದ ನಿವಾಸಿ ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷರು ಹಾಗೂ ಸಾಮಾಜಿಕ ಹೋರಾಟಗಾರರಾದ ವಿಕ್ರಂ ಅಯ್ಯಂಗಾರ್ ಅವರಿಗೆ ನ.26ರಂದು ಶಿವಮೊಗ್ಗದಲ್ಲಿ ನಡೆಯುವ ಅಪ್ಪು ನಮನ ಹಾಗೂ ಕರುನಾಡ ಹಬ್ಬದ ಕಾರ್ಯಕ್ರಮದಲ್ಲಿ ಕನ್ನಡ ಸಿರಿ ಪುರಸ್ಕಾರವನ್ನು ಪ್ರದಾನ ಮಾಡಲಾಗುವುದು ಎಂದು ಶ್ರೀ ರಾಜಮಾತಾ ಸಂಸ್ಥೆಯ ಅಧ್ಯಕ್ಷರಾದ ರಾಜಮಾತಾ ತಿಳಿಸಿದ್ದಾರೆ.

ಸರಳವಾಗಿ ವೈವಾಹಿಕ ಜೀವನಕ್ಕೆ ಕಾಲಿಟ್ಟ ನಟ ಪ್ರಥಮ್



ನಟ, ನಿರ್ದೇಶಕ, ಬಿಗ್ ಬಾಸ್ ವಿಜೇತ ಪ್ರಥಮ್ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದಾರೆ. ಮಂಡ್ಯದ ಭಾನುಶ್ರೀ ಜೊತೆ ಅವರು ಸರಳವಾಗಿ ಮದುವೆಯಾಗಿದ್ದಾರೆ. ಈ ಜೋಡಿಗೆ ಶುಭ ಹಾರೈಸುವುದಕ್ಕಾಗಿ ಲವ್ಲಿ ಸ್ಟಾರ್ ಪ್ರೇಮ್, ಧ್ರುವ ಸರ್ಜಾ, ಗಾಯಕಿ ಇಶಾನಿ, ರಕ್ಷಕ್ ಬುಲೆಟ್ ಸೇರಿದಂತೆ ಹಲವಾರು ತಾರೆಯರು ಆಗಮಿಸಿದ್ದರು. ಎಲ್ಲರನ್ನೂ ಮದುವೆಗೆ ಕರೆಯಲಾರೆ ಎಂದು ಮೊದಲೇ ಪ್ರಥಮ್ ತಿಳಿಸಿದ್ದರು. ಎರಡು ಕುಟುಂಬಗಳ ಸದಸ್ಯರು ಮತ್ತು ಆಪ್ತರ ಮುಂದೆ ಸರಳವಾಗಿ ಮದುವೆ ಆಗುವುದಾಗಿ ಹೇಳಿದ್ದರು. ಹಾಗೆಯೇ ಪ್ರಥಮ್ ಹೊಸ ಜೀವನಕ್ಕೆ ಕಾಲಿಟ್ಟಿದ್ದಾರೆ.

ಡಿ.2ರಂದು ಜಿಲ್ಲಾ ಮಟ್ಟದ ಸಹಪಠ್ಯ ಚಟುವಟಿಕೆ ಸ್ಪರ್ಧೆ

ಮೈಸೂರು, ನ.24– 2023–24ನೇ ಸಾಲಿನಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಜಿಲ್ಲಾ ಮಟ್ಟದ ಸಹಪಠ್ಯ ಚಟುವಟಿಕೆ ಸ್ಪರ್ಧೆಗಳನ್ನು ಮೈಸೂರಿನ ಜೆ.ಎಸ್.ಎಸ್ ಬಾಲಕಿಯರ ಪ್ರೌಢಶಾಲೆ ಸರಸ್ವತಿಪುರಂನಲ್ಲಿ ಡಿಸೆಂಬರ್ 2 ರಂದು ಬೆಳಗ್ಗೆ 10 ಗಂಟೆಗೆ ನಡೆಯಲಿದೆ. ಈ ಸ್ಪರ್ಧೆಯಲ್ಲಿ ಜಾನಪದ ಗೀತೆ, ಆಶುಭಾಷಣ, ಪ್ರಬಂಧ, ಸ್ಥಳದಲ್ಲೇ ಪಾಠೋಪಕರಣಗಳ ತಯಾರಿಗೆ ಸ್ಪರ್ಧೆ, (T.L.M), ಸ್ಥಳದಲ್ಲಿ ಚಿತ್ರ ಬರೆಯುವ ಸ್ಪರ್ಧೆ, ರಸಪ್ರಶ್ನೆ (ಸಾಮಾನ್ಯ ಜ್ಞಾನ) ಮತ್ತು ರಸಪ್ರಶ್ನೆ (ವಿಜ್ಞಾನ) ಸ್ಪರ್ಧೆಗಳಲ್ಲಿ ತಾಲೂಕು ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಶಿಕ್ಷಕರು ಭಾಗವಹಿಸಬಹುದಾಗಿರುತ್ತದೆ ಸದರಿ ಶಿಕ್ಷಕರು ಅಂದು ಬೆಳಗ್ಗೆ 10 ಗಂಟೆಗೆ ನಿಗದಿತ ಶಾಲೆಯಲ್ಲಿ ಹಾಜರಾಗಿ ನೊಂದಣಿ ಮಾಡಿಕೊಳ್ಳಲು ತಿಳಿಸಲಾಗಿದೆ ಎಂದು ಮೈಸೂರು ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

25.11.2023 ಶನಿವಾರ, ಮಳೆ ನಕ್ಷತ್ರ: ಅನುರಾಧ, 20.11.2023 ರಿಂದ 02.12.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತೀಕ ಮಾಸ, ಶುಕ್ಲ ಪಕ್ಷ,
ತಿಥಿ: ತ್ರಯೋದಶಿ, ನಕ್ಷತ್ರ: ಅಶ್ವಿನಿ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಸಿ.ಎಫ್.ಟಿ.ಆರ್.ಐ ಶೋಧ ಅನುಶೋಧ – ಪ್ರಾಯೋಜಿತ ಕಾರ್ಯಕ್ರಮ, ಪ್ರಸ್ತುತಿ– ಗಂಗಾಧರಪ್ಪ, 6.40 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ– ಜಿ.ಕೆ. ರವೀಂದ್ರ ಕುಮಾರ್, 6.45 ಕಲ್ಯಾಣ ಕರೆದಿದೆ ಕಲ್ಯಾಣ–ಪ್ರಾಯೋಜಿತ ಕಾರ್ಯಕ್ರಮ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು – ಪಿ.ಎ. ಮಂಗಳಾ, 8.30 ವಿಶಿಷ್ಟ ವ್ಯಕ್ತಿ ವಿಶೇಷ ಯತ್ನ–ಭಾಗವಹಿಸುವವರು 5 ರೂಪಾಯಿ ಡಾಕ್ಟರ್ ಮಂಡ್ಯದ ಡಾ. ಶಂಕರೇಗೌಡ, 10.00 ಬಿ. ರಾಜಂ ಅಯ್ಯರ್ – ಹಾಡುಗಾರಿಕೆ

ಮಧ್ಯಾಹ್ನ: 12.30 ದೇವರನಾಮ, 12.45 ಜನಪದ ಸಂಗೀತ, 1.30 ಪ್ರಗತಿಪಥ – ರಾಷ್ಟ್ರೀಯ ಪಿಂಚಣಿ ಯೋಜನೆ ಕುರಿತು ಪತ್ರಕರ್ತ ವಿನೋದ್ ಅವರಿಂದ ಮಾಹಿತಿ, 1.20 ಭಾವಗೀತೆ– ಹಂಸಿನಿ ಎಸ್. ಕುಮಾರ್, 3.30 ಮಕ್ಕಳ ಮಂಟಪ–ನಂದಗೋಕುಲ, ಪ್ರಸ್ತುತಿ– ಕೆ.ಬಿ. ಮೀನಾ, 4.30 ನೆನಪಿನಂಗಳ–ಖ್ಯಾತ ಅಣು ವಿಜ್ಞಾನಿ ಡಾ. ರಾಜಾರಾಮಣ್ಣ ಅವರೊಂದಿಗೆ ಪಟ್ನಾಯಕ್ ಅವರು ನಡೆಸಿದ್ದ ಸಂವಾದ, 6.50 ಕೃಷಿರಂಗ–ತೋರಣ ಹೂರಣ–ವಾರದ ಗ್ರಾಮೀಣ ಕಾರ್ಯಕ್ರಮ, ಪ್ರಸ್ತುತಿ– ಎನ್. ಕೇಶವಮೂರ್ತಿ, ಆರ್. ಲೋಕೇಶ್ವರಿ, ಡಾ. ಮೈಸೂರು ಉಮೇಶ್, ಪರಾಗ– ಬೇಸಾಯದ ಬದುಕು ಸರಾಗ–ಬಾನುಲಿ ಸರಣಿ, 8.00 ಯುವವಾಣಿ– ಮೈಸೂರು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಎಂ.ಎಂ– ಸಂಸ್ಕೃತ ವಿಷಯದಲ್ಲಿ ಪ್ರಥಮ ರಾಂಕ್ ನೊಂದಿಗೆ 10 ಚಿನ್ನದ ಪದಕ ಗಳಿಸಿದ ಜ್ಯೋತಿ ರಾಜಶೇಖರ ಹುಳ್ಳೊಳ್ಳಿ ಅವರೊಂದಿಗೆ ಮಾತುಕತೆ, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ–ನರೇಂದ್ರ ಮಿಶ್ರಾ–ಸಿತಾರ್ ವಾದನ

■ **ವಿದ್ಯಾವರ್ಧಕ ಸಂಯುಕ್ತ ಪದವಿಪೂರ್ವ ಕಾಲೇಜು :** ಬೆಳಗ್ಗೆ 9ಕ್ಕೆ ವಾರ್ಷಿಕ ಕ್ರೀಡಾಕೂಟ ಉದ್ಘಾಟನೆ, ಉದ್ಘಾಟನೆ : ಕಾಲೇಜು ಉಪಪ್ರಿನ್ಸಿಪಾಲ್ ಕೆ.ಎಂ. ಸುರೇಶ, ಅಧ್ಯಕ್ಷತೆ : ವಿದ್ಯಾವರ್ಧಕ ಸಂಯುಕ್ತ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಎನ್. ಚಂಪಕ, ಮಧ್ಯಾಹ್ನ 3ಕ್ಕೆ ಸಮಾರೋಪ ಸಮಾರಂಭ, ಸ್ಥಳ: ಓವಲ್ ಕ್ರೀಡಾಂಗಣ, ಮೈಸೂರು ವಿಶ್ವವಿದ್ಯಾನಿಲಯ ಎದುರು.

■ **ಮಹಾರತ್ನ ಟ್ರಸ್ಟ್, ಮೈಸೂರು :** ಕನ್ನಡ ಗೀತಾ ಗಮನ, ನಡಿಗೆಯೊಂದಿಗೆ ಗಾಯನ, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಮುಖ್ಯ ಅತಿಥಿಗಳು : ಶಾಸಕರಾದ ಕೆ. ಹರೀಶ್‌ಗೌಡ, ಟಿ.ಎಸ್. ಶ್ರೀವತ್ಸ, ವಿದ್ವಾಂಸ ಡಾ. ಬಿ.ವಿ. ವಸಂತಕುಮಾರ್, ಗಾಯಕ ಪ್ರೊ. ಮೈಸೂರು ಕೃಷ್ಣಮೂರ್ತಿ, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ. ರಾಜೀವ್, ಸ್ಥಳ: ಅರಮನೆ ಮುಂಭಾಗ, ಕೋಟೆ ಆಂಜನೇಯಸ್ವಾಮಿ ದೇವಸ್ಥಾನ, ಬೆಳಗ್ಗೆ 9ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ಬಟಾನಿಕಲ್ ಸೊಸೈಟಿ, ಸಸ್ಯಶಾಸ್ತ್ರ ಅಧ್ಯಯನ ವಿಭಾಗ :** ಹಸಿರು ಕ್ರಾಂತಿ ಹರಿಕಾರಕ ಡಾ. ಎಂ.ಎಸ್. ಸ್ವಾಮಿನಾಥನ್ ಕುರಿತು ರಾಷ್ಟ್ರ ಮಟ್ಟದ ವಿಚಾರ ಸಂಕಿರಣ, ಉದ್ಘಾಟನೆ : ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷ ಪ್ರೊ. ಎಸ್.ಆರ್. ನಿರಂಜನ, ಆಶಯ ಭಾಷಣ : ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ, ಶಿವಮೊಗ್ಗ ವಿಶ್ರಾಂತ ಕುಲಪತಿ ಪ್ರೊ.ಎಂ.ಕೆ. ನಾಯ್ಕ್, ಮುಖ್ಯ ಅತಿಥಿಗಳು : ಬೆಂಗಳೂರು ಕೃಷಿ ವಿವಿ ಕುಲಪತಿ ಪ್ರೊ. ಎಸ್.ವಿ. ಸುರೇಶ, ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಉಪಸ್ಥಿತರು : ಜೈವಿಕ ತಂತ್ರಜ್ಞಾನ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ. ಎಸ್. ಉಮೇಶ್, ಪ್ರೊ. ಕೆ.ಎನ್. ಅಮೃತೇಶ್, ಸ್ಥಳ: ಲಿನ್ನೆಯಸ್ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 8.45ಕ್ಕೆ.

■ **ಶ್ರೀ ನಟರಾಜ ಪ್ರತಿಷ್ಠಾನ, ಶ್ರೀ ನಟರಾಜ ಶಿಕ್ಷಣ ಸಂಸ್ಥೆಗಳು:** ಬೆಳಗ್ಗೆ 9.30ಕ್ಕೆ ಕನ್ನಡ ರಾಜ್ಯೋತ್ಸವ ಆಚರಣೆ, ಸಾನ್ನಿಧ್ಯ: ಶ್ರೀ ನಟರಾಜ ಪ್ರತಿಷ್ಠಾನದ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಜಾಥಾ ಉದ್ಘಾಟನೆ: ಹೆಚ್ಚುವರಿ ಪೊಲೀಸ್ ಅಧೀಕ್ಷಕ ಡಾ.ಬಿ.ಎನ್.ನಂದಿನಿ, ಸಭಾ ಕಾರ್ಯಕ್ರಮ ಬೆಳಗ್ಗೆ 10.30ಕ್ಕೆ, ಉದ್ಘಾಟನೆ: ಹಿರಿಯ ಸಾಹಿತಿ ಡಾ. ಪ್ರಧಾನ ಗುರುದತ್ತ, ಮುಖ್ಯ ಅತಿಥಿಗಳು: ಪತ್ರಕರ್ತೆ ಶ್ರೀಮತಿ ರಶ್ಮಿ ಕೋಟಿ, ಅಧ್ಯಕ್ಷತೆ: ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ.ಎಸ್.ಶಿವರಾಜಪ್ಪ, ಸ್ಥಳ: ಶ್ರೀ ನಟರಾಜ ಸಭಾ ಭವನ.

■ **ಸಿಗ್ಮಾ ಆಸ್ಪತ್ರೆ:** ಎಂಡೋಸ್ಕೋಪಿ ಕಾರ್ಯಾಗಾರ, ಉಪಸ್ಥಿತರು: ಲ್ಯಾಪ್ರೋಸ್ಕೋಪಿ ಮತ್ತು ಎಂಡೋಸ್ಕೋಪಿ ತಜ್ಞ ಡಾ.ಜಿ.ಸಿದ್ದೇಶ್, ಸ್ಥಳ: ಸಿಗ್ಮಾ ಆಸ್ಪತ್ರೆ, ಬೆಳಗ್ಗೆ 10ಕ್ಕೆ.

■ **ಸಂತ ಫಿಲೋಮಿನಾ ಕಾಲೇಜು :** 9ನೇ ಘಟಿಕೋತ್ಸವ, ಅಧ್ಯಕ್ಷತೆ: ಪ್ರೇಷಿತ ಆಡಳಿತಾಧಿಕಾರಿ ಡಾ. ಬರ್ನಾಡ್ ಪ್ರೊರಾಸ್, ಘಟಿಕೋತ್ಸವ ಭಾಷಣ: ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಮತ್ತು ರಾಷ್ಟ್ರೀಯ ಶಿಕ್ಷಣ ನೀತಿ ಸಮಿತಿ ಮಾಜಿ ಅಧ್ಯಕ್ಷ ಪದ್ಮವಿಭೂಷಣ ಡಾ. ಕೆ. ಕಸ್ತೂರಿರಂಗನ್, ಮುಖ್ಯ ಅತಿಥಿಗಳು : ಮೈಸೂರು ವಿಶ್ವವಿದ್ಯಾನಿಲಯ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಸ್ಥಳ: ಒಳಾಂಗಣ ಕ್ರೀಡಾಂಗಣ, ಬೆಳಗ್ಗೆ 10ಕ್ಕೆ.

■ **ರಾಮ್‌ಸನ್ಸ್ ಬೊಂಬೆ ಮನೆ :** ದಸರಾ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10 ರಿಂದ ಸಂಜೆ 7 ಗಂಟೆವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಕಣ್ಣು ಕೆಂಪಾಗುವುದು, ಕಣ್ಣಿನಿಂದ ನೀರು ಸುರಿಯುವುದು, ಕಣ್ಣು ನೋವು, ಅರ್ಧ ತಲೆನೋವಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 10ರಿಂದ.

■ **ರಾಮಕೃಷ್ಣ ವಿದ್ಯಾಕೇಂದ್ರ :** ಅಜ್ಜ ಅಜ್ಜಿಯರ ದಿನ, ಅಧ್ಯಕ್ಷತೆ : ಶ್ರೀ ರಾಮಕೃಷ್ಣ ಸೇವಾ ಸಂಘದ ಅಧ್ಯಕ್ಷ ಎಂ. ಪಾಪೇಗೌಡ, ಉಪಸ್ಥಿತರು : ಕಾರ್ಯನಿರ್ವಾಹಕ ಅಧಿಕಾರಿ ಪ್ರೊ. ಜಿ. ಚಂದ್ರಶೇಖರ್, ಮುಖ್ಯೋಪಾಧ್ಯಾಯ ಜಿ.ಎನ್. ವಿಶ್ವನಾಥ್, ಮುಖ್ಯೋಪಾಧ್ಯಾಯಿನಿ ಶ್ರೀಮತಿ ವೀಣಾ ಕೆ. ಹೆಗಡೆ, ಸ್ಥಳ: ಶಾಲೆಯ ಶ್ರೀ ಶಾರದಾ ಸಭಾಂಗಣ, ಬೆಳಗ್ಗೆ 10ಕ್ಕೆ

■ **ಗೋಪಾಲಸ್ವಾಮಿ ಶಿಶುವಿಹಾರ ಸ್ವತಂತ್ರ ಪಿಯು ಕಾಲೇಜು :** ಬೆರಗು–2023 ವಿಜ್ಞಾನ ಪ್ರದರ್ಶನ, ಉದ್ಘಾಟನೆ : ಇಸ್ರೋದ ಸ್ಟ್ರಕ್ಚರಲ್ ಡಿಸೈನ್ ಡಿವಿಷನ್ ಮುಖ್ಯಸ್ಥ ಪಿ.ಜಯಸಿಂಹ, ಅಧ್ಯಕ್ಷತೆ : ಎಂಇಟಿ ಅಧ್ಯಕ್ಷ ಡಾ. ಎಸ್. ಮುರಳಿ, ಗೌರವ ಅತಿಥಿಗಳು: ಡಾ. ಎ.ಎಸ್. ಚಂದ್ರಶೇಖರ್, ಬಿಇಓ ಸಿ.ಎನ್. ರಾಜು, ಸ್ಥಳ: ಜಿಎಸ್‌ಐ ಪಿಯು ಕಾಲೇಜು, ಬೆಳಗ್ಗೆ 10.30ಕ್ಕೆ.

■ **ಮೈಸೂರು ಜಿಲ್ಲಾ ಮಹಿಳಾ ಸಹಕಾರ ಬ್ಯಾಂಕ್:** ಕನ್ನಡ ರಾಜ್ಯೋತ್ಸವ, ಉಪಸ್ಥಿತರು : ಹಾಸ್ಯ ಕಲಾವಿದ ಮೈಸೂರು ಆನಂದ್, ಅಧ್ಯಕ್ಷತೆ : ಡಿ. ಶೀಲಾ ಕುಮಾರಿ, ಸ್ಥಳ: ಅಶೋಕಪುರಂ ಪೊಲೀಸ್ ಠಾಣೆ ಹಿಂಭಾಗ, ಕುವೆಂಪುನಗರ, ಬೆಳಗ್ಗೆ 10.30ಕ್ಕೆ.

■ **ಎಂಎಂಕೆ ಮತ್ತು ಎಸ್‌ಡಿಎಂ ಕಾಲೇಜು:** ಕನ್ನಡ ರಾಜ್ಯೋತ್ಸವ ಮತ್ತು ಡಾ.ವೀರೇಂದ್ರ ಹೆಗ್ಗಡೆ ಅವರ ಜನ್ಮದಿನಾಚರಣೆ, ಅಧ್ಯಕ್ಷತೆ: ಕಾಲೇಜು ಪ್ರಿನ್ಸಿಪಾಲ್ ಪ್ರೊ.ಸಾಯಿನಾಥ್ ಮಲ್ಲಿಗೆಮಾಡು, ಉದ್ಘಾಟನೆ: ಹಿರಿಯ ಕಲಾವಿದ ಅರಸೀಕೆರೆ ಯೋಗಾನಂದ, ಉಪಸ್ಥಿತರು: ಪತ್ರಕರ್ತ ಕೆ.ನರಸಿಂಹಮೂರ್ತಿ, ಕಾಲೇಜು ಪ್ರಿನ್ಸಿಪಾಲ್ ಶ್ರೀಮತಿ ನಯನಕುಮಾರಿ, ಸ್ಥಳ: ಕಾಲೇಜು ಸಭಾಂಗಣ, ಬೆಳಗ್ಗೆ 10.30ಕ್ಕೆ

■ **ವಿರಾಟ್ ವಿಶ್ವಕರ್ಮ ಬ್ಯಾಂಕ್ ಚಿನ್ನದ ಮೌಲ್ಯಮಾಪಕರ ಸಂಘ, ಆಲ್ ಬ್ಯಾಂಕ್ ಚಿನ್ನದ ಮೌಲ್ಯಮಾಪಕರ ಸಂಘ, ಕೆನರಾ ಬ್ಯಾಂಕ್ ಚಿನ್ನದ ಮೌಲ್ಯಮಾಪಕರ ಸಂಘ:** 2ನೇ ಸರ್ವ ಸದಸ್ಯರ ಸಭೆ, ಸ್ಥಳ: 1806, 1807, ಇಸ್ಕಾನ್ ದೇವಸ್ಥಾನದ ಎದುರು, ಕುವೆಂಪುನಗರ, ಬೆಳಗ್ಗೆ 11ಕ್ಕೆ.

■ **ವಿದ್ಯಾವಿಕಾಸ್ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಅಂಡ್ ಟೆಕ್ನಾಲಜಿ :** ಪದವೀಧರರ ದಿನಾಚರಣೆ, ಮುಖ್ಯ ಅತಿಥಿಗಳು : ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ ಉಪಕುಲಪತಿ ಡಾ. ಎಸ್.ವಿ. ಸುರೇಶ್, ಕೇನ್ಸ್ ಟೆಕ್ನಾಲಜಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಜೇಶ್ ಶರ್ಮಾ, ಅಧ್ಯಕ್ಷತೆ : ಸಂಸ್ಥೆ ಕಾರ್ಯದರ್ಶಿ ವಿ. ಕವೀಶ್‌ಗೌಡ, ಸ್ಥಳ: ಲಲಿತಾ ಸ್ಮಾರಕ ಭವನ, ಕಾಲೇಜು ಆವರಣ, ಬೆಳಗ್ಗೆ 11ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಇಷ್ಟಾನಾಥಾನಂದ ಅವರಿಂದ ಆತ್ಮಬೋಧ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಶ್ರೀ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನ ಟ್ರಸ್ಟ್:** 46ನೇ ವರ್ಷದ ಕಾರ್ತಿಕ ಮಾಸದ ಶ್ರೀ ಮಲೆ ಮಹದೇಶ್ವರಸ್ವಾಮಿ ಪೂಜಾ ಮಹೋತ್ಸವ, ಸಂಜೆ 6ಕ್ಕೆ ಚಿಣ್ಣರ ಚಿತ್ರಕಲಾ ಮತ್ತು ಆಟೋಟ ಸ್ಪರ್ಧೆ, ಭಜನಾ ಕಾರ್ಯಕ್ರಮ, ಸಂಜೆ 7ಕ್ಕೆ ರಂಗವಲ್ಲಿ ಸ್ಪರ್ಧೆ, ಸ್ಥಳ: ದೇವಸ್ಥಾನದ ಆವರಣ, ಗರಡಿಕೇರಿ, ಲಷ್ಕರ್ ಮೊಹಲ್ಲಾ.

■ **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಉದಯಗಿರಿ ಕನ್ನಡ ಸಂಘ, ಕದಂಬ ಕಲಾಪೀಠ:** ಸುಜಯ ಅವರ ಸಂಪ್ರದಾಯ ಸಂಸ್ಕೃತಿ ಕೃತಿ ಬಿಡುಗಡೆ ಸಮಾರಂಭ, ಅಧ್ಯಕ್ಷತೆ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಉದ್ಘಾಟನೆ: ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕರಾದ ಡಾ. ವಿಜಯಕುಮಾರಿ ಎಸ್.ಕರಿಕಲ್, ಕೃತಿ ಬಿಡುಗಡೆ: ಮೈಸೂರು ಮತ್ತು ಚಾಮರಾಜನಗರ ಜಿಲ್ಲೆ ಆರ್ಯ ಈಡಿಗರ ಸಂಘದ ಅಧ್ಯಕ್ಷ ಡಾ.ಎಂ.ಕೆ.ಪೋತರಾಜ್, ಪುಸ್ತಕ ಪರಿಚಯ: ಸತೀಶ್ ಜವರೇಗೌಡ, ಮುಖ್ಯ ಅತಿಥಿಗಳು: ಡಾ.ಪುಷ್ಪ ಅಯ್ಯಂಗಾರ್, ಆರ್ಯ ಈಡಿಗರ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ವಿ.ಜಯಣ್ಣ, ಉಪಸ್ಥಿತರು: ಸುಜಯ, ಕದಂಬ ಕಲಾಪೀಠ ಅಧ್ಯಕ್ಷ ಬಿ.ವಿದ್ಯಾಸಾಗರ್ ಕದಂಬ, ಸ್ಥಳ: ಜಿಲ್ಲಾ ಕನ್ನಡ ಸಾಹಿತ್ಯ ಭವನ, ವಿಜಯನಗರ 1ನೇ ಹಂತ, ಸಂಜೆ 4ಕ್ಕೆ.

■ **ನಾದಬ್ರಹ್ಮ ಸಂಗೀತ ಸಭಾ:** ಕನ್ನಡ ರಾಜ್ಯೋತ್ಸವ ಪ್ರಯುಕ್ತ ಮಧುರಗಾನ ಕಲಾವೃಂದದ ರಮೇಶ್ ಕುಮಾರ್ ಅವರಿಂದ ಚಿ.ಉದಯಶಂಕರ್ ಹಾಗೂ ದೊರೆ ಭಗವಾನ್ ರಸಸಂಜೆ ಕಾರ್ಯಕ್ರಮ, ಸ್ಥಳ: ನಾದಬ್ರಹ್ಮ ಸಂಗೀತ ಸಭಾ, ಜೆಎಲ್‌ಬಿ ರಸ್ತೆ, ಸಂಜೆ 5.30ಕ್ಕೆ.

■ **ನೃತ್ಯ ವಿದ್ಯಾಪೀಠ, ಅಕಾಡೆಮಿ ಆಫ್ ಕ್ಲಾಸಿ ಕಲ್ ಡ್ಯಾನ್ಸ್ ಅಂಡ್ ಇಂಡಿ ಯನ್ ಆರ್ಟ್ಸ್ ಸಂಸ್ಥೆ ಬೆಂಗಳೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ :** 'ನರ್ತನ ಮೈತ್ರಿ' ವೈಷ್ಣವಿ ಎಲ್.ಅರಸ್, ಎಸ್.ರಕ್ಷಿತಾ, ಡಿ.ವಿ.ಎಸ್.ಕೆ. ಶ್ರೀಹರಿ ಪ್ರಿಯ, ನಯನಾ ನಾಗರಾಜ್ ಮತ್ತು ಎಸ್.ಅನಘ ಅವರಿಂದ ನೃತ್ಯ ಪ್ರದರ್ಶನ, ಮುಖ್ಯ ಅತಿಥಿಗಳು : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ನೃತ್ಯಾಲಯ ಟ್ರಸ್ಟ್ ಅಧ್ಯಕ್ಷೆ ಡಾ.ತುಳಸಿ ರಾಮಚಂದ್ರ, ಹೊಳೇನರಸೀಪುರ ಸ್ವರ್ಣ ಶಿಕ್ಷಣ ಸಂಸ್ಥೆ ಪ್ರಾಂಶುಪಾಲರಾದ ಶೋಭಾ ಬಾಲಕೃಷ್ಣ, ಎಲ್ ಅಂಡ್ ಟಿ ಟೆಕ್ನಾಲಜಿ ಸರ್ವೀಸಸ್ ವ್ಯವಸ್ಥಾಪಕಿ ಜಿ.ಕೆ.ಕಮಲ, ನೃತ್ಯ ಸಂಯೋಜನೆ ಮತ್ತು ನಟುವಾಂಗ: ವಿದುಷಿ ಸಿ.ಎನ್. ಅನಿತಾ, ಹಾಡುಗಾರಿಕೆ : ರಾಕೇಶ್ ಸುಧೀರ್, ವಿದ್ವಾನ್ ತುಮಕೂರು ಬಿ.ಶಶಿಶಂಕರ್– ಮೃದಂಗ, ವಿದ್ವಾನ್ ಶಶಾಂಗ್ ಜೋಡಿದಾರ್–ವೇಣುವಾದನ, ಸ್ಥಳ: ಕಲಾ ಮಂದಿರದ ಕಿರುರಂಗಮಂದಿರ, ಸಂಜೆ 5.30ಕ್ಕೆ.

■ **ಕಲಾ ಸುರುಚಿ :** ವಿಶ್ವನಾಥ ಮಿರ್ಲೆ ನೆನಪಿನ ಮಕ್ಕಳ ಇಂಗ್ಲಿಷ್ ನಾಟಕೋತ್ಸವ, ಎಕ್ಸೆಲ್ ಪಬ್ಲಿಕ್ ಸ್ಕೂಲ್ ಮತ್ತು ಮಹರ್ಷಿ ಪಬ್ಲಿಕ್ ಸ್ಕೂಲ್ ವಿದ್ಯಾರ್ಥಿಗಳಿಂದ ಕಿಂಗ್ ಹಾಲಿಡೇ ಮತ್ತು ಭಕ್ತ ಸುಧಾಮ ನಾಟಕ ಪ್ರದರ್ಶನ, ಸ್ಥಳ: ಸುರುಚಿ ರಂಗಮನೆ, ಕುವೆಂಪುನಗರ, ಸಂಜೆ 6ಕ್ಕೆ

■ **ಅಭಿವ್ಯಕ್ತಿ ಕಲಾ ಮತ್ತು ಸಾಂಸ್ಕೃತಿಕ ಕೇಂದ್ರ:** ಅಭಿವ್ಯಕ್ತಿ ತಂಡದಿಂದ ಭರತನಾಟ್ಯ ಪ್ರದರ್ಶನ, ಮುಖ್ಯ ಅತಿಥಿಗಳು: ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಗಾಯಕ ಡಾ.ಎಂ.ಎಸ್.ಭಾಸ್ಕರ್ ಮತ್ತು ವಿದ್ಯಾ ವಿಕಾಸ ಶಿಕ್ಷಣ ಸಂಸ್ಥೆಯ ಕವೀಶ್ ಗೌಡ, ಸ್ಥಳ: ರಮಾಗೋವಿಂದ ರಂಗ ಮಂದಿರ, ರಾಮಕೃಷ್ಣನಗರ, ಸಂಜೆ 6.15ಕ್ಕೆ.

ಸುತ್ತೂರು ಶ್ರೀ ಕ್ಷೇತ್ರದಲ್ಲಿಂದು, ನಂಜನಗೂಡು ತಾಲೂಕು

■ **ಶ್ರೀ ವೀರ ಸಿಂಹಾಸನ ಮಹಾಸಂಸ್ಥಾನ ಮಠ :** ಕಾರ್ತಿಕ ಮಾಸದ ವಿಶೇಷ ಪೂಜಾ ಕಾರ್ಯಕ್ರಮ, ಸ್ಥಳ: ಸುತ್ತೂರು ಶ್ರೀಕ್ಷೇತ್ರ.

ದಕ್ಷಿಣ ಶಿಕ್ಷಕರ ಕ್ಷೇತ್ರದ ಕರಡು ಮತದಾರರ ಪಟ್ಟಿ ಪ್ರಕಟ

ಆಕ್ಷೇಪಣೆ ಸಲ್ಲಿಸಲು ಡಿ.9 ಕೊನೆಯ ದಿನ

ಮೈಸೂರು, ನ.24- ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ದಕ್ಷಿಣ ಶಿಕ್ಷಕರ ಕ್ಷೇತ್ರದ ಕರಡು ಮತದಾರರ ಪಟ್ಟಿ ನವಂಬರ್ 23 ರಂದು ಪ್ರಕಟಿಸಲಾಗಿದೆ. ನವೆಂಬರ್ 1 ಅನ್ನು ಅರ್ಹತಾ ದಿನಾಂಕವಾಗಿ ಉಲ್ಲೇಖಿಸಿ ಮತದಾರರ ಪಟ್ಟಿಯನ್ನು ಆಯೋಗ ಸಿದ್ಧಪಡಿಸಿದೆ. ಹಕ್ಕು ಆಕ್ಷೇಪಣೆಗಳನ್ನು ಸಲ್ಲಿಸಲು ಡಿಸೆಂಬರ್ 09 ಶನಿವಾರ ಕೊನೆಯ ದಿನಾಂಕವಾಗಿರುತ್ತದೆ.

ಮತದಾರರ ಪಟ್ಟಿಗಳು ಸಂಬಂಧ ಪಟ್ಟ ಮತದಾರರ ನೋಂದಣಿ ಅಧಿಕಾರಿಗಳು, ಪ್ರಾದೇಶಿಕ ಆಯುಕ್ತರು, ಸಹಾಯಕ ಮತದಾನ ನೋಂದಣಿ ಅಧಿಕಾರಿಗಳು, ಜಿಲ್ಲಾ ಚುನಾವಣಾ ಅಧಿಕಾರಿಗಳ ಕಚೇರಿ, ಸಂಬಂಧಪಟ್ಟ ಪ್ರಾದೇಶಿಕ ಆಯುಕ್ತರು, ಜಿಲ್ಲಾ ಚುನಾವಣಾಧಿಕಾರಿಗಳ ವೆಬ್ ಸೈಟ್ ceo.karnataka.gov.inನ ಲ್ಲಿ ಲಭ್ಯವಿರುತ್ತದೆ. ದಕ್ಷಿಣ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ 14,383 ಅರ್ಜಿಗಳು ಸ್ವೀಕೃತಿಯಾಗಿದ್ದು, 14.206 ಅರ್ಜಿಗಳು ಸ್ವೀಕರಿಸಲಾಗಿರುತ್ತದೆ. 177 ಅರ್ಜಿಗಳು ತಿರಸ್ಕೃತವಾಗಿರುತ್ತದೆ. ಅರ್ಹ ಶಿಕ್ಷಕರು ಮತ್ತು ಪದವೀಧರರು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಲು ನಮೂನೆ 18 ಮತ್ತು 19ರಲ್ಲಿ ಡಿಸೆಂಬರ್ 09 ರೊಳಗಾಗಿ ಅರ್ಜಿ ಸಲ್ಲಿಸುವಂತೆ ಮತದಾರರ ನೋಂದಣಾಧಿಕಾರಿ ಹಾಗೂ ಮೈಸೂರು ವಿಭಾಗದ ಪ್ರಾದೇಶಿಕ ಆಯುಕ್ತರಾದ ಡಾ ಜೆ.ಸಿ.ಪ್ರಕಾಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾರ್ವಜನಿಕ ನೋಟಿಸ್

ಮೈಸೂರಿನ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ ನ್ಯಾಯಾಲಯದಲ್ಲಿ ಮಾರಾಟದ ಸೂಚನೆಯ ಘೋಷಣೆ.

ಎಫ್.ಡಿ.ಪಿ ನಂ. 71/2016

ಶ್ರೀ ಶಶಿಕುಮಾರ್ ಮತ್ತು ಇತರರು... ಅರ್ಜಿದಾರರು

ವಿರುದ್ಧ ಶ್ರೀ ಡಿ.ಎನ್. ದಿನೇಶ್ ಮತ್ತು ಇತರರು...

ಪ್ರತಿವಾದಿಗಳು

ಈ ಕೆಳಗೆ ಸಹಿ ಮಾಡಿರುವ / ಕೋರ್ಟ್ ಕಮಿಷನರ್ ರವರು ಈ ಕೆಳಗಿನ ಷೆಡ್ಯೂಲ್‌ನಲ್ಲಿ ಹೆಚ್ಚು ಸಂಪೂರ್ಣವಾಗಿ ವಿವರಿಸಲಾದ ಸ್ಥಿರ ಆಸ್ತಿಯು "ಎಲ್ಲಿ ಹೇಗಿದೆಯೋ ಹಾಗೇ" ಮತ್ತು "ಎಲ್ಲಿ ಏನಿದೆಯೋ ಹಾಗೆ" ಇರುವ ಸ್ಥಿತಿಯಲ್ಲಿ ಮಾರಾಟಕ್ಕಾಗಿ ಮೊಹರು ಮಾಡಿದ ಕವರಿನಲ್ಲಿ (ಎಫ್.ಡಿ.ಪಿ ಸಂಖ್ಯೆ: 71/2016ರಲ್ಲಿ ಮಾರಾಟಕ್ಕೆ ಬದ್ಧವಾಗಿರುವ) ಬಿಡ್‌ಗಳು / ಆಫರ್‌ಗಳನ್ನು ಆಹ್ವಾನಿಸಲಾಗಿದ್ದು, ದಿನಾಂಕ: 03-11-2023ರ ಆದೇಶದ ಅನುಸಾರವಾಗಿ ಮೈಸೂರಿನ ಗೌರವಾನ್ವಿತ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ ಅವರು ಎಫ್.ಡಿ.ಪಿ ಸಂಖ್ಯೆ: 71/2016ರಲ್ಲಿ ಆದೇಶಿಸಿದಂತೆ ಡಿಮೆಂಡ್ ಡ್ರಾಫ್ಟ್/ಯಾವುದೇ ರಾಷ್ಟ್ರೀಕೃತ ಬ್ಯಾಂಕಿನ ಬಿಡ್ ಮೊತ್ತದ 10%ಗೆ ಸಮಾನಾದ ಮೊತ್ತವನ್ನು ಆರ್ನೆಸ್ಟ್ ಮನಿ ಡೆಪಾಸಿಟ್ (EMD) ಯನ್ನು ರಿಜಿಸ್ಟ್ರಾರ್, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ ಮೈಸೂರಿನಲ್ಲಿ ಅಥವಾ ಕೆಳ ಸಹಿದಾರರ ಕಚೇರಿಗೆ ದಿನಾಂಕ: 01-12-2023 ರಂದು ಸಂಜೆ 5.00 ಗಂಟೆಯೊಳಗೆ ಪಾವತಿಸಲು ಕೋರಿದೆ. ಸ್ವೀಕರಿಸಿದ ಬಿಡ್‌ಗಳನ್ನು ದಿನಾಂಕ: ದಿನಾಂಕ: 02-12-2023 ರಂದು ಬೆಳಗ್ಗೆ 11.00 ಗಂಟೆಯೊಳಗೆ ತೆರೆಯಲಾಗುತ್ತದೆ. ಮತ್ತು ಪರಿಗಣಿಸಲಾಗುತ್ತದೆ ಮತ್ತು ನಿರೀಕ್ಷಿತ ಬಿಡ್‌ದಾರರು ದಿನಾಂಕ: 02-12-2023ರಂದು ನಡೆಯಲಿರುವ ನಿಗದಿತ ಆಸ್ತಿಯ ಆವರಣದಲ್ಲಿ ಸಾರ್ವಜನಿಕ ಹರಾಜಿನ ಮಾರಾಟದಲ್ಲಿ ಭಾಗವಹಿಸಬಹುದು. ದಿನಾಂಕ: 06-12-2023ರಂದು ನ್ಯಾಯಾಲಯದ ಮಾರಾಟವನ್ನು ಮಾಡಲಾಗುವುದು. ಮೀಸಲು ಬೆಲೆ ರೂ.5,27,80,000.00 (ರೂಪಾಯಿ ಐದು ಕೋಟಿ ಇಪ್ಪತ್ತೇಳು ಲಕ್ಷದ ಎಂಭತ್ತು ಸಾವಿರ ಮಾತ್ರ) ಆಸಕ್ತಿಯುಳ್ಳ ಬಿಡ್‌ದಾರರು ದಿನಾಂಕ: 01-12-2023 ರಂದು ಷೆಡ್ಯೂಲ್ ಸ್ವತ್ತನ್ನು ಪರಿಶೀಲಿಸಲು ಸಲಹೆಯಿತ್ತು ಮತ್ತು ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಹೆಚ್ಚಿನ ವಿವರಗಳಿಗಾಗಿ ಕೆಳಗೆ ಸಹಿ ಮಾಡಲಾಗುವುದು. ನ್ಯಾಯಾಲಯವು ಯಾವುದೇ ಹೆಚ್ಚಿನ ಬಿಡ್ ಅಥವಾ ಯಾವುದೇ ಇತರ ಪ್ರಸ್ತಾಪವನ್ನು ನವೀಕರಿಸಲು ಬದ್ಧವಾಗಿಲ್ಲ ಮತ್ತು ಯಾವುದೇ ಕಾರಣವನ್ನು ನೀಡದೇ ಅದನ್ನು ಸ್ವೀಕರಿಸಬಹುದು. ಹರಾಜಿನ ನಿಯಮಗಳು ಮತ್ತು ಷರತ್ತುಗಳ ಪ್ರತಿಯು ಕೆಳಗೆ ಸಹಿ ಮಾಡಿದವರ ಕಚೇರಿಯಲ್ಲಿ ಲಭ್ಯವಿರುತ್ತದೆ. ಹರಾಜು ಮೈಸೂರಿನಲ್ಲಿರುವ ಗೌರವಾನ್ವಿತ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿಜೆಎಂ ಅವರ ಮಾರಾಟದ ದೃಢೀಕರಣಕ್ಕೆ ಒಳಪಟ್ಟಿರುತ್ತದೆ.

ಮೇಲೆ ಉಲ್ಲೇಖಿಸಲಾದ ಅಡಮಾನವಾಗಿಸಿರುವ ಷೆಡ್ಯೂಲ್ ಸ್ವತ್ತಿನ ವಿವರ : ಮೈಸೂರು 570001, ದೇವರಾಜ ಮೊಹಲ್ಲಾ, ಸೀಬಯ್ಯ ರಸ್ತೆಯಲ್ಲಿರುವ ಸ್ಥಿರಾಸ್ತಿ ಸ್ವತ್ತು ಮುನಿಸಿಪಲ್ ಮನೆ ನಂ. 2011, ವಿಸ್ತೀರ್ಣ ಪೂರ್ವದಿಂದ ಪಶ್ಚಿಮಕ್ಕೆ : 32.5 ಅಡಿಗಳು ಮತ್ತು ಉತ್ತರದಿಂದ ದಕ್ಷಿಣಕ್ಕೆ : 58 ಅಡಿಗಳು ಹಾಗೂ ಇದರ ಚೆಕ್ಕುಬಂಧಿ : ಪೂರ್ವಕ್ಕೆ : ಹೋಟೆಲ್ ವೈಶಾಕ್ ಇಂಟರ್‌ನ್ಯಾಷನಲ್, ಪಶ್ಚಿಮಕ್ಕೆ : ಹೊಂಬಾಳೆಗೌಡರವರ ಮನೆ, ಉತ್ತರಕ್ಕೆ : ಹೋಟೆಲ್ ಅಶೋಕ ಮತ್ತು ದಕ್ಷಿಣಕ್ಕೆ : ರಸ್ತೆ. ದಿನಾಂಕ: 09-11-2023 ರಂದು ನನ್ನ ಸಹಿ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ನೀಡಲಾಗಿರುತ್ತದೆ. ನ್ಯಾಯಾಲಯದ ಆದೇಶದ ಮೇರೆಗೆ, ಆಯುಕ್ತರು, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ, ಮೈಸೂರು.

ಸಹಿ/- ಸಿ.ಆರ್. ಸತ್ಯಪ್ರಕಾಶ್, ವಕೀಲರು
ಕಚೇರಿ ನಂ. 9/ಜಿ, ಸಿ.ಹೆಚ್-28ನೇ ಮುಖ್ಯರಸ್ತೆ, 10ನೇ ಕ್ರಾಸ್, ಜಯನಗರ, ಮೈಸೂರು. 570018.
ಮೊಬೈಲ್ ನಂ. 9480477700.

ದಿನಾಂಕ: 24.11.2023



ಶಿಕ್ಷಕರಾದ ವಿ.ರಾಜೇಂದ್ರ ಮತ್ತು ನಾಗಿಣಿ ದಂಪತಿ ಹುಟ್ಟು ಹಬ್ಬದ ಅಂಗವಾಗಿ ಮೈಸೂರಿನ ಗ್ರೀನ್ ಡಾಟ್ ಟ್ರಸ್ಟ್‌ನ ಮಾನಸಧಾಮ ಮಾನಸಿಕ ರೋಗಿಗಳ ಆರೋಗ್ಯ ಹಾಗೂ ಪುನರ್ವಸತಿ ಕೇಂದ್ರದ ರೋಗಿಗಳಿಗೆ ಸಿಹಿ ಹಂಚಿ, ಕೇಂದ್ರಕ್ಕೆ ಗೀಜರ್ ಕೊಡುಗೆ ನೀಡಿದರು. ಈ ವೇಳೆ ಪಂಕಜ ಜಗದೀಶ್, ಸಂಸ್ಥೆಯ ಕಾರ್ಯದರ್ಶಿ ಡಾ. ಕಾಂತರಾಜ್, ಮನೋರಂಜನ್, ಸಂಜಯ್ ಮಹೇಶ್ವರಿ ಉಪಸ್ಥಿತರಿದ್ದರು.

ಪಡುವಾರಹಳ್ಳಿ ಗಣಪತಿ ದೇವಸ್ಥಾನದಲ್ಲಿ ಕಳವು

ಮೈಸೂರು, ನ.24(ಎಂಕೆ)- ಮೈಸೂರಿನ ಪಡುವಾರಹಳ್ಳಿ (ವಿನಾಯಕನಗರ)ಯ ಗಣಪತಿ ದೇವಸ್ಥಾನದಲ್ಲಿ ಕಿಟಕಿಯ ಗಾಜು ಒಡೆದು ದೇವರ ವಿಗ್ರಹಗಳನ್ನು ಕಳವು ಮಾಡಿರುವ ಘಟನೆ ನಡೆದಿದೆ. ಗುರುವಾರ ಮಧ್ಯರಾತ್ರಿ ದೇವಸ್ಥಾನದ ಕಿಟಕಿ ಗಾಜು ಒಡೆದು ಒಳ ನುಗ್ಗಿರುವ ದುಷ್ಕರ್ಮಿಗಳು ಗಣಪತಿ, ವಿಷ್ಣು, ಮಹಾಲಕ್ಷ್ಮಿ, ಶಿವನ ವಿಗ್ರಹವನ್ನು ಕಳವು ಮಾಡಿದ್ದಾರೆ ಎಂದು ದೇವಸ್ಥಾನದ ಅರ್ಚಕ ಜಯಲಕ್ಷ್ಮಿಪುರಂ ಠಾಣೆಗೆ ನೀಡಿರುವ ದೂರಿನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಜಯಲಕ್ಷ್ಮಿಪುರಂ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ನಿಧನ



ಡಾ.ವಿ.ರಾಘವೇಂದ್ರ (82 ವರ್ಷ)

ಇವರು ದಿನಾಂಕ: 23.11.2023 ರಂದು ದೈವಾಧೀನರಾಗಿದ್ದು. ಮೃತರು ಮೈಸೂರು ಮೆಡಿಕಲ್ ಕಾಲೇಜಿನಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿರುತ್ತಾರೆ. **ದುಃಖತಪ್ತರು:** ಮೃತರ ಧರ್ಮಪತ್ನಿ ವಿ.ವಸಂತ, ಮಕ್ಕಳು ಜ್ಯೋತಿ, ರೇಖಾ, ಡಾ.ಹೇಮಂತ್, ಕುಟುಂಬವರ್ಗದವರು ಮತ್ತು ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ.

4ನೇ ವರ್ಷದ ಸವಿನೆನಪು



ಶ್ರೀ ಮಾಲೇಗೌಡರು
(ನಿವೃತ್ತ MUDA ನೌಕರರು)

ಜನನ: 2.5.1947-ಮರಣ: 25.11.2019


ನೀವು ನಮ್ಮನ್ನಗಲಿ ಇಂದಿಗೆ ನಾಲ್ಕು ವರ್ಷ ಕಳೆದರೂ ನಿಮ್ಮ ನೆನಪು ನಮ್ಮ ಮನದಲ್ಲಿ ಹಚ್ಚ ಹಸಿರಾಗಿದೆ ಸದಾ ನಿಮ್ಮ ನೆನಪಿನಲ್ಲಿರುವ

ಇಂತಿ ದುಃಖತಪ್ತರು: ಪತ್ನಿ: ಶ್ರೀಮತಿ ಸಾವಿತ್ರಮ್ಮ, ಮಕ್ಕಳು: ಗಿರೀಶ ಮತ್ತು ಬಸವರಾಜು, ಸೊಸೆಯಂದಿರು: ಗೀತಾ ಮತ್ತು ಆಶಾ, ಮೊಮ್ಮಕ್ಕಳು: ಮನುಸೂರ್ಯ, ಗಗನ್, ಅಜಿತ್ ರಾಜ್, ಹರ್ಷಿತ, ತಮ್ಮಂದಿರು: ಪುಟ್ಟಬಸವಯ್ಯ ಮತ್ತು ಚಿಕ್ಕಣ್ಣ

ಮೈಸೂರು ಮಿತ್ರ ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಆದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು



ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತನ್ನು ನನ್ನ ಕಕ್ಷಿದಾರರು ಅದರ ಮಾಲೀಕರಾದ ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಮಂಡಕಳ್ಳಿ ಗ್ರಾಮ, ರಾಮಮಂದಿರ ಬೀದಿ, ಮನೆ ನಂ. 51 ರಲ್ಲಿ ವಾಸವಾಗಿರುವ ಲೇಟ್ ಬೀರೇಗೌಡ ಅಲಿಯಾಸ್ ವಟ್ಟಕನ್ನಯ್ಯ ರವರ ಮಗ ಲೇಟ್ ಬೀರಯ್ಯ ಅಲಿಯಾಸ್ ತಮ್ಮಯ್ಯ ರವರ ಧರ್ಮಪತ್ನಿ ಶ್ರೀಮತಿ ಮಹದೇವಮ್ಮ [ಆಧಾರ್ ಸಂಖ್ಯೆ : 8271 1216 7265] ಮತ್ತು ಇತರರಿಂದ ಖರೀದಿಸಲು ಉದ್ದೇಶಿಸಿರುತ್ತಾರೆ. ಷೆಡ್ಯೂಲ್ ಸ್ವತ್ತಿನ ವಿಚಾರದಲ್ಲಿ ಮೇಲೆ ಕಾಣಿಸಿದ ವ್ಯಕ್ತಿಗಳಲ್ಲದೆ ಬೇರೆ ಯಾರಿಗಾದರು, ಯಾವುದೇ ರೀತಿಯ ಹಕ್ಕಾಗಲೀ, ಹಿತಾಸಕ್ತಿ ಯಾಗಲೀ, ಭಾಗಾಂಶವಾಗಲೀ ಅಥವಾ ಋಣಗಳಾಗಲೀ ಇದ್ದಲ್ಲಿ ಈ ಕೆಳಕಂಡವರನ್ನು ಈ ದಿನದಿಂದ ಏಳು (7) ದಿನಗಳ ಒಳಗಾಗಿ ಸಂಬಂಧಪಟ್ಟ ದಾಖಾಲಾತಿಗಳೊಡನೆ ಸಂಪರ್ಕಿ ಸುವುದು. ಇಲ್ಲವಾದಲ್ಲಿ ಷೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ಮೇಲೆ ಕಾಣಿಸಿದವರಿಗಲ್ಲದೆ ಬೇರೆ ಯಾರಿಗೂ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿಯಾಗಲೀ ಇಲ್ಲವೆಂದೇ ಪರಿಗಣಿಸಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಖರೀದಿಸುವರು.

ಷೆಡ್ಯೂಲ್ ಸ್ವತ್ತಿನ ವಿವರ: ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಮಂಡಕಳ್ಳಿ ಗ್ರಾಮಕ್ಕೆ ಸೇರಿದ ಶ್ರೀಮತಿ ಮಹದೇವಮ್ಮ ರವರ ಹೆಸರಿನಲ್ಲಿ ಖಾತೆಯನ್ನು ಹೊಂದಿರುವ ಸರ್ವೆ ನಂ. 292/17, ಒಟ್ಟು ವಿಸ್ತೀರ್ಣ 1 ಎಕರೆ 15 ಗುಂಟೆ ಜಮೀನಿನ ಪೈಕಿ, 0-15 ಗುಂಟೆ ವಿಸ್ತೀರ್ಣದ ಜಮೀನು (ಮೈಸೂರು ತಾಲ್ಲೂಕು, ತಹಶೀಲ್ದಾರ್‌ರವರ ಕಛೇರಿಯಿಂದ ನೀಡಿರುವ 11ಇ ಸ್ಕೆಚ್ ಸಂಖ್ಯೆ 26041023628989001 ರಲ್ಲಿ ಬ್ಲಾಕ್ 2 ಎಂದು ನಮೂದಿಸಿರುವ ಪ್ರಕಾರ), ಈ ಸ್ವತ್ತಿಗೆ ಚಕ್ಕುಬಂದಿ, ಪೂರ್ವಕ್ಕೆ : ಬ್ಲಾಕ್ 1, ಪಶ್ಚಿಮಕ್ಕೆ : ಲಾ.ಹಿ. 21, 22, 23, ಉತ್ತರಕ್ಕೆ : ಲಾ.ಹಿ. 16, ದಕ್ಷಿಣಕ್ಕೆ : ರಸ್ತೆ.

ಕೆ.ಎನ್. ಮಹಾದೇವಸ್ವಾಮಿ, ಬಿ.ಎಸ್‌ಸಿ., ಎಲ್.ಎಲ್.ಬಿ., ವಕೀಲರು ಮತ್ತು ನೋಟರಿ, ನಂ. 725, 727, ರೂಂ ನಂ.ಎಫ್-1 ಮತ್ತು 2, ಒಂದನೇ ಮಹಡಿ, 5ನೇ ಕ್ರಾಸ್, ಅಲ್ಲಮ್ಮ ಪ್ರಭು ಕಾಂಪ್ಲೆಕ್ಸ್, ರಾಮನುಜ ರಸ್ತೆ, ಮೈಸೂರು-570 004. ಮೊ. : 94482-22522, ಆಫೀಸ್ ನಂ. : 0821-4287998.

ದಿನಾಂಕ : 23-11-2023

ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ

ಮೆಗಾ ಡೈರಿ ಸಂಕೀರ್ಣ, ಬನ್ನೂರು ರಸ್ತೆ, ಆಲನಹಳ್ಳಿ ಅಂಚೆ, ಮೈಸೂರು - 570028.
ದೂರವಾಣಿ ಸಂಖ್ಯೆ:0821-2473923, ಫ್ಯಾಕ್ಸ್ ನಂ.0821-2474476,
ಇ-ಮೇಲ್ : transportmymul@gmail.com

ಸಂಖ್ಯೆ:03-04/ಸಾರಿಗೆ-ಮಾರುಕಟ್ಟೆ/ಮೈಮುಲ್/2023 ದಿನಾಂಕ: 23.11.2023

ಟೆಂಡರ್ ಪ್ರಕಟಣೆ (ಇ-ಟೆಂಡರ್ ಮುಖಾಂತರ ಮಾತ್ರ)

ಮೈಸೂರು ಜಿಲ್ಲಾ ಸಹಕಾರಿ ಹಾಲು ಒಕ್ಕೂಟಕ್ಕೆ ಅವಶ್ಯವಿರುವ ಈ ಕೆಳಕಂಡ ಸೇವೆಗಳನ್ನು ನೀಡಲು ಅರ್ಹ ಟೆಂಡರ್‌ದಾರರಿಂದ ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ಟೆಂಡರನ್ನು ಆಹ್ವಾನಿಸಲಾಗಿದೆ. ಟೆಂಡರ್ ದಾಸ್ತಾವೇಜುಗಳನ್ನು ಕರ್ನಾಟಕ ಸರ್ಕಾರದ ಇ-ಪ್ರೊಕ್ಯೂರ್‌ಮೆಂಟ್ ಪ್ಲಾಟ್‌ಫಾರಂ ಅಡಿ www.kppp.karnataka.gov.in ಅಪ್‌ಲೋಡ್ ಮಾಡಬಹುದಾಗಿರುತ್ತದೆ.

ಕ್ರ. ಸಂ	ಟೆಂಡರ್ ಪ್ರಕಟಣೆ	ಸೇವೆಯ ವಿವರ	ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ
1	IFT No: KMF/ 2023-24/ SE1072	ಒಕ್ಕೂಟದ ಮಾರುಕಟ್ಟೆ ವ್ಯಾಪ್ತಿಯ ನಗರ, ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶಗಳಿಗೆ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಸಾಗಾಣಿಕೆ ಮಾಡಲು ಮತ್ತು ವಿತರಣೆಗಾಗಿ ಈ ಕೆಳಕಂಡ ಸಾಮರ್ಥ್ಯದ ಸಾಗಾಣಿಕೆ ವಾಹನಗಳನ್ನು ಒದಗಿಸಲು ಎರಡು ವರ್ಷಗಳ ಅವಧಿಗೆ ಕಿ.ಮೀ.ಗಳ ಆಧಾರದ ಮೇಲೆ ಗುತ್ತಿಗೆ ಪಡೆಯಲು ಇ-ಟೆಂಡರ್ ಮೂಲಕ ವಿತರಣಾ ಮಾರ್ಗಗಳಿಗೆ 1.5 ಟನ್, 3.0 ಟನ್ ಮತ್ತು 6.0 ಟನ್ ಸಾಮರ್ಥ್ಯದ ಒಕ್ಕೂಟದ ವಿನ್ಯಾಸದಂತೆ ಥರ್ಮೋಕೋಲ್ ಇನ್ಸುಲೇಟೆಡ್ ವಾಹನಗಳನ್ನು ಹೊಂದಿರುವ ಮಾಲೀಕರಿಂದ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ.	22.12.2023 ಸಂಜೆ 5.30 ಗಂಟೆಯವರೆಗೆ

ಹೆಚ್ಚಿನ ಮಾಹಿತಿಗಾಗಿ ವ್ಯವಸ್ಥಾಪಕರು(ಮಾರುಕಟ್ಟೆ) / ಅಧೀಕ್ಷಕರು(ಸಾರಿಗೆ) ಮೊ. 9606922899/6366430832

ಸಹಿ/-, ವ್ಯವಸ್ಥಾಪಕ ನಿರ್ದೇಶಕರು
ಮೈಸೂರು ಜಿಲ್ಲಾ ಸಹಕಾರಿ ಹಾಲು ಒಕ್ಕೂಟ ನಿ.,





ನಾಳೆ ಸಿಎನ್‌ಸಿಯಿಂದ ಕೊಡವ ನ್ಯಾಷನಲ್ ಡೇ

ಕೊಡವ ಲ್ಯಾಂಡ್ ಭೂ–ರಾಜಕೀಯ ಸ್ವಾಯತ್ತತೆ ಸೇರಿದಂತೆ ಹಲವು ಬೇಡಿಕೆಗಳ ಬೇಡಿಕೆಗೆ ಆಗ್ರಹ



ಮಡಿಕೇರಿ, ನ.24– ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ವತಿಯಿಂದ 33ನೇ ವರ್ಷದ ಕೊಡವ ನ್ಯಾಷನಲ್ ಡೇ ಮತ್ತು ಭಾರತೀಯ ಸಂವಿಧಾನ ದಿನದ ಆಚರಣೆ ನ.26ರಂದು ಮಡಿಕೇರಿ ಹೊರವಲಯದ ಕ್ಯಾಪಿಟಲ್ ವಿಲೇಜ್‌ನಲ್ಲಿ ನಡೆಯಲಿದೆ ಎಂದು ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ತಿಳಿಸಿದ್ದಾರೆ. ಪತ್ರಿಕಾ ಹೇಳಿಕೆ ನೀಡಿರುವ ಅವರು ಅಂದು ಬೆಳಗ್ಗೆ 10.30 ಗಂಟೆಗೆ ನಡೆಯುವ ಕಾರ್ಯಕ್ರಮದಲ್ಲಿ ಕೊಡವರ ಸಾಂವಿಧಾನಿಕ ಭದ್ರತೆಗಾಗಿ ಕೊಡವ ಲ್ಯಾಂಡ್ ಭೂ–ರಾಜಕೀಯ ಸ್ವಾಯತ್ತತೆಯ ಪ್ರಮುಖ ಬೇಡಿಕೆಯನ್ನು ಮುಂದಿಟ್ಟುಕೊಂಡು ಹಕ್ಕೊತ್ತಾಯ ಮಂಡಿಸಲಾಗುವುದು ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನದ ದಿನವನ್ನು ಆಚರಿಸಲಾಗುವುದು ಎಂದು ಹೇಳಿದ್ದಾರೆ.

ಈ ಭೂಮಿ ಮತ್ತು ಬುಡಕಟ್ಟು ಜನಾಂಗವಾಗಿರುವ ಕೊಡವರ ಭದ್ರತೆಗಾಗಿ ಸಂವಿಧಾನದ ಆರ್ಟಿಕಲ್ 244 ಆರ್/ಡಬ್ಲ್ಯೂ 6ನೇ ಮತ್ತು 8ನೇ ಶೆಡ್ಯೂಲ್ ಅಡಿಯಲ್ಲಿ ಕೊಡವ ಲ್ಯಾಂಡ್ ಭೂ–ರಾಜಕೀಯ ಸ್ವಾಯತ್ತತೆ ನೀಡುವುದು ಅನಿವಾರ್ಯವೆಂದು ಸಭೆಯಲ್ಲಿ ಪ್ರತಿಪಾದಿಸಲಾಗುವುದು ಎಂದು ನಾಚಪ್ಪ ತಿಳಿಸಿದ್ದಾರೆ.

ಹುದ್ದೆ ಖಾಯಂಗೆ ಆಗ್ರಹಿಸಿ ಅತಿಥಿ ಉಪನ್ಯಾಸಕರ ಪ್ರತಿಭಟನೆ



ಮಡಿಕೇರಿ, ನ.24– ಹುದ್ದೆ ಖಾಯಂಗೊಳಿಸುವಂತೆ ಒತ್ತಾಯಿಸಿ ಕೊಡಗು ಜಿಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘ ಮಡಿಕೇರಿಯಲ್ಲಿ ಪ್ರತಿಭಟನೆ ನಡೆಸಿತು. ಜಿಲ್ಲಾಧಿಕಾರಿಗಳ ಕಚೇರಿ ಎದುರು ಘೋಷಣೆಗಳನ್ನು ಕೂಗಿದ ಸಂಘದ ಪ್ರಮುಖರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಬೇಕು ಮತ್ತು ಸಾಮಾಜಿಕ ಭದ್ರತೆಯನ್ನು ನೀಡಬೇಕೆಂದು ಒತ್ತಾಯಿಸಿದರು.

ಕರ್ನಾಟಕದಾದ್ಯಂತ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸುಮಾರು 14 ಸಾವಿರ ಅತಿಥಿ ಉಪನ್ಯಾಸಕರುಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದರೆ ಇವರುಗಳ ಜೀವನ ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಅತಂತ್ರವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ರಾಜ್ಯ ವ್ಯಾಪಿ ಹೋರಾಟವನ್ನು ಹಮ್ಮಿಕೊಳ್ಳಲಾಗಿದ್ದು, ಕೊಡಗಿನಲ್ಲಿ ಬೆಂಬಲ ಸೂಚಿಸಿ ಪ್ರತಿಭಟನೆ ನಡೆಸಲಾಗುತ್ತಿದೆ. ಸರ್ಕಾರ ತಕ್ಷಣ ನಮ್ಮ ಮನವಿಗೆ ಸ್ಪಂದಿಸಿ ಹುದ್ದೆ ಖಾಯಂಗೊಳಿಸಲು ಕ್ರಮ ಕೈಗೊಳ್ಳಬೇಕು. ತಪ್ಪಿದಲ್ಲಿ ಮುಂದಿನ ದಿನಗಳಲ್ಲಿ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು. ಸಂಘದ ಪ್ರಮುಖರಾದ ಶಾಂತಕುಮಾರ್, ಚಂದ್ರ, ಡೀನಾ, ಕಾವ್ಯ, ವಿದ್ಯಾ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡು ಜಿಲ್ಲಾಡಳಿತದ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ಬಿಳಿಗೇರಿ ಶ್ರೀ ಪರದೇವರ ದೇವಸ್ಥಾನ ಪುನರ್ ಪ್ರತಿಷ್ಠಾಪನೆ



ಮಡಿಕೇರಿ, ನ.24– ಪೌರಾಣಿಕ ಹಿನ್ನೆಲೆಯ ಇತಿಹಾಸ ಪ್ರಸಿದ್ಧ ಮಡಿಕೇರಿ ಸಮೀಪದ ಬಿಳಿಗೇರಿ ಗ್ರಾಮದ ಶ್ರೀ ಪರದೇವರ ದೇವಸ್ಥಾನದ ಪುನರ್ ಪ್ರತಿಷ್ಠಾ ಕಾರ್ಯಕ್ರಮ ನೂರಾರು ಭಕ್ತಾದಿಗಳ ಸಮ್ಮುಖದಲ್ಲಿ, ವಿವಿಧ ಧಾರ್ಮಿಕ ಕೈಂಕರ್ಯಗಳೊಂದಿಗೆ ಸಮಾಪನಗೊಂಡಿತು. ಶ್ರೀ ಪರದೇವರ ದೇವಸ್ಥಾನದ ಪುನರ್ ಪ್ರತಿಷ್ಠಾ ಕಾರ್ಯಗಳು ಕ್ಷೇತ್ರದ ತಂತ್ರಿಗಳಾದ ಉದಯ ಕುಮಾರ್ ಹುಲಿತಾಳ ಅವರ ನೇತೃತ್ವದಲ್ಲಿ ಗುರುವಾರ ಮತ್ತು ಶುಕ್ರವಾರ ಸಾಂಗವಾಗಿ ನೆರವೇರಿತು. ಶ್ರೀ ಪರದೇವರ ದೇವಾಲಯವನ್ನು ಗ್ರಾಮಸ್ಥರ ಮತ್ತು ದಾನಿಗಳ ಸಹಕಾರದಿಂದ 20 ಲಕ್ಷ ರೂ. ವೆಚ್ಚದಲ್ಲಿ ಜೀರ್ಣೋದ್ಧಾರ ಮಾಡಲಾಗಿದ್ದು, ಆರಂಭಿಕ ದಿನವಾದ ನ.23ರಂದು ಸಂಜೆ ಸ್ಥಳ ಶುದ್ಧಿ, ಪಂಚಗವ್ಯ ಪುಣ್ಯಾಹಃ, ದೇವತಾ ಪ್ರಾರ್ಥನೆ, ವಾಸ್ತು ಪೂಜೆ, ವಾಸ್ತು ಬಲಿ, ವಾಸ್ತು ಹೋಮ, ರಾಕ್ಷೋಘ್ನ, ಸುದರ್ಶನ ಹೋಮ ನಡೆದು, ಭಕ್ತಾದಿಗಳಿಗೆ ಅನ್ನಸಂತರ್ಪಣೆ ನಡೆಯಿತು.

ಪರದೇವರ ಮೊಗ ಪ್ರತಿಷ್ಠಾಪನೆ: ಶುಕ್ರವಾರ ಬೆಳಗ್ಗೆ ಗಣಪತಿ ಹೋಮ, ಸಪ್ತಶತಿ ಪಾರಾಯಣ, ನವಕ ಕಲಶ ಪ್ರತಿಷ್ಠೆ, ಕಲಶ ಪೂಜೆಗಳು ನಡೆದವು. ಬೆಳಗ್ಗೆ 8.50ರಿಂದ 10.30ರವರೆಗಿನ ಧನುರ್ ಲಗ್ನದಲ್ಲಿ ಧರಣೇಶ್ ಅವರಿಂದ ಪರದೇವರ ಮೊಗ ಹಾಗೂ ಆಯುಧಗಳ ಪ್ರತಿಷ್ಠಾ ಕಾರ್ಯ ನಡೆಯಿತು. ಬಳಿಕ ದುರ್ಗಾ ಹೋಮ, ಕಲಶಾಭಿಷೇಕ, ಮಹಾ ಪೂಜೆ, ಪ್ರಸಾದ ವಿತರಣೆಯ ಬಳಿಕ ಅನ್ನ ಸಂತರ್ಪಣೆ ನಡೆಯಿತು. ಪ್ರತಿಷ್ಠಾ ಕಾರ್ಯಕ್ರಮದಲ್ಲಿ ಶ್ರೀ ಪರದೇವರ ದೇವಸ್ಥಾನದ ತಕ್ಕರಾದ ಪುರುಷೋತ್ತಮ ರೈ, ಶ್ರೀ ಭಗವತಿ ದೇವಾಲಯದ ಅಧ್ಯಕ್ಷ ಪರ್ಲಕೋಟಿ ಅಣ್ಣಿ ಮಾಚಯ್ಯ, ಶ್ರೀ ಪರದೇವರ ದೇವಸ್ಥಾನದ ಅಧ್ಯಕ್ಷ ಶ್ರೀ ಕೋಟೇರ ಶರಿ ಮುದ್ದಪ್ಪ, ಕಾರ್ಯದರ್ಶಿ ಐರೀರ ಎನ್.ಬೋಪಯ್ಯ, ಸದಸ್ಯರಾದ ಮಂಞೀರ ಕೆ.ಉಮೇಶ್ ಅಪ್ಪಣ್ಣ ಸೇರಿದಂತೆ ಭಕ್ತಾದಿಗಳು ಪಾಲ್ಗೊಂಡಿದ್ದರು.

ಅರ್ಜಿ ಆಹ್ವಾನ

ಮಡಿಕೇರಿ, ನ.24– ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಯೋಜನೆ ಗಳಾದ ಧನಶ್ರೀ ಯೋಜನೆ, ಲಿಂಗತ್ವ ಅಲ್ಪ ಸಂಖ್ಯಾತರ ಪುನರ್ವಸತಿ ಯೋಜನೆ, ಚೇತನ ಯೋಜನೆಗಳಿಗೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ. ಅರ್ಜಿದಾರರು ಹತ್ತಿರದ ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಕರ್ನಾಟಕ ಒನ್ ಕೇಂದ್ರ ಗಳಲ್ಲಿ ಅರ್ಜಿ ಸಲ್ಲಿಸುವುದು, ಅರ್ಜಿ ಸಲ್ಲಿಸಲು ಡಿ.22ವರೆಗೆ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕೊಡಗು ಜಿಲ್ಲೆ ಹಾಗೂ ಜಿಲ್ಲಾ ಅಭಿವೃದ್ಧಿ ನಿರೀಕ್ಷಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಕಚೇರಿ, ಕೊಡಗು ಜಿಲ್ಲೆ ಇವರನ್ನು ಹಾಗೂ ದೂ. 08272–298379, 9482194105 ಅನ್ನು ಸಂಪರ್ಕಿಸಬಹುದು

ಫೀ.ಮಾ. ಕೆ.ಎಂ. ಕಾರ್ಯಪ್ಪ ಕಾಲೇಜು ವಿದ್ಯಾರ್ಥಿ ಸಂಘಕ್ಕೆ ತೀರ್ಥ ತಂಗಮ್ಮ ಅಧ್ಯಕ್ಷೆ

ಶ್ರೇಯಾಂಕದ ಆಧಾರದಲ್ಲಿ ಚುನಾವಣೆಯಲ್ಲಿ ಆಯ್ಕೆ



ಮಡಿಕೇರಿ, ನ.24– ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜಿನಲ್ಲಿ 2023–24ನೇ ಸಾಲಿಗೆ ವಿದ್ಯಾರ್ಥಿ ಸಂಘದ ಚುನಾವಣೆಯನ್ನು ಶ್ರೇಯಾಂಕದ ಆಧಾರದಲ್ಲಿ ನಡೆಸಲಾಯಿತು.

ವಿದ್ಯಾರ್ಥಿ ಸಂಘದ ಅಧ್ಯಕ್ಷರಾಗಿ ತೃತೀಯ ಬಿಎಸ್ಸಿಯ ವಿದ್ಯಾರ್ಥಿನಿ ತೀರ್ಥ ತಂಗಮ್ಮ, ಉಪಾಧ್ಯಕ್ಷರಾಗಿ ಮಾನಸ ಪಿ.ಪಿ, ಕಾರ್ಯದರ್ಶಿಯಾಗಿ ಪುಷ್ಪ ಪೂವಮ್ಮ ಕೆ.ಎನ್, ಜಂಟಿ ಕಾರ್ಯದರ್ಶಿಯಾಗಿ ದ್ವಿತೀಯ ಬಿ.ಎ ವಿಭಾಗದ ಮಹೇಂದ್ರ ಎನ್.ವಿ ಹಾಗೂ ದ್ವಿತೀಯ ಬಿಹೆಚ್ ಆರ್‌ಡಿಯ ಅಲೀನಾ ಜಸ್ಮ, ಸಾಂಸ್ಕೃತಿಕ ಕಾರ್ಯದರ್ಶಿಯಾಗಿ ತೃತೀಯ ಬಿ.ಎ ವಿಭಾಗದ ಅಭಿಷೇಕ್ ಎಂ.ಎಸ್ ಹಾಗೂ ಮಾನಸ ಬಿ.ಕೆ ಆಯ್ಕೆಯಾಗಿದ್ದಾರೆ. ಹಿಂದಿ ವಿಭಾಗದ ಮುಖ್ಯಸ್ಥರು ಹಾಗೂ ವಿದ್ಯಾರ್ಥಿ ಸಂಘದ ಸಂಚಾಲಕರಾದ ತಳವಾರ್ ಬಿ.ಹೆಚ್ ಅವರು ಚುನಾವಣಾ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದರು.

ಕಾಲೇಜು ಪ್ರಾಂಶುಪಾಲ ಮೇಜರ್ ಪ್ರೊ ರಾಘವ ಬಿ. ಅವರ ನೇತೃತ್ವದಲ್ಲಿ ಅಧ್ಯಾಪಕರ ಸಹಕಾರದೊಂದಿಗೆ ಚುನಾವಣೆ ನಡೆಸಲಾಯಿತು. ತರಗತಿ ಪ್ರತಿನಿಧಿಗಳು ತಮ್ಮ ಮತಗಳನ್ನು ಮತಪೆಟ್ಟಿಗೆಗೆ ಹಾಕುವ ಮೂಲಕ ಕಾಲೇಜಿನ ವಿದ್ಯಾರ್ಥಿ ಸಂಘಕ್ಕೆ ಪದಾಧಿಕಾರಿಗಳನ್ನು ಆಯ್ಕೆ ಮಾಡಿದರು. ಕಾಲೇಜಿನ ಐಕ್ಯೂಎಸ್‌ಸಿ ಸಂಚಾಲಕ ಡಾ.ರಾಜೇಂದ್ರ ಆರ್, ಅರ್ಥಶಾಸ್ತ್ರ ಪ್ರೊ.ತಿಪ್ಪೇಸ್ವಾಮಿ, ಹಿಂದಿ ವಿಭಾಗದ ಡಾ.ಶ್ರೀಧರ್ ಹೆಗ್ಡೆ, ಅರ್ಥಶಾಸ್ತ್ರ ವಿಭಾಗದ ಡಾ.ರೇಣುಶ್ರೀ, ಇಂಗ್ಲೀಷ್ ವಿಭಾಗದ ಮುಖ್ಯಸ್ಥ ರಮೇಶ್, ಇಂಗ್ಲೀಷ್ ಸ್ನಾತಕೋತ್ತರ ವಿಭಾಗದ ಸಂಯೋಜಕ ಪೂಣಚ್ಚ, ಅತಿಥಿ ಉಪನ್ಯಾಸಕರಾದ ರಾಜೀವ್.ಪಿ, ಖುರ್ಷಿದಾ ಬಾನು, ಡೀನಾ, ಮೋನಿಕಾ, ಪ್ರದೀಪ್ ಹಾಗೂ ಕಾಂಚನ ಉಪಸ್ಥಿತರಿದ್ದು ಚುನಾವಣಾ ಪ್ರಕ್ರಿಯೆ ನಿರ್ವಹಿಸಿದರು.

ಗ್ರಂಥಾಲಯಗಳು ಸಾರ್ವಜನಿಕ ಸ್ನೇಹಿಯಾಗಿರಲಿ: ಸಿಆರ್‌ಎಸ್



ಮದ್ದೂರು, ನ.24– ಸಾರ್ವಜನಿಕರು ಹಾಗೂ ಮಕ್ಕಳನ್ನು ಓದಿನತ್ತ ಕರೆತರಲು ಗ್ರಂಥಾಲಯಗಳು ಪ್ರಮುಖ ಪಾತ್ರ ವಹಿಸುತ್ತವೆ. ಹೀಗಾಗಿ ಗ್ರಂಥಾಲಯಗಳು ಸಾರ್ವಜನಿಕ ಸ್ನೇಹಿಯಾಗಲಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು.

ತಾಲೂಕಿನ ಸಾದೊಳಲು ಗ್ರಾಮದಲ್ಲಿ ಡಿಜಿಟಲ್ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮದ್ದೂರು ತಾಲೂಕಿನ ಸಾದೊಳಲು ಗ್ರಾಮದ ಸರ್ಕಾರಿ ಶಾಲೆ ಮಕ್ಕಳ ಕೊರತೆಯಿಂದ ಮುಚ್ಚುವ ಸ್ಥಿತಿ ಇತ್ತು. ಇದನ್ನು ಗಮನಿಸಿದ ಪಿಡಿಓ, ಗ್ರಾಪಂ ಸದಸ್ಯರು ಹಾಗೂ ಸಾರ್ವಜನಿಕರು ಡಿಜಿಟಲ್ ಗ್ರಂಥಾಲಯ ಪ್ರಾರಂಭಿಸಿದ್ದಾರೆ. ಇದಕ್ಕೆ ಶ್ರಮಿಸಿದ ಎಲ್ಲರಿಗೂ ಅಭಿನಂದನೆಗಳು. ಜಿಲ್ಲೆಯ ಎಲ್ಲಾ ಗ್ರಾಪಂಗಳು ಇದೇ ಮಾದರಿ ನಡೆಯಲಿ. ಗ್ರಾಮದಿಂದ ಆಯ್ಕೆಯಾದ ಸದಸ್ಯರು ಗ್ರಾಮದ ಅಭಿವೃದ್ಧಿಗೆ ಶ್ರಮ ವಹಿಸಿ ಕೆಲಸ ಮಾಡಲಿ ಎಂದರು. ಈ ವೇಳೆ ಶಾಸಕ ಕೆ.ಎಂ.ಉದಯ್, ಗ್ರಾಪಂ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

ಕೆ.ಆರ್.ಪೇಟೆ: ವಿದ್ಯುತ್ ಅವಘಡಕ್ಕೆ ಬಡ ರೈತ ಬಲಿ



ಕೆ.ಆರ್.ಪೇಟೆ, ನ.24–ಇತ್ತೀಚೆಗೆ ಬೆಂಗಳೂರಿನಲ್ಲಿ ತುಂಡಾಗಿ ಬಿದ್ದಿದ್ದ ವಿದ್ಯುತ್ ತಂತಿ ತುಳಿದು ತಾಯಿ ಮತ್ತು ಹಸುಳೆ ಸಾವನ್ನಪ್ಪಿದ ಪ್ರಕರಣದಲ್ಲಿ ಪೊಲೀಸರು ಬೆಸ್ಕಾಂನ ಐವರು ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಿದ್ದು, ಅವರೆಲ್ಲರೂ ಅಮಾನತುಗೊಂಡಿದ್ದಾರೆ. ಆದರೂ ಕೂಡ ವಿದ್ಯುತ್ ಇಲಾಖೆ ಎಚ್ಚೆತ್ತುಕೊಂಡಿಲ್ಲ. ಕೆ.ಆರ್.ಪೇಟೆ ತಾಲೂಕು ಕಟ್ಟೆ ಕ್ಯಾತನಹಳ್ಳಿ ಗ್ರಾಮದಲ್ಲಿ ತುಂಡಾಗಿ ಬಿದ್ದಿದ್ದ ವಿದ್ಯುತ್ ತಂತಿ ತುಳಿದು ರೈತ ಸಾವನ್ನಪ್ಪಿದ ಘಟನೆ ಸಂಭವಿಸಿದೆ.

ಇದೂ ಕೂಡ ಚೆಸ್ಕಾಂ ಅಧಿಕಾರಿಗಳ ನಿರ್ಲಕ್ಷ್ಯತೆಯಿಂದಲೇ ನಡೆದಿದೆ ಎಂಬ ಆರೋಪಗಳು ಕೇಳಿಬಂದಿವೆ. ರಾಚೇನಹಳ್ಳಿ ಗ್ರಾಮದ ರವಿಕುಮಾರ್(43) ವಿದ್ಯುತ್ ಸ್ಪರ್ಶಕ್ಕೆ ಬಲಿಯಾದವರಾಗಿದ್ದು, ಇವರು ಕಟ್ಟೆ ಕ್ಯಾತನಹಳ್ಳಿಯಲ್ಲಿರುವ ತಮ್ಮ ಜಮೀನಿನಲ್ಲಿ ಜಾನುವಾರುಗಳಿಗೆ ಹುಲ್ಲು ಕೊಯ್ದು ತರಲು ಗುರುವಾರ ಮಧ್ಯಾಹ್ನ 2 ಗಂಟೆ ಸುಮಾರಿನಲ್ಲಿ ತೆರಳಿದಾಗ ಜಮೀನಿನಲ್ಲಿ ತುಂಡಾಗಿ ಬಿದ್ದಿದ್ದ ವಿದ್ಯುತ್ ತಂತಿ ತುಳಿದು ಸಾವನ್ನಪ್ಪಿದ್ದಾರೆ.

ಜಮೀನಿಗೆ ಹೋದವರು ಸಂಜೆಯಾದರೂ ಹಿಂತಿರುಗದ ಕಾರಣ ಕುಟುಂಬದವರು ರಾತ್ರಿ ಜಮೀನಿಗೆ ಹೋಗಿ ನೋಡಿದಾಗ ರವಿಕುಮಾರ್ ವಿದ್ಯುತ್ ಸ್ಪರ್ಶದಿಂದ ಸಾವನ್ನಪ್ಪಿರುವುದು ಗೊತ್ತಾಗಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಕೆ.ಆರ್.ಪೇಟೆ ಗ್ರಾಮಾಂತರ ಠಾಣೆ ಪೊಲೀಸರು ಗುರುವಾರ ರಾತ್ರಿಯೇ ದೇಹವನ್ನು ಕೆ.ಆರ್.ಪೇಟೆ ಸಾರ್ವಜನಿಕ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗಾಗಿ ರವಾನಿಸಿದ್ದರು. ಇಂದು ಸಾರ್ವಜನಿಕ ಆಸ್ಪತ್ರೆಗೆ ಆಗಮಿಸಿದ ಶಾಸಕ ಹೆಚ್.ಟಿ.ಮಂಜು ಸಹೋದರ ಹೆಚ್.ಟಿ.ಲೋಕೇಶ್, ತಾಲೂಕು ಜೆಡಿಎಸ್ ಅಧ್ಯಕ್ಷ ಜಾನಕಿ ರಾಂ, ತಾಲೂಕು ಪಂಚಾಯ್ತಿ ಮಾಜಿ ಸದಸ್ಯ ಮೋಹನ್ ಹಾಗೂ ಗ್ರಾಮಸ್ಥರು ಚೆಸ್ಕಾಂ ಅಧಿಕಾರಿಗಳ ವಿರುದ್ಧ ಪ್ರತಿಭಟನೆ ನಡೆಸಿದರು. ಈ ವೇಳೆ ಸ್ಥಳಕ್ಕಾಗಮಿಸಿದ ಕೆ.ಆರ್.ಪೇಟೆ ವಿಭಾಗದ ಚೆಸ್ಕಾಂ ಕಾರ್ಯನಿರ್ವಾಹಕ ಇಂಜಿನಿಯರ್ ವೈ.ಆರ್.ವಿನುತ ಅವರು ಗ್ರಾಮಸ್ಥರ ಮನವೊಲಿಸಿ ರವಿಕುಮಾರ್ ಪತ್ನಿ ನಂದಿನಿ ಅವರಿಗೆ 5 ಲಕ್ಷ ರೂ. ಪರಿಹಾರದ ಚೆಕ್ಕನ್ನು ನೀಡಿ ಸಾಂತ್ವನ ಹೇಳಿದರು. ಈ ಸಂಬಂಧ ಕೆ.ಆರ್.ಪೇಟೆ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಹೆಚ್.ಡಿ.ಕೋಟೆ ತಾಲೂಕು ನಾಗರಹೊಳೆ ಅಭಯಾರಣ್ಯ ವ್ಯಾಪ್ತಿಗೊಳಪಟ್ಟ ಆನೆಮಾಳ ಗ್ರಾಮದಲ್ಲಿ ಕಟ್ಟಡದ ಮೇಲೆ ಕಾಂಕ್ರೀಟ್ ಸುರಿಸುತ್ತಿದ್ದ ವೇಳೆ ಯಂತ್ರ ವಿದ್ಯುತ್ ತಂತಿಗೆ ತಗುಲಿ ಹೆಚ್.ಡಿ.ಕೋಟೆಯ ಪ್ರವೀಣ್ ಎಂಬುವರು ಗುರುವಾರ ಸಾವನ್ನಪ್ಪಿದ್ದನ್ನು ಸ್ಮರಿಸಬಹುದು.

ದೊಡ್ಡರಸಿನಕೆರೆಯಲ್ಲಿ ಅಂಬರೀಶ್ 5ನೇ ಪುಣ್ಯಸ್ಮರಣೆ

ಅಂಬಿ ಸಮಾಧಿಗೆ ಪೂಜೆ, ಪುತ್ಥಳಿಗೆ ಮಾಲಾರ್ಪಣೆ



ಭಾರತೀನಗರ, ನ.24– ಇಲ್ಲಿಗೆ ಸಮೀಪದ ದೊಡ್ಡರಸಿನಕೆರೆ ಗ್ರಾಮದಲ್ಲಿ ನಟ ದಿ.ಅಂಬರೀಶ್ ಅವರ 5ನೇ ವರ್ಷದ ಪುಣ್ಯಸ್ಮರಣೆ ನಡೆಯಿತು.

ಗ್ರಾಮದ ಹೆಬ್ಬಾಗಿಲ ಬಳಿಯ ಕೆರೆ ದಡದಲ್ಲಿ ಅಂಬರೀಶ್ ಅವರ ಚಿತಾಭಸ್ಮವನ್ನಿಟ್ಟು ನಿರ್ಮಿಸಲಾಗಿರುವ ಸಮಾಧಿಗೆ ಸಂಸದೆ ಸುಮಲತಾ ಅಂಬರೀಶ್ ಅವರು ಗಂಧದಕಡ್ಡಿ, ಕರ್ಪೂರದಾರತಿ ಬೆಳಗಿಸಿ ಪೂಜೆ ಸಲ್ಲಿಸಿ ಸಮಾಧಿ ಸುತ್ತ ಪ್ರದಕ್ಷಿಣೆ ಹಾಕಿ ನಮಸ್ಕರಿಸಿದರು. ಬಳಿಕ ಗ್ರಾಮದ ಮಧ್ಯ ಭಾಗದಲ್ಲಿ ನಿರ್ಮಿಸಿರುವ ಅಂಬರೀಶ್ ಪುತ್ಥಳಿಗೆ ಸುಮಲತಾ ಅಂಬರೀಶ್, ಚಿತ್ರನಟ ದೊಡ್ಡಣ್ಣ, ನಿರ್ಮಾಪಕ ರಾಕ್‌ಲೈನ್ ವೆಂಕಟೇಶ್ ಮಾಲಾರ್ಪಣೆ ಮಾಡಿದರು. ಈ ವೇಳೆ ಗ್ರಾಮದಲ್ಲಿ ನೆರೆದಿದ್ದ ಅಂಬರೀಶ್ ಅಭಿಮಾನಿಗಳು ರೆಬೆಲ್‌ಸ್ಟಾರ್ ಅಂಬರೀಶ್‌ಗೆ ಜಯವಾಗಲೀ, ಮತ್ತೆ ಅಂಬಿ ಹುಟ್ಟಿ ಬರಲಿ ಎಂದು ಜೈಕಾರ ಕೂಗಿದರು.

ಈ ಸಂದರ್ಭ ಜಿಪಂ ಮಾಜಿ ಅಧ್ಯಕ್ಷ ಬಿ.ವಿವೇಕಾನಂದ್, ಮಾಜಿ ಸದಸ್ಯ ಎ.ಟಿ.ಬಲ್ಲೇಗೌಡ, ರಘು, ಡೈರಿ ಶಿವ, ಮಹೇಂದ್ರ, ರಘು, ಪ್ರಸನ್ನ, ಅಮರ್, ಶಶಿ, ಮಹೇಶ್, ಕೃಷ್ಣ, ಜಗದೀಶ್ ಸೇರಿದಂತೆ ಅಂಬಿ ಅಭಿಮಾನಿಗಳು ಉಪಸ್ಥಿತರಿದ್ದರು.

ಬ್ಯಾಡ್ ಮ್ಯಾನರ್ಸ್ ಪೋಸ್ಟರ್ ಬಿಡುಗಡೆ: ನನ್ನ ಪುತ್ರ ಅಭಿಷೇಕ್ ಅಂಬರೀಶ್ ನಟಿಸಿರುವ ಬ್ಯಾಡ್ ಮ್ಯಾನರ್ಸ್ ಚಿತ್ರ ಇಂದು ಬಿಡುಗಡೆಗೊಂಡಿದೆ. ಇದು ನನ್ನ ಮಗನ 2ನೇ ಚಿತ್ರ. ಈ ಹಿಂದೆಯೇ ಬಿಡುಗಡೆಗೊಳ್ಳಬೇಕಿತ್ತು. ಆದರೆ ಅನಿವಾರ್ಯ ಕಾರಣಗಳಿಂದ ತಡವಾಯಿತು. ಅಂಬರೀಶ್ ಅವರ 5ನೇ ಪುಣ್ಯಸ್ಮರಣೆಯಂದು ಬಿಡುಗಡೆಗೊಂಡಿರುವುದು ಸಂತಸ ತಂದಿದೆ. ಅಂಬರೀಶ್ ಅವರ ಆಶೀರ್ವಾದಿಂದಲೇ ಈ ದಿನ ಚಿತ್ರ ಬಿಡುಗಡೆಯಾಗಿರಬಹುದು ಎಂದು ಅಭಿಮಾನಿಗಳೊಂದಿಗೆ ಸಂಸದೆ ಸುಮಲತಾ ಅಂಬರೀಶ್ ಪೋಸ್ಟರ್ ಬಿಡುಗಡೆಗೊಳಿಸಿದರು.

ಅಂಬಿ ಮರೆಯದ ಅಭಿಮಾನಿಗಳು: ಅಂಬರೀಶ್ ಅವರನ್ನು ಕಳೆದುಕೊಂಡು 5 ವರ್ಷ ಕಳೆದಿದ್ದರೂ, ಅಭಿಮಾನಿಗಳು ಮಾತ್ರ ಅಂಬರೀಶ್ ಅವರನ್ನು ಮರೆತ್ತಿಲ್ಲ. ನಾನು ಎಲ್ಲಿಗೆ ಹೋದರೂ ಅಂಬರೀಶ್ ಅವರಿಗೆ ಜೈಕಾರ ಹಾಕುವುದು. ಅಂಬರೀಶ್ ಚಿತ್ರಗಳ ಬಗ್ಗೆ ಚರ್ಚಿಸುವುದು ಸಾಮಾನ್ಯವಾಗಿದೆ. ಇದರಿಂದಲೇ ಗೊತ್ತಾಗುತ್ತೆ ಅಂಬರೀಶ್ ಅವರ ಮೇಲೆ ಎಷ್ಟು ಅಭಿಮಾನ ಇಟ್ಟಿದ್ದಾರೆ ಎಂದು. ಹಾಗಾಗಿ ನಾನು ಸಹ ಅಭಿಮಾನಿಗಳನ್ನು ಗೌರವಿಸುತ್ತೇನೆ ಎಂದು ಸುಮಲತಾ ತಿಳಿಸಿದರು.

ನಿಗದಿತ ಅವಧಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸಿ: ಡಾ.ಪಿ.ಸಿ.ಜಾಫರ್



ಮಂಡ್ಯ, ನ.24– ಜಿಲ್ಲಾ ಪಂಚಾಯತ್ ಲಿಂಕ್ ಡಾಕ್ಯೂಮೆಂಟ್ ಅಡಿ ಮಂಜೂರಾಗಿರುವ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಪಿ.ಸಿ.ಜಾಫರ್ ತಿಳಿಸಿದರು.

ನಗರದ ಜಿಪಂ ಸಭಾಂಗಣದಲ್ಲಿ ನಡೆದ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಪಂ ಲಿಂಕ್ ಡಾಕ್ಯೂಮೆಂಟ್‌ನಲ್ಲಿ 250 ಕಾಮಗಾರಿಗೆ ಆಡಳಿತಾತ್ಮಕ ಮಂಜೂರಾತಿ ಆಗಿದೆ. ಕರಾರು ಮಾಡಿಕೊಂಡಿರುವ ಕೆಲವು ಕಾಮಗಾರಿಗಳು ಪ್ರಾರಂಭವಾಗಿಲ್ಲ. ಈ ಬಗ್ಗೆ ಸಂಬಂಧಿಸಿದ ಇಲಾಖಾಧಿಕಾರಿಗಳು ಇಂಜಿನಿಯರಿಂಗ್ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಕೆಲಸಗಳು ಪ್ರಾರಂಭವಾಗುವಂತೆ ನೋಡಿಕೊಳ್ಳಬೇಕು. ಕೆಲಸಗಳು ಪ್ರಾರಂಭವಾಗದಿದ್ದರೆ ಇಲಾಖೆಗಳಿಗೆ ತೊಂದರೆಯಾಗುತ್ತದೆ ಎಂಬುದನ್ನು ಅಧಿಕಾರಿಗಳು ಅರ್ಥ ಮಾಡಿಕೊಳ್ಳಬೇಕು ಎಂದರು.

ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪ್ರಾರಂಭಿಸಿ ಆರ್ಥಿಕ ವರ್ಷದಲ್ಲೇ ಅನುದಾನ ವೆಚ್ಚ ಮಾಡುವುದು. ಅನುದಾನ ವೆಚ್ಚವಾಗದೇ ಉಳಿದಲ್ಲಿ ಮುಂದಿನ ಸಾಲಿಗೆ ಅದನ್ನು ನೀಡಲು ಸಾಧ್ಯವಿಲ್ಲ. ಈ ಹಿನ್ನೆಲೆಯಲ್ಲಿ ಉಳಿದಿರುವ ದಿನಗಳಲ್ಲಿ ಶೀಘ್ರಗತಿಯಲ್ಲಿ ಕಾರ್ಯ ನಿರ್ವಹಿಸಿ. ವಿವಿಧ ಯೋಜನೆಗಳಡಿ ಸಾಮಾನ್ಯ ಸಭೆಯಲ್ಲಿ ಆಯ್ಕೆಯಾಗಬೇಕಿರುವ ಫಲಾನುಭವಿಗಳ ಪಟ್ಟಿಯನ್ನು ನಿಯಮಾನುಸಾರ ಸಲ್ಲಿಸುವಂತೆ ತಿಳಿಸಿದರು. ಜಿಪಂ ಸಿಇಓ ಶೇಖ್ ತನ್ವೀರ್ ಆಸೀಫ್ ಅವರು ಜಿಲ್ಲೆಯ ಬರ ಪರಿಸ್ಥಿತಿ ಹಾಗೂ ಕೈಗೊಂಡಿರುವ ಕ್ರಮಗಳ ಬಗ್ಗೆ ವಿವರಿಸಿದರು. ಸಭೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಲಭ್ಯವಿರುವ, ಬೆಳೆಯುವ ಮೇವು ಸಂರಕ್ಷಿಸಿಕೊಳ್ಳಿ

ರೈತರಿಗೆ ಜಿಲ್ಲಾಧಿಕಾರಿ ಸಿ.ಟಿ.ಶಿಲ್ಪಾನಾಗ್ ಮನವಿ



ಚಾಮರಾಜನಗರ, ನ.24– ಪ್ರಸಕ್ತ ಸಾಲಿನಲ್ಲಿ ನೈರುತ್ಯ ಮುಂಗಾರು ಕೊರತೆಯಿಂದಾಗಿ ಜಿಲ್ಲೆಯ 5 ತಾಲೂಕುಗಳನ್ನು ತೀವ್ರ, ಸಾಧಾರಣ ಬರಪೀಡಿತ ತಾಲೂಕುಗಳೆಂದು ಸರ್ಕಾರ ಘೋಷಣೆ ಮಾಡಿದೆ. ಹೀಗಾಗಿ ಜಿಲ್ಲೆಯಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ರೈತರು ತಮ್ಮ ಬಳಿ ಲಭ್ಯವಿರುವ ಮೇವು ಹಾಗೂ ಮುಂದಿನ ದಿನಗಳಲ್ಲಿ ಬೆಳೆಯುವ ಮೇವನ್ನು ಸಂರಕ್ಷಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಟಿ.ಶಿಲ್ಪಾನಾಗ್ ಮನವಿ ಮಾಡಿದ್ದಾರೆ.

2.59 ಲಕ್ಷ ಜಾನುವಾರುಗಳು: ಜಿಲ್ಲೆಯಲ್ಲಿ 20ನೇ ಜಾನುವಾರು ಗಣತಿ ಪ್ರಕಾರ ಒಟ್ಟು 2,59,279 ದನ, ಕರು, ಎಮ್ಮೆಗಳಿದ್ದು, 2,78,199 ಕುರಿ, ಮೇಕೆಗಳಿವೆ. ಈ ಎಲ್ಲಾ ಜಾನುವಾರುಗಳಿಗೆ ಜಿಲ್ಲೆಯಲ್ಲಿ ಒಟ್ಟು 20 ವಾರಕ್ಕೆ ಸಾಕಾಗುವಷ್ಟು ಮೇವು ಲಭ್ಯವಿದೆ. ಮುಂದಿನ ದಿನಗಳಲ್ಲಿ ವಾರಕ್ಕೆ 11,870 ಮೆಟ್ರಿಕ್ ಟನ್ ಮೇವು ಬೇಕಾಗಿರುವುದರಿಂದ 6 ತಿಂಗಳಿಗೆ ಒಟ್ಟು 2,84,880 ಮೆಟ್ರಿಕ್ ಟನ್ ಮೇವು ಅವಶ್ಯಕತೆ ಇದೆ.

"ಜಾನುವಾರುಗಳ ಮೇವಿನ ಕೊರತೆ ನೀಗಿಸಲು ಮೇವಿನ ಬೀಜದ ಕಿರುಪೊಟ್ಟಣವನ್ನು ಉಚಿತವಾಗಿ ಜಿಲ್ಲಾದ್ಯಂತ ವಿತರಿಸಲಾಗುತ್ತಿದ್ದು, ನೀರಾವರಿ ಸೌಲಭ್ಯ ಹೊಂದಿರುವ ರೈತರು ಮೇವನ್ನು ಬೆಳೆದು ಸಂರಕ್ಷಿಸಿಕೊಳ್ಳಲು ಹಾಗೂ ಜಾನುವಾರು ಸಂರಕ್ಷಿಸಲು ಉತ್ತೇಜಿಸಲಾಗಿದೆ. ತೀವ್ರ ಬರದ ಕೊರತೆ ಉಂಟಾದಲ್ಲಿ ಸರ್ಕಾರ ನೀಡುವ ನಿರ್ದೇಶನ ದಂತೆ ಕ್ರಮ ವಹಿಸಲಾಗುವುದು.



ಸಿ.ಟಿ.ಶಿಲ್ಪಾನಾಗ್, ಜಿಲ್ಲಾಧಿಕಾರಿ.

ಜಿಲ್ಲೆಯ ರೈತರು ಕೃಷಿ ಜಮೀನಿನಲ್ಲಿ ಬೆಳೆಯುವ ಧಾನ್ಯಗಳ ಕಟಾವಾದ ಬಳಿಕ ಜಾನುವಾರುಗಳಿಗೆ ತಿನ್ನಲು ಯೋಗ್ಯವಾದ ಭತ್ತ, ಮುಸುಕಿನ ಜೋಳ, ಜೋಳ, ರಾಗಿ, ಕಡಲೆಕಾಯಿ, ಸಿರಿಧಾನ್ಯ, ದ್ವಿದಳ ಧಾನ್ಯಗಳಾದ ಅವರೆ, ಉದ್ದು, ಅಲಸಂದೆ, ತೊಗರಿ, ಹೆಸರುಬೆಳೆ, ಕಡಲೆಕಾಳು, ಹುರುಳಿ ಮುಂತಾದ ಬೆಳೆಗಳ ಹುಲ್ಲುಗಳನ್ನು ಬಣವೆ ಹಾಕಿ ಸಂರಕ್ಷಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ. ರೈತರು ಮೇವನ್ನು ಸುಡದೆ, ನೀರಿನಿಂದ ಕೊಳೆತು ಹೋಗದಂತೆ ಜಾಗರೂಕತೆಯಿಂದ ಶೇಖರಿಸಿಟ್ಟುಕೊಳ್ಳಬೇಕು. ಜಾನುವಾರುಗಳಿಗೆ ಬೇಕಾದ ಮೇವಿನ ಪ್ರಮಾಣಕ್ಕಿಂತ ಹೆಚ್ಚಿಗೆ ಇದ್ದಲ್ಲಿ ಹತ್ತಿರದ ಪಶು ವೈದ್ಯಕೀಯ ಸಂಸ್ಥೆಗಳಲ್ಲಿ ಹೆಚ್ಚಿನ ಮೇವಿನ ಪ್ರಮಾಣ, ದರ, ಹೆಸರು, ವಿಳಾಸ ಮತ್ತು ದೂರವಾಣಿ ಸಂಖ್ಯೆಯನ್ನು ನೋಂದಾಯಿಸಿಕೊಳ್ಳಬೇಕು. ಮುಂದಿನ ದಿನಗಳಲ್ಲಿ ರೈತರಿಗೆ ಮೇವಿನ ಅಭಾವ ಉಂಟಾದಲ್ಲಿ ಮೇವನ್ನು ಖರೀದಿಸಲು ಇಲಾಖೆಯಿಂದ ಕ್ರಮವಹಿಸಲಾಗುವುದು ಎಂದು ತಿಳಿಸಿದ್ದಾರೆ.

ಹೊರ ಜಿಲ್ಲೆ, ರಾಜ್ಯಗಳಿಗೆ ಮೇವು ಸಾಗಾಣಿಕೆ ನಿರ್ಬಂಧ

ಜಿಲ್ಲೆಯಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಬೆಳೆದಿರುವ ಹಾಗೂ ಹಾಲಿ ಲಭ್ಯವಿರುವ ಮೇವನ್ನು ಹೊರ ಜಿಲ್ಲೆ ಮತ್ತು ಹೊರ ರಾಜ್ಯಗಳಿಗೆ ಸಾಗಾಣಿಕೆ ಮಾಡುವುದನ್ನು ನಿರ್ಬಂಧಿಸಿ ಜಿಲ್ಲಾಧಿಕಾರಿ ಸಿ.ಟಿ. ಶಿಲ್ಪಾನಾಗ್ ಆದೇಶ ಹೊರಡಿಸಿದ್ದಾರೆ.

ಜಿಲ್ಲೆಯ ಗಡಿ ಭಾಗದಲ್ಲಿರುವ ಪೊಲೀಸ್ ಠಾಣೆಗಳ ಅಧಿಕಾರಿಗಳು, ಅರಣ್ಯ ಇಲಾಖಾ ವ್ಯಾಪ್ತಿಯ ಚೆಕ್‌ಪೋಸ್ಟ್ ಅಧಿಕಾರಿಗಳು ಈ ಕುರಿತು ಅತ್ಯಂತ ಜಾಗರೂಕರಾಗಿ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಬೇಕು. ಜಿಲ್ಲೆಯಿಂದ ಹೊರ ಜಿಲ್ಲೆ, ರಾಜ್ಯಗಳಿಗೆ ಮೇವು ಸಾಗಾಣಿಕೆ ಮಾಡುವುದು ಕಂಡು ಬಂದಲ್ಲಿ ನಿಯಮಾನುಸಾರ ಕಾನೂನು ಕ್ರಮ ಕೈಗೊಳ್ಳಬೇಕು. ತಪ್ಪಿದಲ್ಲಿ ವಿಪತ್ತು ನಿರ್ವಹಣಾ ಕಾಯ್ದೆ 2005ರ ಪ್ರಕಾರ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಆದೇಶದಲ್ಲಿ ತಿಳಿಸಿದ್ದಾರೆ.

ಶಿಕ್ಷಣ ತಜ್ಞ ದಿ.ಕೆ.ಸಿ.ರಂಗಯ್ಯನವರ ಸೇವೆ ಅನನ್ಯ: ಪಾಪು



ಚಾಮರಾಜನಗರ, ನ.24– ಶಿಕ್ಷಣ ತಜ್ಞ ದಿವಂಗತ ಕೆ.ಸಿ.ರಂಗಯ್ಯನವರ ಸೇವೆ ಅನನ್ಯ. ಅವರನ್ನು ಸ್ಮರಿಸಿಕೊಳ್ಳುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದು ಕೆಸಿ.ರಂಗಯ್ಯ ಅಭಿಮಾನಿ ಬಳಗದ ಅಧ್ಯಕ್ಷ ವೆಂಕಟರಮಣಸ್ವಾಮಿ (ಪಾಪು) ತಿಳಿಸಿದರು.

ಕೆ.ಸಿ.ರಂಗಯ್ಯ ಅವರ 15ನೇ ಪುಣ್ಯಸ್ಮರಣೆ ಅಂಗವಾಗಿ ನಗರದ ಡಾ.ಬಿ.ಆರ್.ಅಂಬೇಡ್ಕರ್ ಸಾರ್ವಜನಿಕ ನಿಲಯದ ಆವರಣದಲ್ಲಿರುವ ಕೆ.ಸಿ.ರಂಗಯ್ಯರವರ ಸ್ಮಾರಕಕ್ಕೆ ಪೂಜೆ ಸಲ್ಲಿಸಿ, ಪ್ರತಿಮೆಗೆ ಮಾಲಾರ್ಪಣೆ ಮಾಡಿ ಅವರು ಮಾತನಾಡಿದರು.

ಶೋಷಿತ ಸಮುದಾಯದವರ ಮನಸ್ಸಿನಲ್ಲಿ ಅಚ್ಚಳಿಯದೇ ಉಳಿದಿರುವ ಕೆ.ಸಿ. ರಂಗಯ್ಯನವರು, ರಾಜ್ಯದಲ್ಲಿ ಯಾವುದೇ ಅನುಕೂಲವಿಲ್ಲದ ಸಂದರ್ಭದಲ್ಲಿ ವಿದ್ಯಾಭ್ಯಾಸ ಮಾಡಿದರು. ಚಾಮರಾಜನಗರದಲ್ಲಿ ವಿದ್ಯಾರ್ಥಿ ನಿಲಯ ಸ್ಥಾಪಿಸಿ ಹಳ್ಳಿಹಳ್ಳಿ ಹೋಗಿ ಬಡವರ ಮಕ್ಕಳನ್ನು ಕರೆತಂದು ಅಕ್ಷರ, ಅನ್ನದಾಸೋಹ ನಡೆಸಿದ್ದಾರೆ. ಅವರು ಕೊಟ್ಟ ವಿದ್ಯಾಭ್ಯಾಸದಿಂದ ಇಂದು ಲಕ್ಷಾಂತರ ಮಂದಿ ಸರ್ಕಾರಿ ನೌಕರರಾಗಿ ಇಡೀ ರಾಜ್ಯಾದ್ಯಂತ ವಿವಿಧ ಇಲಾಖೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದು, ನೆಮ್ಮದಿ ಜೀವನ ಸಾಗಿಸುತ್ತಿದ್ದಾರೆ. ಹೀಗಾಗಿ ಅವರನ್ನು ಸ್ಮರಿಸಿಕೊಳ್ಳುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದರು.

ಇದೇ ವೇಳೆ ಕೆ.ಸಿ.ರಂಗಯ್ಯನವರ 100ನೇ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲು ತೀರ್ಮಾನಿಸಲಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೆ.ಸಿ.ರಂಗಯ್ಯ ಅಭಿಮಾನಿ ಬಳಗ ಒಕ್ಕೂಟದ ಸಂಸ್ಥಾಪಕ ಅಧ್ಯಕ್ಷ ಮಹದೇವಯ್ಯ, ಎಸ್.ಪಿ.ಮಹೇಶ್, ಬಸವಣ್ಣ, ಬಸವರಾಜು, ಕೆಸಿಆರ್ ಕೃಷ್ಣಮೂರ್ತಿ, ಶೀಲಾ, ಪ್ರಜ್ಞ ಭಾಗವಹಿಸಿದ್ದರು.

ಕಾವೇರಿ ಹೋರಾಟ: ಹೆದ್ದಾರಿಯಲ್ಲಿ ಎಳ್ಳು ಚೆಲ್ಲಿ ಪ್ರತಿಭಟನೆ



ಚಾಮರಾಜನಗರ, ನ.24– ತಮಿಳುನಾಡಿಗೆ ನೀರು ಹರಿಸುತ್ತಿರುವ ಕ್ರಮ ಖಂಡಿಸಿ ಕರ್ನಾಟಕ ಸೇನಾ ಪಡೆಯಿಂದ ನಗರದಲ್ಲಿ ಕಳೆದ 74 ದಿನಗಳಿಂದ ನಿರಂತರ ಪ್ರತಿಭಟನೆ ನಡೆಯುತ್ತಿದ್ದು, ಶುಕ್ರವಾರವೂ ಇಲ್ಲಿನ ರಾಷ್ಟ್ರೀಯ ಹೆದ್ದಾರಿಯಲ್ಲಿ ಎಳ್ಳು ಚೆಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಚಾಮರಾಜೇಶ್ವರ ಉದ್ಯಾನವನದ ಎದುರು ಜಮಾಯಿಸಿದ ಪ್ರತಿಭಟನಾಕಾರರು, ಅಲ್ಲಿಂದ ಮೆರವಣಿಗೆಯಲ್ಲಿ ಭುವನೇಶ್ವರಿ ವೃತ್ತಕ್ಕೆ ತೆರಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಎಳ್ಳುಚೆಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರ, ತಮಿಳುನಾಡು ಸರ್ಕಾರ, ಕಾವೇರಿ ನೀರು ನಿರ್ವಹಣಾ ಮಂಡಳಿ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಚಾ.ರಂ.ಶ್ರೀನಿವಾಸಗೌಡ ಮಾತನಾಡಿ, ಕಾವೇರಿ ನೀರು ನಿರ್ವಹಣಾ ಮಂಡಳಿ ಮತ್ತೆ ನಿತ್ಯ 2700 ಕ್ಯುಸೆಕ್ಸ್ ನೀರನ್ನು ತಮಿಳುನಾಡಿಗೆ ಬಿಡುವಂತೆ ಆದೇಶಿಸಿರುವುದು ಅತ್ಯಂತ ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾವೇರಿ ವಿಚಾರದಲ್ಲಿ ಕರ್ನಾಟಕಕ್ಕೆ ಅನ್ಯಾಯವಾಗುತ್ತಿದ್ದರೂ ಸರ್ಕಾರಗಳು, ಕಾವೇರಿ ನೀರು ನಿರ್ವಹಣಾ ಮಂಡಳಿ ಕಣ್ಮುಚ್ಚಿ ಕೊಂಡಿದೆ. ಕೇಂದ್ರ ಸರ್ಕಾರ ಕೂಡಲೇ ಕಾವೇರಿ ನೀರು ನಿರ್ವಹಣಾ ಸಮಿತಿ ವಜಾಗೊಳಿಸಿ ರಾಜ್ಯಕ್ಕೆ ನ್ಯಾಯ ಒದಗಿಸಿಕೊಡಬೇಕು. ರಾಜ್ಯ ಸರ್ಕಾರ ತಮಿಳುನಾಡಿಗೆ ಹರಿಸುತ್ತಿರುವ ನೀರನ್ನು ತಕ್ಷಣ ನಿಲ್ಲಿಸಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಶಾ.ಮುರಳಿ, ರಾಜು, ಗು.ಪುರುಷೋತ್ತಮ, ಚಾ.ವೆಂ.ರಾಜ್‌ಗೋಪಾಲ್, ಗೋವಿಂದರಾಜು, ಚಾ.ಸಿ.ಸಿದ್ದರಾಜು, ವೀರಭದ್ರ ಇತರರಿದ್ದರು.

ಬಿ. ಇಡಿ. ಕೋರ್ಸ್ ದಾಖಲಾತಿಗೆ ಅರ್ಜಿ ಆಹ್ವಾನ

ಚಾಮರಾಜನಗರ, ನ.24– 2023–24ನೇ ಸಾಲಿನ ಬಿ. ಇಡಿ. ಕೋರ್ಸ್‌ನ ಸರ್ಕಾರಿ ಕೋಟಾದಡಿ ದಾಖಲಾತಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಇಲಾಖಾ ವೆಬ್‌ಸೈಟ್ https://schooleducation.karnataka.gov.in/ ಮೂಲಕ ಲಾಗಿನ್ ಆಗಿ ಆನ್‌ಲೈನ್ ನಲ್ಲಿ ಮಾತ್ರ ಸಲ್ಲಿಸಬೇಕು. ಆನ್‌ಲೈನ್ ಅಪ್ಲಿಕೇಷನ್ ಫಾರ್ ಅಡ್ಮಿಷನ್ ಟೂ 2 ಇಯರ್ ಬಿ.ಇಡಿ ಕೋರ್ಸ್ ಫಾರ್ ದಿ ಇಯರ್ 2023–24 ಲಿಂಕ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡಬೇಕು. ಅರ್ಜಿಗಳನ್ನು ಭರ್ತಿ ಮಾಡುವ ಮುನ್ನ ವೆಬ್‌ಸೈಟ್‌ನಲ್ಲಿರುವ ಇನ್ಸ್‌ಟ್ರಕ್ಷನ್ಸ್ ಟೂ ದಿ ಕ್ಯಾಂಡಿಡೇಟ್ ಶೀರ್ಷಿಕೆಯಡಿ ನೀಡಿರುವ ಮಾಹಿತಿಯಂತೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ನ.29ರೊಳಗೆ ಸಲ್ಲಿಸಬೇಕು. ಮಾಹಿತಿಗಾಗಿ ನಗರದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಕಚೇರಿ ಸಂಪರ್ಕಿಸಬಹುದು ಎಂದು ಸಂಸ್ಥೆಯ ಉಪನಿರ್ದೇಶಕರು ಹಾಗೂ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ವಿದ್ಯುತ್ ವ್ಯತ್ಯಯ

ಚಾಮರಾಜನಗರ, ನ.24– ಬೇಗೂರು ಉಪವಿಭಾಗ ವ್ಯಾಪ್ತಿಯಲ್ಲಿ 3ನೇ ತ್ರೈಮಾಸಿಕ ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವುದರಿಂದ ನ.25ರಂದು ಬೆಳಗ್ಗೆ 9 ರಿಂದ ಸಂಜೆ 5ರವರೆಗೆ ಹಾಲಳ್ಳಿ, ಕಮರಹಳ್ಳಿ, ಬೊಗ್ಗನಪುರ, ಮರಳಾಪುರ, ರಂಗನಾಥಪುರ, ತೊರವಳ್ಳಿ, ನಿಟ್ರೆ, ಹಿರಿಕಾಟಿ, ಚಿಕ್ಕಾಟಿ, ಅರೆಪುರ, ತೊಂಡವಾಡಿ ಹಾಗೂ ಹಿರಿಕಾಟಿ, ನಿಟ್ರೆ ಬೇಗೂರು, ವಾಟರ್ ಸಪ್ಲೈ, ಹೆಗ್ಗಡಹಳ್ಳಿ, ಮಂಚಳ್ಳಿ ಎನ್‌ಜೆವೈ, ಶೆಟ್ಟಹಳ್ಳಿ, ದೇಸಿಪುರ, ಇಂಡಸ್ಟ್ರಿಯಲ್, ಹೊರೆಯಾಲ ಮತ್ತು ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

S.K.CONSTRUCTION
ಈಸು ನಿಮ್ಮದು ನನಸು ನಮ್ಮದು ಹೊಸ ಮನೆ ಕಟ್ಟಬೇಕೆ ಚಿಂತೆ ಬೇಡ Loan ಮಾಡಿಸಿ ಪ್ರಾರಂಭ 25% ನಾವೇ ಹಾಕಿ Plan, 3D Elevation ಸಹಿತ ಉತ್ತಮ ಗುಣಮಟ್ಟದ ಮನೆ ಮಾಡಿಕೊಡುತ್ತೇವೆ.
9620528490

We are HIRING Candidates for AUTOMOBILE SECTOR
Salary 18000 to 25000
Place : Hassan, Mangalore, Mysore, Chikkamangalore
Food accommodation is free
Send Resume : infogojess01@gmail.com
9141410060

NEW HOUSE FOR SALE
40x60 East facing
4 Bed Rooms (All Attached) as per Vasthu Duplex
60ft Road, At 1st Main, 1stage, Vijayanagar, Mysore.
Price : 3.6 Crs
(Slightly Negotiable)
9606160320

ಮನೆ ಬಾಡಿಗೆಗೆ ಇದೆ
ಸಿಂಗಲ್ ರೂಂ, ಪೂರ್ವ ದಿಕ್ಕು ಕೆಳ ಅಂತಸ್ತು, 1ನೇ ಡಿ ಕ್ರಾಸ್, ನಿವೇದಿತನಗರ, ಮೈಸೂರು (ಸಸ್ಯಾಹಾರಿಗಳಿಗೆ ಮಾತ್ರ)
9449855510
9483915610

ಸೈಟುಗಳು ಮಾರಾಟಕ್ಕಿದೆ
30x40, 20x30 ದಟ್ಟಗಳ್ಳಿ 30x50, ಆದಿತ್ಯ ಸರ್ಕಲ್ ಹತ್ತಿರ ಹಳೆಮನೆ/ಹೊಸಮನೆ ಸೈಟು ಮಾರುವವರು/ಕೊಳ್ಳುವವರು
9945042875
ಶ್ರೀ ಬನಶಂಕರಿ ರಿಯಲ್ ಎಸ್ಟೇಟ್

ಸೈಟ್ ಮಾರಾಟಕ್ಕಿದೆ
(MUDA) 30x40 S/F ಅಮೃತ ಸಾಗರ (30 ಲಕ್ಷ) ಹುಣಸೂರು ರಸ್ತೆ (ಹಯಿಲಾಳು)
8296442979

ಬೇಕಾಗಿದ್ದಾರೆ
ಬಟ್ಟೆ ಅಂಗಡಿಯಲ್ಲಿ ಕೆಲಸ ಮಾಡಲು ಹುಡುಗಿಯರು ಮಹಿಳೆಯರು ಬೇಕಾಗಿದ್ದಾರೆ. ಸ್ಥಳ: ಅಗ್ರಹಾರ & ಕೆ.ಜಿ.ಕೊಪ್ಪಲ್, ಸಂಬಳ: 8500 ರಿಂದ 10000. ಸ್ಥಳೀಯರಿಗೆ ಆದ್ಯತೆ ಸಮಯ ಬೆ. 09.30 ಯಿಂದ ರಾ. 9.00ರ ವರೆಗೆ ಸಂಪರ್ಕಿಸಿ
9986311444
9986322444

SITE FOR SALE
SITE NO.-14
South Facing 40x46 Sqft @ Bhima -Bharani Layout Martiyatana Halli, Bogadi-gaddige Road Mysore-26
9480150550
9448330044

ಈ ತಕ್ಷಣವೇ ಬೇಕಾಗಿದ್ದಾರೆ
ಮೈಸೂರು ಹೆಬ್ಬಾಳ ಕಂಪನಿಯಲ್ಲಿ ಕೆಲಸ ಮಾಡಲು ಹುಡುಗರು, ಹುಡುಗಿಯರು, ಗಂಡಸರು, ಹೆಂಗಸರು, ಟೈಲರುಗಳು ಮತ್ತು ಹೆಲ್ಪರ್‌ಗಳು, ಸೆಕ್ಯೂರಿಟಿಗಳು ಬೇಕಾಗಿದ್ದಾರೆ. ESI & PF ವಾರದ ರಜೆ ಇರುತ್ತದೆ
7795285485
8105249880

MUDA & RERA APPROVED SITES FOR SALE
30X40 @ 26 Lakhs
Ready For Registration
Bank Loan Available
Near Kit Eng. College
Next to Lalabahadur Shastri Nagar, Mysore
7795609173

ಬೇಕಾಗಿದ್ದಾರೆ
ದಿನಸಿ ಅಂಗಡಿಯಲ್ಲಿ ಕೆಲಸ ಮಾಡಲು ಅನುಭವವುಳ್ಳ ಹುಡುಗರು/ಹುಡುಗಿಯರು ಬೇಕಾಗಿದ್ದಾರೆ. ಆಸಕ್ತಿಯುಳ್ಳವರು ಸಂಪರ್ಕಿಸಿ: ಬಾಲಕೃಷ್ಣ ಪ್ರಾವಿಷನ್ ಸ್ಟೋರ್ಸ್, ಕರ್ನಾಟಕ ಬ್ಯಾಂಕ್ ಹತ್ತಿರ, ನಜರ್‌ಬಾದ್, ಮೈಸೂರು.

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

ಮಾರಾಟಕ್ಕಿದೆ
ಉತ್ತಮವಾಗಿ ವ್ಯಾಪಾರವಾಗುತ್ತಿರುವ ಕಾಫಿಪುಡಿ ಅಂಗಡಿ ಮಾರಾಟಕ್ಕಿದೆ
7676840962

ವಿಕೇರ್ ಹೋಮ್ ನರ್ಸಿಂಗ್ ಮೈಸೂರು
ಮೈಸೂರಿನಲ್ಲಿ ರೋಗಿಯ ಆರೈಕೆಯ ಕೆಲಸಕ್ಕೆ ಮಹಿಳಾ ಹೋಮ್ ನರ್ಸ್ ಬೇಕಾಗಿದ್ದಾರೆ.
ವೇತನ 16,000 - 23,000/- ಮನೆಯಲ್ಲೇ ಉಳಿದುಕೊಳ್ಳುವವರಿಗೆ ಮಾತ್ರ ಆದ್ಯತೆ
ಸಂಪರ್ಕಿಸಿ:
+91 9380 04 3696
+91 6364 48 1333

ಮಂಟಪದ ಮನೆ
ನಮ್ಮಲ್ಲಿ ಬೀಟೆ, ಹಲಸು ಮರಗಳಿಂದ ತಯಾರಾದ ಪೂಜಾ ಮಂಟಪಗಳು ಸುಲಭ ಕಂತುಗಳಲ್ಲಿ ದೊರೆಯುತ್ತದೆ. ವಿಳಾಸ: ಶ್ರೀ ನಗರ, ಮೈಸೂರು
9448207634
7406425642

WANTED HOUSE KEEPING BOYS & LADIES
with experience in Hotel Industry for an Reputed Hotel (Lodge) with 30 Rooms Near St. Philomena's Church Ashoka road Mysore
9845682777
9538651845

ತಕ್ಷಣ ಬೇಕಾಗಿದ್ದಾರೆ
ಅನುಭವವುಳ್ಳ ಸೆಕ್ಯೂರಿಟಿಗಾರ್ಡುಗಳು ಬೇಕಾಗಿದ್ದಾರೆ. ಉತ್ತಮವಾದ ಸಂಬಳ ವಯೋಮಿತಿ 30 ರಿಂದ 48 ರವರೆಗೆ ಮೇಟಗಳ್ಳಿ, ಬೇಲವಾಡ, ಜೆ.ಪಿ.ನಗರ, ಬೋಗಾದಿ ಹಾಗೂ ಮೈಸೂರಿನ ಸುತ್ತಮುತ್ತ ಇರುವ ಪ್ರದೇಶಗಳಿಗೆ.
9538886328, 9538886326
9035269781, 0821-4852002

Aquaguard & Kent Sales and Service
Service Charge : 300/-
9901200444



ಬೇಕಾಗಿದ್ದಾರೆ
ಟೆಲಿ ಕಾಲಿಂಗ್ ಮಾಡಿ ಅನುಭವ ಇರುವ ಹುಡುಗಿಯರು ಕೆಲಸಕ್ಕೆ ಬೇಕಾಗಿದ್ದರೆ.
9916913984

DTCP SITES FOR SALE
DTCP Sites
Rs. 699 per sq.ft., Near Jayapura, H.D. Kote Road, Mysore.
9590491194, 9606783264

ಬೇಕಾಗಿದ್ದಾರೆ
ದಿನಸಿ ಅಂಗಡಿಗೆ ಹುಡುಗರು ವಿಳಾಸ: ಬಾಲಕೃಷ್ಣ ರೈಸ್ ಕಾರ್ನರ್, # 23ಎಫ್, 3ನೇ ಹಂತ, ಇಂಡಸ್ಟ್ರಿಯಲ್ ಸಬರ್ಬ್, ದಕ್ಷಿಣ ಮೈಸೂರು–570008
9986756866

ರಾಸಾಯನಿಕ ಮುಕ್ತ
ಪರಿಶುದ್ಧವಾದ ಅರಿಶಿಣ ಮತ್ತು ಜೇನುತುಪ್ಪ ಮಾರಾಟ (ಆರೋಗ್ಯಕರ ಆಹಾರ ಮತ್ತು ಚರ್ಮದ ಬಳಕೆಗೆ ಉಪಯುಕ್ತ)
9035661516

ಮನೆ ಮಾರಾಟಕ್ಕಿದೆ
20x30 (ಪೂರ್ವ) ನಿವೇಶನದಲ್ಲಿ GF ಪಾರ್ಕಿಂಗ್+ವೀಲರ್ ಪಾರ್ಕಿಂಗ್+ 1ರೂಂ+ ಅಟ್ಯಾಚ್ ಬಾತ್‌ರೂಂ FF+SF 3ರೂಂ ನೊಂದಿಗೆ ಡ್ಯೂಪ್ಲೆಕ್ಸ್ 2 ಅಟ್ಯಾಚ್ ಹಾಗೂ 1 ಜನರಲ್ ಬಾತ್ ರೂಂ ಹಾಲ್ ಹಾಗು ಕಿಚನ್ Location: ಮಾತೃಶ್ರೀ ಬಡಾವಣೆ ಲಿಂಗಾಬುದಿ ಪಾರ್ಕ್‌ನ ಹತ್ತಿರ ಮಾರುತಿ ದೇವಸ್ಥಾನದ ಹತ್ತಿರ, ರಿಂಗ್ ರಸ್ತೆ ಹತ್ತ, ಬೆಲೆ 70 ಲಕ್ಷ
9845310014, 9844689577

ಬೋಳು ತಲೆಯ ಸಮಸ್ಯೆಯೇ?



SMART HAIR FIXING
574, 9th Cross, Anikethana Road, Kuvempunagar, Mysuru
MYSORE 9611028523 BANGALORE 9343142258

ಉತ್ತಮ ಅವಕಾಶ
ಮನೆಯಲ್ಲಿ ಬಟ್ಟೆ ವ್ಯಾಪಾರ ಮಾಡಲು ನಮ್ಮಲ್ಲಿ ಹೋಲ್ ಸೇಲ್ ದರದಲ್ಲಿ ಎಲ್ಲಾ ರೀತಿಯ ಸೀರೆಗಳು ಮತ್ತು ಎಲ್ಲಾ ರೀತಿಯ ಬಟ್ಟೆಗಳು ಸಿಗುತ್ತದೆ ಒಮ್ಮೆ ಭೇಟಿ ನೀಡಿ
Call After 10.30 AM
9986731199

SITE FOR SALE
1. Kesare II nd Stage 40x60 East Face
2. Kesare III rd Stage 40x60 West Face
3. 59x70 West Face Fully Commercial Opp. KSRTC Bus Stand
Call After 10.30 AM
9986731199

ಬೇಕಾಗಿದ್ದಾರೆ
ಬಟ್ಟೆ ಅಂಗಡಿಯಲ್ಲಿ ಸೇಲ್ಸ್ ಮ್ಯಾನ್ ಕೆಲಸ ಮಾಡಲು ಅನುಭವವುಳ್ಳ ಹುಡುಗ, ಹುಡುಗಿಯರು ಬೇಕಾಗಿದ್ದಾರೆ. ಆಕರ್ಷಕ ಸಂಬಳ ESI+PF ಮತ್ತು ಇನ್ಸೆಂಟೀವ್ ಸೌಲಭ್ಯದೊಂದಿಗೆ ಗಾಂಧಿಸರ್ಕಲ್, ಮೈಸೂರು
Call After 10.30 AM
9980620678

ಮನೆ ಮಾರಾಟಕ್ಕಿದೆ
25x30
ಅಳತೆಯ ಡ್ಯೂಪ್ಲೆಕ್ಸ್ ಮನೆ ಮೈಸೂರಿನ ಗಂಗೋತ್ರಿ ಬಡಾವಣೆಯಲ್ಲಿ 63 ಲಕ್ಷಗಳಿಗೆ ಮಾರಾಟಕ್ಕಿದೆ.
7411110087

ಬೇಕಾಗಿದ್ದಾರೆ
ದಂಪತಿಗಳ ಮನೆಗೆ ಕೆಲಸದವರು ಮಧ್ಯವಯಸ್ಸಿನ ಹೆಂಗಸರು–1 ಸಂಜೆ 4–6 ಗಂಟೆಗೆ ಆದ್ಯತೆ : ಅರವಿಂದನಗರ, ವಿಳಾಸ: 721 ನೆಲಮಹಡಿ, ಆದಿಚುಂಚನಗಿರಿ ರಸ್ತೆ ಅರವಿಂದನಗರ, ಮೈಸೂರು–570023
9986756866

ಫ್ರಿಡ್ಜ್, ವಾಷಿಂಗ್ ಮಷಿನ್, ಮೈಕ್ರೋ ಓವನ್,
LCD, LED TVs
Doorstep Service
Mob: 9886226672

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 9108566022

ನಿರ್ಮಲ ಸರ್ವೀಸ್
ಸಂಪು
ಕ್ಲೀನಿಂಗ್‌ಗಾಗಿ ಸಂಪರ್ಕಿಸಿ:
6364079244

ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್
ಜರ್ಮನ್ ಟೆಕ್ನಾಲಜಿ ಬಳಸಿ ಸಂಪು, ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್ ಮಾಡಲಾಗುತ್ತದೆ.
Mob: 9008711654

ಹೊಸ ಮನೆಗಳು ಮಾರಾಟಕ್ಕೆ ಇದೆ
3 ಬೆಡ್ ರೂಂ ಹೊಸ ಮನೆಗಳು, 30x40 - Price Rs. 1.60 Cr. 20x30 Price Rs. 82 Lakhs
ವಿಜಯನಗರ 4ನೇ ಹಂತ, ಮೈಸೂರು
Mob: 8660105902

HOUSE FOR RENT
2BHK Independent, Duplex House on 25x30 ft Corner Site, with Car Parking, Solar, Chiminy at Bharati Swamy Layout, Near Christ Public School Bogadi, Mysore, Brokers Excuse
9916777948

REPUTED HOTEL REQUIRES FOLOWING STAFFS
Accountant -1
(3 Years Experience)
Room Boys -2
Receptionist -2
8861360214

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

ಉದ್ಯೋಗ ಅವಕಾಶ
ಬಂದ ದಿನವೇ ಕೆಲಸ (ಮಾರ್ಕೆಟಿಂಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th SSLC, PUC, ITI, Any Degree ಪಾಸ್ / ಫೇಲ್ ಆದ ಯುವಕ/ಯುವತಿಯರು ಇಂದೇ ಬೇಕಾಗಿದ್ದಾರೆ. ESI/PF ನೊಂದಿಗೆ ಊಟ ವಸತಿಯುತ್ತದೆ.
ಸಂಬಳ+ಟಿಎ 15,200/- to 86,000/-
9740733021, 9535028750

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 7975101020

MOBILE ರಿಪೇರಿ ಟ್ರೈನಿಂಗ್
18 ವರ್ಷದಿಂದ Mobile, Electrical, Electronics ಮತ್ತು Computer Hardware ರಿಪೇರಿ ಹೇಳಿಕೊಡುತ್ತಿರುವ ಪ್ರತಿಷ್ಠಿತ ಸಂಸ್ಥೆಯಲ್ಲಿ ಶೀಘ್ರದಲ್ಲಿ ಹೊಸ ಬ್ಯಾಚ್ ಪ್ರಾರಂಭ. ಯಾವುದೇ ವಿದ್ಯಾರ್ಹತೆ ಹಾಗೂ ವಯೋಮಿತಿಯ ಅಗತ್ಯವಿಲ್ಲ. PG ವ್ಯವಸ್ಥೆಯೂ ಇರುತ್ತದೆ. ಕೂಡಲೇ ಸಂಪರ್ಕಿಸಿ:
SMM Institute,
ಶ್ರೀ ವೀರಭದ್ರೇಶ್ವರಸ್ವಾಮಿ ದೇವಸ್ಥಾನದ ಎದುರು, ದಾಸಪ್ಪ ಸರ್ಕಲ್ ಹತ್ತಿರ, ಕೆ.ಆರ್.ಮೊಹಲ್ಲಾ, ಮೈಸೂರು
Mob.: 9986926101

ಹೊಸ 4 ಬೆಡ್ ರೂಂ ಮನೆ ಮಾರಾಟಕ್ಕೆ ಇದೆ
30x40, ಪೂರ್ವ ದಿಕ್ಕು, ರಾಮಕೃಷ್ಣನಗರ 'ಐ' ಬ್ಲಾಕ್, ಮೈಸೂರು, ಆಂದೋಲನ ಸರ್ಕಲ್ ಹತ್ತಿರ.
Price: Rs. 1.59 Cr.
Mob: 8660105902

ಕೆಲಸಕ್ಕೆ ಬೇಕಾಗಿದ್ದಾರೆ
ಮೈಸೂರು ಕೈಗಾರಿಕಾ ಪ್ರದೇಶ ಕಂಪನಿಗಳಲ್ಲಿ, ಮೆಟಗಳ್ಳಿ, ಹೆಬ್ಬಾಳ, ದಟ್ಟಗಳ್ಳಿ ಇಲ್ಲಿ ಸೆಕ್ಯೂರಿಟಿ ಗಾರ್ಡ್, Helper, CNC Machine Operatore, Computer Data Entery Operatore, Telle Caller, ಕೆಲಸ ಮಾಡಲು ವಿದ್ಯಾರ್ಹತೆ 7th Pass, 10th, PUC & Any Degree, ITI, Deplomo, ಪಾಸ್ & ಫೇಲ್ ಬೇಕಾಗಿದ್ದಾರೆ. ESI & PF ಸೌಲಭ್ಯ ಇದೆ.
9036461347, 9108180329
9019169499

ಸೈಟು ಮಾರಾಟಕ್ಕಿದೆ
E/F 30x50 KHB ಸೈಟು ಮಾರಾಟಕ್ಕಿದೆ 25 ಲಕ್ಷಗಳು ಕರ್ನಾಟಕ ಗೃಹ ಮಂಡಳಿ ಇಲವಾಲ ಹತ್ತಿರ, ಮೈಸೂರು ಹುಣ್ಸೂರ್ ಭಾಗ
9742198093

ರೂ. 2000 ಕ್ಕೆ
ಡಬಲ್ ಕಾಟ್ ಹಾಸಿಗೆ ಮತ್ತು ದಿಂಬುಗಳು (ಕವರ್), ಬೆಡ್‌ಶೀಟ್, ಬ್ಲಾಂಕೆಟ್ ಕೇವಲ 2000 ಕ್ಕೆ
88841 79981

Sites for Sale
MUDA Approved Sites
30x50 - 50 Lakhs
Bank loan upto 75%
Near JSS / Police Layout, T. Narasipura Road, Mysuru. 1.5 kms from Ring Road.
9900363084, 8660105902

EDUCATION FAIR
on 25th & 26th Nov.
Free Counselling 9 am to 9 pm
Experts from US, UK, Canada, Australia, Ireland
Address: WORLD WIDE EDUCATION & CAREERS
Opp. Gnana Ganga School, Anikethana Road, Kuvempunagar, Mysuru. Contact:
7760495155, 9611777102

ವಿಕಲ್ ರೆಸಾರ್ಟ್ಸ್ ಪ್ರೈವೇಟ್ ಲಿಮಿಟೆಡ್
ಖಾಲಿ ಹುದ್ದೆ: 150+
ಸಂಬಳ 10,000 ಮೂಲ ಭತ್ಯೆ +5000 ಪ್ರೋತ್ಸಾಹ ಧನ.
ಸಂದರ್ಶನದ ಸಮಯ: 9.30 ರಿಂದ 5.30.
ವಿಳಾಸ: #42, JCK ಇಂಡಸ್ಟ್ರಿಯಲ್ ಪಾರ್ಕ್, ಮೇಟಗಳ್ಳಿ ಪೋಸ್ಟ್, ಪ್ರೀತಿ ಗ್ಯಾಸ್ಟ್ರೇಟ್ ಹತ್ತಿರ, ಕೆ.ಆರ್.ಎಸ್. ರಸ್ತೆ, ಮೈಸೂರು-570 016. ಕರೆ ಮಾಡಿ:
Mob: 8867064586

WANTED
ಮೈಸೂರಿನ ಹೆಸರಾಂತ ಕಂಪನಿಗಳಲ್ಲಿ ಕೆಲಸಕ್ಕೆ ಮತ್ತು ಅಭ್ಯರ್ಥಿಗಳಿಗೆ 7th, 10th, PUC, ITI, Diploma, B.Com., BA, BBM, BE, Any Degree ಆದವರಿಗೆ Packing, Helper, Q/C, Maintenance, Production, Machine Operator, Cashier, billing, Accountant, Data Entry, Telecalling, Team Leader, Assistant, Admin, HR, ಇತ್ಯಾದಿ ಹುದ್ದೆಗಳಿಗೆ ಯುವಕ ಯುವತಿಯರು ಬೇಕಾಗಿದ್ದಾರೆ. ಸಂಪರ್ಕಿಸಿ:
9916641959, 9035143190

ಸೈಟು ಬೇಕಾಗಿದೆ
ಲಾಲ್ ಬಹದ್ದೂರ್ ಶಾಸ್ತ್ರಿನಗರ, ವಸಂತನಗರ, ಶಾಂತವೇರಿ ಗೋಪಾಲಗೌಡ ನಗರ, ಸಪ್ತ ಮಾತೃಕ ಲೇಔಟ್, ಪೊಲೀಸ್ ಲೇಔಟ್, ಜೆ.ಎಸ್.ಎಸ್.ಲೇಔಟ್
9844436672

ಅನುಬಂಧ ಮ್ಯಾರೇಜಸ್
ವಧುವರರನ್ನು ಹುಡುಕಲು ಸಹಾಯ ಬೇಕೇ? ನಮಗೆ ಕರೆ ಮಾಡಿ
6361740552

ಸೋಲಾರ್ ವಾಟರ್ ಹೀಟರ್
Solar Water Heater



ಸೇಲ್ಸ್, ಸರ್ವೀಸ್ ರಿಪೇರಿ, ಎಕ್ಸ್‌ಚೇಂಜ್ ಹಾಗೂ ಬಿಡಿ ಭಾಗಗಳಿಗಾಗಿ ಸಂಪರ್ಕಿಸಿ
Vinaykrishna
9611648636

100% TEAK WOOD FACTORY FINISH DOORS @ DEPOT RATES



10YEARS WARRANTY
www.ssbuildmart.com
9901291267
9845426862

ಸೋಫಾ ರಿಪೇರ್ಸ್ ಅಂಡ್ ವರ್ಕ್ಸ್
9591012944

100% NEEM WOOD PLYWOOD & DOORS @ FACTORY DEPOT RATES
NEEM BOND PLATINUM® 10yrs WARRANTY
ISO 9001:2015 Certified Depot
CALL 9731591267
9901291267

ತಕ್ಷಣ ಬೇಕಾಗಿದ್ದಾರೆ
ಕೋಲ್ಡ್‌ಗಾಲದ ಲೇಡೀಸ್‌ನಲ್ಲಿ, ಮೈಸೂರು ನಗರದ ಮೇಟಗಳ್ಳಿ, ಹಿನಕಲ್, ಹೆಚ್.ಡಿ.ಕೋಟೆ ರಸ್ತೆಯ ಬಂಡೂರು ಹತ್ತಿರ ಲೇಡೀಸ್‌ಗಳಲ್ಲಿ ಕೆಲಸ ಮಾಡಲು ಸೆಕ್ಯೂರಿಟಿಗಾರ್ಡ್‌ಗಳು ತಕ್ಷಣ ಬೇಕಾಗಿದ್ದಾರೆ. ಅರ್ಹತೆಗೆ ತಕ್ಕಂತೆ ಸಂಬಳ ನೀಡುತ್ತದೆ. ಸಂಪರ್ಕಿಸಿ.
9035050656
9035050653

ಮನೆಯಿಂದಲೇ ಕೆಲಸ
ಗೃಹಿಣಿಯರಿಗೆ, ವಯಸ್ಸಾದವರು, ವಿದ್ಯಾರ್ಥಿಗಳಿಗೆ, ವಯಸ್ಸಿನ ಮಿತಿ ಇಲ್ಲ, ಹ್ಯಾಂಡ್ ಪ್ಯಾಕಿಂಗ್ ಕವರ್ ಪ್ಯಾಕಿಂಗ್, ಜ್ಯುವೆಲರಿ ಪ್ಯಾಕಿಂಗ್, ಮೆಹಂದಿ ಪ್ಯಾಕಿಂಗ್ Flower ಪ್ಯಾಕಿಂಗ್ ಕೆಲಸಗಳು ಲಭ್ಯವಿದೆ ಗಳಿಸಿ ತಿಂಗಳಿಗೆ 20000 ರಿಂದ 30000 ವರೆಗೆ
8147197339

ಜೆ.ಪಿ.ನಗರದಲ್ಲಿ ಒಂದೇ ಕಟ್ಟಡದಲ್ಲಿ (ಬಿಲ್ಡಿಂಗ್) ಅಟ್ಯಾಚ್ ಬಾತ್‌ರೂಮ್ ಹೊಂದಿರುವ 8 ರೂಂಗಳು ಬಾಡಿಗೆಗೆ ಅಥವಾ ಪಿ.ಜಿ.ನಡೆಸಲು ಬಾಡಿಗೆಗೆ ದೊರೆಯುತ್ತದೆ. ಮತ್ತು 2BHK ಮನೆ ಬಾಡಿಗೆಗೆ/ಭೋಗ್ಯಕ್ಕೆ ದೊರೆಯುತ್ತದೆ. ಸ್ಥಳ: ಜೆ.ಪಿ.ನಗರ ಮೈಸೂರು
8296695765
7996193952

WANTED FOR RENT
2 BHK house in and around Niveditha Nagar / Ananda Nagar / T.K. Layout.
Call: 8197310113

SITES FOR SALE
Two DTCP approves sites for immediate sale, 30x50 ft and 40x60 ft, located near Varuna Lake in Mysuru. No brokers.
Buyers contact:
9353236055, 9483295181

House for Sale
16x32, G&F at Sharadadevinagar. 25x40 G& 40x60 G & F at Ramakrishnanagar. 30x40 Duplex at Srirampura. 40x60 G&F at Kuvempunagar.
8792538993, 9663136318

WANTED
Required for a reputed Electrical Scooter Showroom.
1) Accountant - 1
2) Marketing Executive - 5
3) Sales Executive - 2
4) Telecaller
Call: 9663136318

Sudarshan Saur
SOLAR WATER HEATER



ATTRACTIVE OFFER
ಸೇಲ್ಸ್ & ಸರ್ವೀಸ್
Bajaj Finserv Available
SUNZONE SOLAR SYSTEM
Vishwamanava Double Road, Kuvempunagar, Mysuru
9845175443

SITE FOR SALE
30x50
NORTH FACING
JUST 100 METERS FROM RING ROAD
NAGAMMA LAYOUT
SRIRAMPURA
9686779810

JOB ಮೇಳ
Sunday 26th
Nov. 9 AM- 3PM
ನೇರ ನೇಮಕಾತಿ ರಿಟೇಲ್ ಸ್ಟೋರ್‌ಗಳಿಗೆ ಬೆಂಗಳೂರಿನಲ್ಲಿ 25000 ವರೆಗೂ ಆಕರ್ಷಕ ಸಂಬಳ
8861781425
8073796341

ಮಾರಾಟಕ್ಕಿದೆ
ನಂಜನಗೂಡು ತಾಲ್ಲೂಕು ಅಂಬಳೆ ಗ್ರಾಮದಲ್ಲಿ ಸರ್ವೆ ನಂ.117ರಲ್ಲಿ 2 ಎಕರೆ 26 ಕುಂಟೆ ಕೃಷಿ ಜಮೀನು ಮಾರಾಟಕ್ಕಿದೆ ಸಂಪರ್ಕಿಸಿ
9538344321
9844308183

ಬಾಡಿಗೆಗೆ ಮನೆ ಬೇಕಾಗಿದೆ
1200 Sqft
Independent House
Near Ramakrishna Nagar J.P.Nagar, Srirampura, Arvindanagar Others.
9620975610

ನಿವೇಶನ ಬೇಕಾಗಿದೆ
20x30
ಅಳತೆಯ ಮುಡಾ ಖಾತೆಯ ನಿವೇಶನ ಸರ್ಕಾರ ವಲ್ಲಭಾಯ್ ಪಟೇಲ್ ನಗರ ಜೆ.ಎಸ್.ಎಸ್.ನಗರ, ಐಪಿಎಸ್ ಬಡಾವಣೆ, ವಸಂತ ನಗರ ಮಾಲೀಕರು ಮಾತ್ರ ಸಂಪರ್ಕಿಸಿ:
8296040294

NEW HOUSE FOR SALE
30X40, N/Face, No.28, Ground Floor & First Floor
Aiswarya Layout, J.P.Nagar
Rate: 1.45 (Negotiable)
(Brokers Excuse)
9448271349

FOR SALE
1) 30x40 30@50 KOTE ROAD
2) 30@40 40@60 T Narasipura road
3) 20@30 g+1 house SRIRAMPURA
4) 40@60 Nice Vista Satagalli
5) 20@30 house LB Shastri nagr
6) 10 gunts land doctor lyt attach New and old house city surrounding
Prakruthi Properties
9538690359, 9035990359

ಮನೆ ಬಾಡಿಗೆಗೆ ಇದೆ
"ಆಸರೆ" 40x60 ಈಸ್ಟ್ ಫೇಸಿಂಗ್ ಮೊದಲ ಮಹಡಿ, 3BHK ಸೋಲಾರ್ ಸೌಲಭ್ಯವುಳ್ಳ ಸುಸಜ್ಜಿತ ಮನೆ ಜ್ಞಾನಗಂಗಾ ಶಾಲೆಯ ಹತ್ತಿರ, ಆಕಾಶ್ ಕೋಚಿಂಗ್ ಸೆಂಟರ್ ಹಿಂಭಾಗದ ರಸ್ತೆ, ನಂ.1326, 6ನೇ ಕ್ರಾಸ್, ಲಲಿತಾದ್ರಿ ರಸ್ತೆ, ಕುವೆಂಪುನಗರ, ಮೈಸೂರು
9448067425

ಮನೆ ಭೋಗ್ಯಕ್ಕಿದೆ
ಮೊದಲನೇ ಮಹಡಿ ಪಶ್ಚಿಮ ದಿಕ್ಕು 2BHK 24 ಗಂಟೆ ನೀರು ಮತ್ತು ಸೋಲಾರ್ ಸೌಲಭ್ಯ ಇರುವ ಮನೆ D/N 2458/K8, 12ನೇ ಕ್ರಾಸ್, ಬಸವೇಶ್ವರ ರಸ್ತೆ ಕೆ.ಆರ್.ಮೊಹಲ್ಲಾ (ಅಗ್ರಹಾರ) ಮೈಸೂರು
9945615679
9916019102

ಕಾರಿನ ಚಾಲಕ ಬೇಕಾಗಿದ್ದಾರೆ
ಅಧಿಕೃತ ಲೈಸನ್ಸ್ ಹೊಂದಿರುವ ಆರೋಗ್ಯವಂತ, ವ್ಯಕ್ತಿ ಕಾರಿಗೆ ಚಾಲಕನಾಗಿ ಕೆಲಸ ಮಾಡಲಿಚ್ಛಿಸುವವರು ಬೇಕಾಗಿದ್ದಾರೆ.
9606222435

CHANGE OF NAME
I Pravin Dilip Kulat S/o Mr. Dilip Pralhad Kulat Residing at T2, Pratham Shrusti Apartment Adipampa Road, VV Mohalla, Mysore-570002, have changed name from Pravin Dileep Kulat to Pravin Dilip Kulat on my own free will sworn in before Notary C.R.Seetharam vide Affidavit dated 24.11.2023
Sd/- Pravin Dilip Kulat

SITE FOR SALE
30X60, Near Christ Public School Dattagalli, Mysore
9886743815
ಗಾಣದ ಎಣ್ಣೆ ತೆಗೆಯುವ ಮಷಿನ್ ಮಾರಾಟಕ್ಕಿದೆ
(Wood Pressed)
9886743815

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ವಕ ಆದರೂ ಅವು ಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆ ನೇರ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 10 ರಲ್ಲಿ

ಐದನೇ ಪುಟದಿಂದ

ಗಾಯಗೊಂಡ ಹುಲಿ ಸಾವು

ಡಾ.ಮಿರ್ಜಾ ವಾಸಿಂ ಹುಲಿಯ ಕಳೇಬರವನ್ನು ಅಧಿಕಾರಿಗಳ ಸಮ್ಮುಖದಲ್ಲಿ ಪರಿಶೀಲಿಸಿದರು. ಇದು ಮೂರು ವರ್ಷದ ಗಂಡು ಹುಲಿಯಾಗಿದ್ದು, ಕಾಡೊಳಗೆ ಮತ್ತೊಂದು ಬಲಿಷ್ಠ ಹುಲಿಯೊಂದಿಗೆ ಕಾದಾಡಿ ಗಂಭೀರವಾಗಿ ಗಾಯಗೊಂಡಿದೆ. ಹುಲಿಯ ತಲೆ, ದವಡೆ, ಮೈ, ಕತ್ತು, ಕಾಲು ಸೇರಿದಂತೆ ವಿವಿಧೆಡೆ ಗಂಭೀರವಾದ ಗಾಯವಾಗಿದ್ದು, ನಡೆದಾಡುವುದಕ್ಕೂ ಕಷ್ಟವಾಗಿತ್ತು. ಹಸಿವು ಹಾಗೂ ಗಾಯದ ಗಂಭೀರ ಸ್ವರೂಪದಿಂದ ಚೇತರಿಸಿಕೊಳ್ಳಲಾಗದೇ ಹುಲಿ ಮೃತಪಟ್ಟಿದೆ. ಕಾಡಿಂದ ಕಾಡಂಚಿನ ಗ್ರಾಮದತ್ತ ಬೆಳಗ್ಗೆಯಷ್ಟೇ ಬಂದಿದ್ದ ಹುಲಿ, ನಿತ್ರಾಣಗೊಂಡು ಹೊಲದಲ್ಲಿದ್ದ ಮರದ ಕೆಳಗೆ ಮಲಗಿತ್ತು. ಹುಲಿಯನ್ನು ನೋಡಲು ಗ್ರಾಮಸ್ಥರು ಮುಗಿಬಿದ್ದಿದ್ದರು. ರಸ್ತೆ ಪಕ್ಕ ಜನ ಜಮಾಯಿಸಿದ್ದರೂ, ಹುಲಿ ಯಾವುದೇ ಪ್ರತಿಕ್ರಿಯೆ ನೀಡದಷ್ಟು ನಿತ್ರಾಣಗೊಂಡಿತ್ತು. ಸ್ಥಳಕ್ಕೆ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಡಾ.ಪಿ.ರಮೇಶ್‌ಕುಮಾರ್, ಗುಂಡ್ಲುಪೇಟೆ ಉಪವಿಭಾಗದ ಎಸಿಎಫ್ ಜಿ.ರವೀಂದ್ರ, ಆರ್‌ಎಫ್‌ಓ ಬಿ.ಎಂ.ಮಲ್ಲೇಶ್, ವಿಶೇಷ ಘಟಕದ ಆರ್‌ಎಫ್‌ಓ ವಿ.ನರೇಶ್ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು. ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ನಿಯಮಾನುಸಾರ ಅಂತ್ಯಕ್ರಿಯೆ ಮಾಡಲಾಯಿತು.

ಹುಲಿ ದಾಳಿ: ರೈತ ಮಹಿಳೆ ಬಲಿ

ಜನರ ಪ್ರಾಣದೊಂದಿಗೆ ಚೆಲ್ಲಾಟವಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ ಗ್ರಾಮಸ್ಥರು, ಅರಣ್ಯಾಧಿಕಾರಿಗಳ ವಿರುದ್ಧ ತೀವ್ರ ಪ್ರತಿಭಟನೆ ನಡೆಸಿದರು.

ವಿವರ: ನಂಜನಗೂಡು ತಾಲೂಕು ಹೆಡಿಯಾಲ ಸಮೀಪದ ಬಳ್ಳೂರುಹುಂಡಿ ಗ್ರಾಮದ ವೆಂಕಟಯ್ಯನವರ ಪತ್ನಿ ರತ್ನಮ್ಮ(50), ಹುಲಿ ದಾಳಿಗೆ ಬಲಿಯಾಗಿದ್ದು, ಇವರು ಶುಕ್ರವಾರ ಮಧ್ಯಾಹ್ನ ಬಂಡೀಪುರ ರಾಷ್ಟ್ರೀಯ ಉದ್ಯಾನವನದ ಹೆಡಿಯಾಲ ವಲಯ ಅರಣ್ಯ ವ್ಯಾಪ್ತಿಯ ಕಾಡಂಚಿನ ಪ್ರದೇಶದಲ್ಲಿರುವ ತಮ್ಮ ಜಮೀನಿನಲ್ಲಿ ಜಾನುವಾರುಗಳನ್ನು ಮೇಯಿಸುತ್ತಿದ್ದರು. ಮಧ್ಯಾಹ್ನ 3.30ರ ಸುಮಾರಿನಲ್ಲಿ ಇವರ ಮೇಲೆ ಹುಲಿ ಏಕಾಏಕಿ ದಾಳಿ ನಡೆಸಿ ಅವರನ್ನು ಕಾಡಿನೊಳಗೆ ಎಳೆದೊಯ್ದಿದೆ. ಇದನ್ನು ಕಂಡ ಅಕ್ಕ-ಪಕ್ಕದ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದವರು ತಕ್ಷಣ ಅರಣ್ಯ ಇಲಾಖೆಯವರಿಗೆ ಕರೆ ಮಾಡಿದರು. ಆದರೆ ಅರಣ್ಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಕರೆ ಸ್ವೀಕರಿಸಲಿಲ್ಲ ಎಂದು ಆರೋಪಿಸಲಾಗಿದ್ದು, ಗ್ರಾಮಸ್ಥರೇ ದೊಣ್ಣೆ, ಗುದ್ದಲಿ ಹಿಡಿದು, ಸುತ್ತ-ಮುತ್ತಲ ಪ್ರದೇಶಗಳಲ್ಲಿ ಶೋಧ ನಡೆಸಿದಾಗ ಸುಮಾರು 3 ಕಿಮೀ ದೂರದಲ್ಲಿ ರತ್ನಮ್ಮ ಅವರ ದೇಹ ಪತ್ತೆಯಾಗಿದ್ದು, ದೇಹದ ಎಡ ಭಾಗವನ್ನು ಹುಲಿ ತಿಂದು ಹಾಕಿದೆ. ವಿಷಯ ತಿಳಿದು ಅರಣ್ಯ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಗ್ರಾಮಸ್ಥರನ್ನು ಸಮಾಧಾನಪಡಿಸಿ, ದೇಹವನ್ನು ಆಸ್ಪತ್ರೆಯ ಶವಾಗಾರಕ್ಕೆ ಸಾಗಿಸಲು ಯತ್ನಿಸಿದರಾದರೂ, ಗ್ರಾಮಸ್ಥರು ಅದಕ್ಕೆ ಅವಕಾಶ ನೀಡದೆ ಶವವನ್ನು ಹೆಡಿಯಾಲ ಅರಣ್ಯ ಕಚೇರಿ ಬಳಿ ಕೊಂಡೊಯ್ದು ಪ್ರತಿಭಟನೆ ನಡೆಸಲು ಮುಂದಾದರು.

ಕಳೆದ ತಿಂಗಳು ಇಲ್ಲಿಂದ ಕೇವಲ ಒಂದು ಕಿ.ಮೀ. ಅಂತರದಲ್ಲಿ ಮಹದೇವ ನಗರದ ವೀರಭದ್ರ ಬೋವಿ ಎಂಬಾತನ ಮೇಲೆ ಹುಲಿ ದಾಳಿ ನಡೆಸಿತ್ತು. ಕೆಲವೇ ದಿನಗಳ ಹಿಂದೆ ಹುಲಿ ಎತ್ತನ್ನು ಕೊಂದು ಹಾಕಿತ್ತು. ಆದರೆ ಅರಣ್ಯಾಧಿಕಾರಿಗಳು ಹುಲಿ ಸೆರೆಗೆ ಯಾವುದೇ ಕ್ರಮ ಕೈಗೊಳ್ಳದೇ ಇಂದು ರತ್ನಮ್ಮ ಸಾವಿಗೆ ಕಾರಣರಾಗಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಅರಣ್ಯಾಧಿಕಾರಿಗಳ ವಿರುದ್ಧ ಘೋಷಣೆ ಕೂಗಿದರು.

ಹೆಡಿಯಾಲ, ಬಳ್ಳೂರು ಹುಂಡಿ, ಮಹದೇವನಗರ ಮುಂತಾದ ಗ್ರಾಮಗಳಿಂದ ಹೆಡಿಯಾಲ ಅರಣ್ಯ ಕಚೇರಿ ಬಳಿಗೆ ಆಗಮಿಸಿದ ನೂರಾರು ಗ್ರಾಮಸ್ಥರು ಪ್ರತಿಭಟನೆಯನ್ನು ತೀವ್ರಗೊಳಿಸಿದರು. ವಿಷಯ ತಿಳಿದು ಪೊಲೀಸ್ ಅಧಿಕಾರಿಗಳು ಸ್ಥಳಕ್ಕಾಗಮಿಸಿ ಪ್ರತಿಭಟನಾಕಾರರ ಮನವೊಲಿಸಲು ಪ್ರಯತ್ನಿಸಿದರು. ಆದರೆ ಗ್ರಾಮಸ್ಥರು ಹಿರಿಯ ಅಧಿಕಾರಿಗಳು ಬರಬೇಕು ಹಾಗೂ ಜನ-ಜಾನುವಾರುಗಳನ್ನು ಬಲಿ ಪಡೆಯುತ್ತಿರುವ ಹುಲಿಯನ್ನು ಸೆರೆ ಹಿಡಿಯಬೇಕು ಎಂದು ಪಟ್ಟು ಹಿಡಿದರು. ರಾತ್ರಿ ವೇಳೆಗೆ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಡಾ. ಪಿ. ರಮೇಶ್ ಕುಮಾರ್, ಎಸಿಎಫ್ ಪರಮೇಶ್, ಆರ್‌ಎಫ್‌ಓ ನಾರಾಯಣ್, ನಂಜನಗೂಡು ತಹಸಿಲ್ದಾರ್ ಶಿವಕುಮಾರ್ ಕಾಸ್ನೂರ್ ಹಾಗೂ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ರತ್ನಮ್ಮ ಕುಟುಂಬಕ್ಕೆ 15 ಲಕ್ಷ ರೂ. ಪರಿಹಾರ ನೀಡುವುದಾಗಿಯೂ ಹುಲಿ ಸೆರೆಗಾಗಿ ನಾಳೆಯೇ ಈ ಭಾಗದಲ್ಲಿ ಬೋನ್ ಇಟ್ಟು ಕಾರ್ಯಾಚರಣೆ ಆರಂಭಿಸುವುದಾಗಿ ಭರವಸೆ ನೀಡಿದ ನಂತರ ಗ್ರಾಮಸ್ಥರು ಪ್ರತಿಭಟನೆ ಹಿಂಪಡೆದರು. ರತ್ನಮ್ಮ ಮೃತದೇಹವನ್ನು ಹೆಡಿಯಾಲ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಇರಿಸಲಾಗಿದ್ದು, ನಾಳೆ ಮರಣೋತ್ತರ ಪರೀಕ್ಷೆ ನಂತರ ವಾರಸುದಾರರಿಗೆ ಹಸ್ತಾಂತರಿಸಲಾಗುವುದು.

ಸೇವಾವಧಿ ಎರಡು ತಿಂಗಳು ವಿಸ್ತರಣೆ

ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ಮನವಿ ಮಾಡಿದ್ದರು. ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮತ್ತು ಸದಸ್ಯರ ಅವಧಿಯು 2023ರ ನವೆಂಬರ್ 26ರಂದು ಮುಕ್ತಾಯಗೊಳ್ಳಲಿದೆ. ಪ್ರಸ್ತುತ ಆಯೋಗವು 2015ರ ಸಾಮಾಜಿಕ ಮತ್ತು ಶೈಕ್ಷಣಿಕ ವರದಿಯನ್ನು ತಯಾರಿಸುವ ಪ್ರಕ್ರಿಯೆಯಲ್ಲಿದೆ. ಈ ವರದಿಯನ್ನು ಪೂರ್ಣಗೊಳಿಸಿ ಸರ್ಕಾರಕ್ಕೆ ಸಲ್ಲಿಸಲು ಕಾಲಾವಕಾಶ ಬೇಕಿದ್ದು, ಪ್ರಸ್ತುತ ಆಯೋಗವನ್ನು ಮುಂದುವರಿಸಬೇಕು ಎಂದು ಕೋರಿದ್ದರು.

ಉಚಿತ ಬಸ್ ಪ್ರಯಾಣ

1 ಕೋಟಿ 17 ಲಕ್ಷ ಮಹಿಳೆಯರು ಗೃಹಲಕ್ಷ್ಮಿ ಯೋಜನೆಗೆ ನೋಂದಾಯಿಸಿ ಕೊಂಡು ಇವರಲ್ಲಿ 1 ಕೋಟಿ 10 ಲಕ್ಷ ಮಹಿಳೆಯರಿಗೆ ತಿಂಗಳಿಗೆ 2 ಸಾವಿರ ರೂಪಾಯಿ ತಲುಪುತ್ತಿದೆ. ಎಲ್ಲಾ ಜಾತಿ-ಧರ್ಮದ ಬಡವರು, ಮಧ್ಯಮ ವರ್ಗದ ಮಹಿಳೆಯರಿಗೆ ಈ ಸೌಲಭ್ಯ ತಲುಪುತ್ತಿದೆ. ಇದು ಬಿಜೆಪಿಯವರ ಹೊಟ್ಟೆಕಿಚ್ಚಿಗೆ ಕಾರಣವಾಗಿದೆ ಎಂದು ವಿವರಿಸಿದರು. ಜತೆಗೆ ಮನೆಗೆ ಉಚಿತ ವಿದ್ಯುತ್ ಮತ್ತು ಅಕ್ಕಿ ಹಾಗೂ ಅಕ್ಕಿಯ ಹಣವನ್ನು ಜನರ ಮಡಿಲಿಗೆ ಹಾಕುತ್ತಿದ್ದೇವೆ. ಜನರ ದುಡ್ಡು ಜನರ ಜೇಬಿಗೆ ಹಾಕಿದರೆ ಬಿಜೆಪಿ ಯವರಿಗೆ ಹೊಟ್ಟೆಯುರಿ ಏಕೆ ಎಂದು ಮುಖ್ಯಮಂತ್ರಿಗಳು ವ್ಯಂಗ್ಯವಾಗಿ ಪ್ರಶ್ನಿಸಿದರು.

ಬಡವರ ಕೈಯ್ಯಲ್ಲಿ ದುಡ್ಡು ಇರಬೇಕು ಎನ್ನುವುದು ನಮ್ಮ ಗುರಿ. ಹಣ ಇದ್ದರೆ ಆರ್ಥಿಕತೆಗೆ ಚೈತನ್ಯ ಬರುತ್ತದೆ. ಈ ಚೈತನ್ಯ ತುಂಬುವ ಕಾರ್ಯಕ್ರಮವನ್ನು ನಾವು ಘೋಷಿಸಿ, ಸಾಧಿಸಿ ತೋರಿಸಿದ್ದೀವಿ. ಜನರಿಗೆ ನಾವು ಕೊಟ್ಟ ಹಣ ವಾಪಸ್ ಸರ್ಕಾರಕ್ಕೇ ಬರುತ್ತದೆ. ನಾವು ಪುನಃ ಜನರ ಜೇಬಿಗೆ ಅದೇ ಹಣವನ್ನು ಹಾಕುತ್ತೇವೆ. ಇದರಿಂದ ಜಿಡಿಪಿ, ಆರ್ಥಿಕ ಚಟುವಟಿಕೆ ವೃದ್ಧಿ ಯಾಗುತ್ತದೆ ಎಂದು ವಿವರಿಸಿದರು. ಮಹಿಳೆಯರಿಗೆ ಆರ್ಥಿಕ ಶಕ್ತಿ ಕೊಡುವ ಜತೆಗೆ ಸಮಾಜದ ಎಲ್ಲಾ ವರ್ಗದ ಬಡವರಿಗೆ-ಮಧ್ಯಮ ವರ್ಗ ದವರಿಗೆ ಶಕ್ತಿ ತುಂಬುವ ವಿಚಾರದಲ್ಲಿ ಇಟ್ಟ ಹೆಜ್ಜೆ ಹಿಂದಿಡುವುದಿಲ್ಲ ಎಂದು ಹೇಳಿದರು.

ಪ್ರಕರಣಗಳಿಗೆ ಎಸ್ಪಿ, ಡಿಸಿ ಹೊಣೆ

ಮಾಡಿದ ತನಿಖಾಧಿಕಾರಿ ಗಳ ಜೊತೆಗೆ ಎಸ್ಪಿ ಹಾಗೂ ಜಿಲ್ಲಾಧಿಕಾರಿಗಳನ್ನೂ ಜವಾಬ್ದಾರರನ್ನಾಗಿ ಮಾಡಲಾಗುತ್ತದೆ ಎಂದು ಡಾ. ಮಹದೇವಪ್ಪ ಖಡಕ್ ಎಚ್ಚರಿಕೆ ನೀಡಿದರು. ಪ್ರಕರಣ ದಾಖಲಿಸಿ ತೊಂದರೆ ಕೊಡುವುದು ಈ ಕಾಯ್ದೆಯ ಉದ್ದೇಶವಲ್ಲ. ಆದರೆ, ಪರಿಶಿಷ್ಟ ಜಾತಿ, ಪಂಗಡದವರ ಮೇಲಿನ ದೌರ್ಜನ್ಯ, ಜಾತಿ ನಿಂದನೆ ತಪ್ಪಿ ಸೌಹಾರ್ದಯುತವಾಗಿ ಸ್ವಾಭಿಮಾನದಿಂದ ಜೀವನ ನಡೆಸಬೇಕೆಂಬುದು ಮುಖ್ಯ. ನೀವು ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿ ಮಾಡದಿದ್ದರೆ ಇಂತಹ ಪ್ರಕರಣಗಳು ಜಾಸ್ತಿಯಾಗುತ್ತವೆ ಎಂದು ಅವರು ನುಡಿದರು.

ಸರಿಯಾಗಿ ತನಿಖೆ ನಡೆಸದೇ ನಿರ್ಲಕ್ಷ್ಯ ವಹಿಸಿದ ತನಿಖಾಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡರೆ ಅಂತಹ ಪರಿಸ್ಥಿತಿ ಬರುವುದಿಲ್ಲ. ಆದ್ದರಿಂದಲೇ ಉನ್ನತ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಬೇಕಾಗಿದೆ ಎಂದು ಸಚಿವರು ಇದೇ ಸಂದರ್ಭ ತಿಳಿಸಿದರು. ಸಮಾಜ ಕಲ್ಯಾಣ ಇಲಾಖೆ ಕಾರ್ಯದರ್ಶಿ ಕೆ. ರಾಕೇಶ್‌ಕುಮಾರ್ ಮಾತನಾಡಿ, ಮೈಸೂರು ವಿಭಾಗದ ಜಿಲ್ಲೆಗಳಲ್ಲಿ ಕಳೆದ ಒಂದು ವರ್ಷದಲ್ಲಿ 432 ಜಾತಿ ನಿಂದನೆ ಪ್ರಕರಣ ದಾಖಲಾಗಿದ್ದು, ಆ ಪೈಕಿ ಹಲವು ಪ್ರಕರಣಗಳು ಚಾರ್ಜ್‌ಶೀಟ್ ಸಲ್ಲಿಕೆಗೆ ಬಾಕಿ ಉಳಿದಿವೆ. ಅತೀ ಹೆಚ್ಚು ಪ್ರಕರಣ ಬಾಕಿ ಇರುವ ಜಿಲ್ಲೆಗಳ ಎಸ್ಪಿಗಳು ತಮ್ಮ ಅಧೀನ ಪೊಲೀಸ್ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದರು.

ಹಾಸ್ಟೆಲ್‌ಗಳಲ್ಲಿ ಗುಣಮಟ್ಟದ ಆಹಾರ ಕಲ್ಪಿಸಿ

ಮೇಲೆ ಪರಿಣಾಮ ಬೀರದಂತೆ ಕ್ರಮ ವಹಿಸಬೇಕು. ಅಗತ್ಯ ಬಿದ್ದರೆ ಖಾಸಗಿ ಕಟ್ಟಡ ಬಾಡಿಗೆಗೆ ಪಡೆದು ವಾಸ್ತವ್ಯಕ್ಕೆ ಅನುಕೂಲ ಮಾಡಿ ಎಂದು ಡಾ. ಮಹದೇವಪ್ಪ ಸಲಹೆ ನೀಡಿದರು. ಹಾಸ್ಟೆಲ್ ಅಡುಗೆ ಮಾಡುವವರಿಗೆ ಖಾಸಗಿ ಹೋಟೆಲ್ ಕುಕ್‌ಗಳನ್ನು ಕರೆಸಿ ತರಬೇತಿ ಕೊಡಿಸಿ ಶುಚಿತ್ವ, ಗುಣಮಟ್ಟದ ಆಹಾರ ತಯಾರಿಕೆ ಬಗ್ಗೆ ತಿಳುವಳಿಕೆ ಮೂಡಿಸುವ ಅಗತ್ಯವಿದೆ. ಅದಕ್ಕೆ ಇಲಾಖೆಯಿಂದ ಅನುದಾನ ಕೊಡಿಸಲಾಗುವುದು ಎಂದ ಅವರು, ಮಕ್ಕಳಿಗೆ ಇಂಗ್ಲಿಷ್ ಭಾಷೆ, ಗಣಿತ, ವಿಜ್ಞಾನ ವಿಷಯಗಳಲ್ಲಿ ವಿಶೇಷ ಶಿಕ್ಷಣ ನೀಡಿ ಜ್ಞಾನವಂತರನ್ನಾಗಿ ಮಾಡುವ ಮೂಲಕ ಮುಂದಿನ ಉನ್ನತ ಶಿಕ್ಷಣಕ್ಕೆ ಅವಕಾಶ ಸಿಗುವಂತೆ ಮಾಡಿ ಎಂದು ತಿಳಿಸಿದರು.

ಮುನ್ನವೇ ವಿರೋಧಿಸುವುದು ಎಷ್ಟು ಸರಿ?

ಅವರು ಪ್ರತಿಕ್ರಿಯಿಸಿದರು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧದ ಆಸ್ತಿಗಳಿಕೆ ಪ್ರಕರಣ ತನಿಖೆಯನ್ನು ಸಿಬಿಐಗೆ ವಹಿಸಿದ್ದ ಬಿಜೆಪಿ ಸರ್ಕಾರದ ಕ್ರಮವನ್ನು ವಾಪಸ್ ಪಡೆಯಲು ನಿರ್ಧರಿಸಿರುವುದು ಸರಿಯಾದ ನಿಲುವು ಎಂದು ಡಾ. ಹೆಚ್.ಸಿ. ಮಹದೇವಪ್ಪ ಸಮರ್ಥಿಸಿಕೊಂಡಿದ್ದಾರೆ. ಪ್ರಕರಣ ಒಪ್ಪಿಸುವಾಗ ಡಿ.ಕೆ. ಶಿವಕುಮಾರ್ ಶಾಸಕರಾಗಿ ಹಾಗೂ ವಿಧಾನಸಭಾಧ್ಯಕ್ಷರ ಅನುಮತಿ ಇಲ್ಲದೇ ಬಿಜೆಪಿ ಸರ್ಕಾರ ನಿರ್ಧಾರ ಕೈಗೊಂಡಿತ್ತು. ಅದನ್ನು ಪರಿಶೀಲಿಸಿ ಕಾನೂನು ಅಂಶಗಳನ್ನು ಪರಿಗಣಿಸಿಯೇ ನಮ್ಮ ಸರ್ಕಾರ ಸಂಪುಟ ಸಭೆಯಲ್ಲಿ ಚರ್ಚಿಸಿ ಪ್ರಕರಣ ಹಿಂಪಡೆಯಲು ನಿರ್ಧರಿಸಿದೆ. ಅದರಲ್ಲಿ ಡಿಕೆಶಿಯವರನ್ನು ರಕ್ಷಿಸುವ ಉದ್ದೇಶವಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ನಾನು ಆಕಾಂಕ್ಷಿಯಲ್ಲ: ಚಾಮರಾಜನಗರ ಲೋಕಸಭಾ ಕ್ಷೇತ್ರಕ್ಕೆ ನಾನು ಟಿಕೆಟ್ ಆಕಾಂಕ್ಷಿಯಲ್ಲ. ಅದರ ಬಗ್ಗೆ ಯೋಚನೆ ಮಾಡಿಲ್ಲ. ಪಕ್ಷದ ಹೈಕಮಾಂಡ್ ತೀರ್ಮಾನಿಸಿದರೆ ಪುತ್ರ ಸುನಿಲ್ ಬೋಸ್ ಸ್ಪರ್ಧಿಸುತ್ತಾನೆ. ಪಕ್ಷಕ್ಕಾಗಿ ದುಡಿದವರು ಸ್ಪರ್ಧೆ ಮಾಡಬೇಕು. ಆತ ಹಲವು ವರ್ಷಗಳಿಂದ ಕೆಲಸ ಮಾಡಿರುವುದರಿಂದ ಪಕ್ಷದ ನಾಯಕರು ಆಯ್ಕೆ ಮಾಡಿದರೆ ಸುನಿಲ್ ಬೋಸ್ ಅಭ್ಯರ್ಥಿಯಾಗುತ್ತಾನೆ ಎಂದು ಡಾ. ಮಹದೇವಪ್ಪ ಪ್ರಶ್ನೆಗೆ ಉತ್ತರಿಸಿದರು.

ರಾಜಣ್ಣನ 'ಬಂಗಾರದ ಮನುಷ್ಯ'ನಿಂದ ಪ್ರಗತಿಪರ ರೈತನಾದೆ...;

ರಾಜಕೀಯವಾಗಿ ಜನರಿಂದ ಮೇಲೆ ಬಂದೆ...

-ಜಿ.ಟಿ.ದೇವೇಗೌಡ



ನಾನು ಪ್ರಗತಿಪರ ರೈತನಾಗಲು ರಾಜಣ್ಣನ 'ಬಂಗಾರದ ಮನುಷ್ಯ'ನೇ ಪ್ರೇರಣೆ. ಹಾಗೆಯೇ ನನ್ನ ರಾಜಕೀಯ ಏಳ್ಗೆಗೂ ಅದೇ ರಾಜಣ್ಣನವರು ಹೇಳುವಂತೆ 'ಜನರಿಂದ ನಾನು ಮೇಲೆ ಬಂದೆ...'. ಆ ನನ್ನ ಜನತೆಯ ಪ್ರೀತಿ-ವಿಶ್ವಾಸಕ್ಕೆ ನನ್ನ ಜೀವನಪೂರ್ತಿ ಚಿರಋಣಿಯಾಗಿರುತ್ತೇನೆ. ತಾಯಿ ಚಾಮುಂಡೇಶ್ವರಿ ನೆಲೆಯಲ್ಲಿ ಹ್ಯಾಟ್ರಿಕ್ ಗೆಲುವು ಸಾಮಾನ್ಯವೇ! ಎಲ್ಲವೂ ದೈವೇಚ್ಛೆ, ಜನರಿಚ್ಛೆ. -ಜಿ.ಟಿ.ದೇವೇಗೌಡ

ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಟಿ.ದೇವೇಗೌಡರು, ಹಳೇ ಮೈಸೂರು ಭಾಗದ ಹಿರಿಯ ರಾಜಕಾರಣಿಗಳಲ್ಲಿ ಒಬ್ಬರು. ಮಾದರಿ ಕೃಷಿಕ, ಅತ್ಯುತ್ತಮ ಸಹಕಾರಿ, ಜನಪ್ರೀತಿಯ ರಾಜಕಾರಣಿಯಾಗಿ ತಮ್ಮದೇ ಆದ ಛಾಪು ಮೂಡಿಸಿರುವ ಇವರು, ಅದ್ವಿತೀಯ ಸಂಘಟಕರೂ ಹೌದು. ಈ ಕಾರಣದಿಂದಲೇ ಜೆಡಿಎಸ್ ಪಕ್ಷದ ಸಂಘಟನೆ ಹೊಣೆ ಇವರ ಹೆಗಲೇರಿದೆ. ಮಾಜಿ ಪ್ರಧಾನಿ, ಜೆಡಿಎಸ್ ವರಿಷ್ಠರಾದ ಹೆಚ್.ಡಿ.ದೇವೇಗೌಡರು, ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಸೇರಿದಂತೆ ಪಕ್ಷದ ಎಲ್ಲಾ ನಾಯಕರು ಚರ್ಚಿಸಿ, **21 ಸದಸ್ಯರ ಕೋರ್ ಕಮಿಟಿಗೆ ಜಿ.ಟಿ.ದೇವೇಗೌಡರನ್ನು ಅಧ್ಯಕ್ಷರನ್ನಾಗಿ** ಆಯ್ಕೆ ಮಾಡಿದ್ದಾರೆ. ಮರಿ ದೇವೇಗೌಡರೆಂದೇ ಗುರುತಿಸಿಕೊಂಡಿರುವ ಜಿಟಿಡಿ, ದೊಡ್ಡ ಗೌಡರ ಮಾರ್ಗದರ್ಶನದಲ್ಲಿ ಮಾಜಿ ಸಿಎಂ ಕುಮಾರಸ್ವಾಮಿ ಇನ್ನಿತರ ನಾಯಕರ ಸಹಕಾರದೊಂದಿಗೆ ಪಕ್ಷ ಸಂಘಟನೆಗೆ ಹೊಸ ಆಯಾಮ ನೀಡಿದ್ದಾರೆ. ಎರಡು-ಮೂರು ತಿಂಗಳಿಂದ ಉತ್ತರ ಕರ್ನಾಟಕ ಭಾಗದ ಹಲವೆಡೆ ಪ್ರವಾಸ ನಡೆಸಿ, ಪಕ್ಷ ಬಲಪಡಿಸುವ ಪ್ರಯತ್ನ ನಡೆಸಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯ ಸೋಲಿನಿಂದ ಉತ್ಸಾಹ ಕಳೆದುಕೊಂಡಿದ್ದ ಕಾರ್ಯಕರ್ತರಲ್ಲಿ ಸ್ಥೈರ್ಯ ತುಂಬುತ್ತಿದ್ದಾರೆ. ತಳಮಟ್ಟದಿಂದ ಪಕ್ಷ ಸಂಘಟಿಸಲು ಕಾರ್ಯಕ್ರಮಗಳನ್ನು ರೂಪಿಸುತ್ತಿದ್ದಾರೆ. ನವೆಂಬರ್ 25, ಜಿಟಿಡಿ ಅವರ ಹುಟ್ಟುಹಬ್ಬ. ಪಕ್ಷದ ಕಾರ್ಯಕರ್ತರು, ಅವರ ಅಭಿಮಾನಿಗಳು ಅದ್ದೂರಿಯಾಗಿ ಸಂಭ್ರಮಿಸುತ್ತಿದ್ದರು. ಆದರೆ ರಾಜ್ಯದಲ್ಲಿ ಬರ ಇರುವುದರಿಂದ ಈ ಬಾರಿ ಅದ್ದೂರಿ ಆಚರಣೆಗೆ ಸ್ವತಃ ಜಿ.ಟಿ.ದೇವೇಗೌಡರೇ ಬ್ರೇಕ್ ಹಾಕಿದ್ದಾರೆ. ತಮ್ಮೂರಿನ ದೇವಾಲಯಗಳಲ್ಲಿ ಪೂಜೆ ಸಲ್ಲಿಸಿ, ಅಸಹಾಯಕರಿಗೆ ನೆರವಾಗುವಂತೆ ಮನವಿ ಮಾಡಿದ್ದಾರೆ. ಜಿಟಿಡಿ ಅವರ ಬದುಕು ಯುವ ರೈತರು, ಸಹಕಾರಿಗಳು ಹಾಗೂ ರಾಜಕಾರಣಿಗಳಿಗೆ ಪ್ರೇರಣೆಯಾಗುವಂತದ್ದು. ಹಾಗಾಗಿ ಈ ಸಂದರ್ಭದಲ್ಲಿ ಜಿಟಿಡಿ ಕುರಿತ ಸಂಕ್ಷಿಪ್ತ ಮಾಹಿತಿ ಇಲ್ಲಿದೆ.

ಮಾದರಿ ಕೃಷಿಕ; ಅನ್ನದಾತರಿಗೆ ಪ್ರೇರಣೆ

ಮೈಸೂರು ತಾಲೂಕು, ಇಲವಾಲ ಹೋಬಳಿ, ಗುಂಗ್ರಾಲ್ ಛತ್ರ ಗ್ರಾಮದ ತಮ್ಮೇಗೌಡ ಹಾಗೂ ಲಕ್ಷ್ಮಮ್ಮ ದಂಪತಿ ಪುತ್ರ ಜಿ.ಟಿ.ದೇವೇಗೌಡರು ಹೆಚ್ಚು ಓದಲಿಲ್ಲ. ಆದರೆ ಜೀವನ ಪರೀಕ್ಷೆಯಲ್ಲಿ ಸೋಲು-ಸವಾಲುಗಳನ್ನು ಸಮರ್ಥವಾಗಿ ಎದುರಿಸಿ ಯಶಸ್ವಿಯಾಗುವುದು ಇವರಿಗೆ ಕರಗತವಾಗಿದೆ. ಬಾಲ್ಯದಿಂದಲೂ ವ್ಯವಸಾಯದ ಮೇಲೆ ವಿಶೇಷ ಪ್ರೀತಿ. ಆಧುನಿಕ ಬೇಸಾಯ ಪದ್ಧತಿಯನ್ನು ಅನುಸರಿಸಿ, ತೆಂಗು, ಬಾಳೆ, ಮಾವು ಇನ್ನಿತರ ಬೆಳೆಗಳ ಮೂಲಕ ಯುವ ರೈತರಿಗೆ ಸ್ಫೂರ್ತಿಯಾಗಿದ್ದಾರೆ. ಸ್ವಗ್ರಾಮದಲ್ಲಿ ಯೂತ್ ಕ್ಲಬ್ ಸ್ಥಾಪಿಸಿ ಸಾವಯುವ ಕೃಷಿ ಪದ್ಧತಿ ಅಳವಡಿಕೆ, ಕಾಂಪೋಸ್ಟ್ ಗೊಬ್ಬರ ತಯಾರಿಕೆ ಹಾಗೂ ಬಳಕೆ ಬಗ್ಗೆ ಜಾಗೃತಿ ಮೂಡಿಸಿದ್ದರು. ರಾಜ್ಯ ಸರ್ಕಾರದ ಕೃಷಿ ನಿರ್ದೇಶಕರಿಂದ ಜಿಲ್ಲೆಯ ಪ್ರಗತಿಪರ ರೈತನೆಂಬ ಮನ್ನಣೆ ಪಡೆಯುವ ಮೂಲಕ ಆ ಕಾಲಕ್ಕೆ ಕೃಷಿಯಲ್ಲೂ ಸಾಧನೆ ಸಾಧ್ಯ ಎಂದು ಸಾಬೀತುಪಡಿಸಿದ್ದಾರೆ.

ಸೋಲು-ಗೆಲುವಿನ ರಾಜಕೀಯ ಪಯಣ

ಸಂಸ್ಥಾ ಕಾಂಗ್ರೆಸ್ ಮೂಲಕ 1971ರ ಲೋಕ ಸಭಾ ಚುನಾವಣೆ ಸಂದರ್ಭದಲ್ಲಿ ರಾಜಕೀಯ ಕ್ಷೇತ್ರದಲ್ಲಿ ಸಕ್ರಿಯರಾದ ಜಿಟಿಡಿ, 1987ರ ಪ್ರಥಮ ಜಿಲ್ಲಾ ಪರಿಷತ್ ಚುನಾವಣೆಯಲ್ಲಿ ಇಲವಾಲ ಕ್ಷೇತ್ರದಿಂದ ಸ್ಪರ್ಧಿಸಿ ಗೆಲುವು ದಾಖಲಿಸಿದರು. 1995ರ ಜಿಲ್ಲಾ ಪಂಚಾಯತ್ ಚುನಾವಣೆಯಲ್ಲಿ ಪುನರಾಯ್ಕೆಯಾದರಲ್ಲದೆ, 1995ರಿಂದ 97ರವರೆಗೆ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದರು. 1996ರ ಲೋಕಸಭಾ ಚುನಾವಣೆಯಲ್ಲಿ ಮೈಸೂರು ಕ್ಷೇತ್ರದಿಂದ ಸ್ಪರ್ಧಿಸಿ, ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ವಿರುದ್ಧ 10 ಸಾವಿರ ಮತಗಳಿಂದ ಪರಾಭವಗೊಂಡರು. 1998ರ ಲೋಕಸಭಾ ಚುನಾವಣೆಯಲ್ಲೂ ಸೋತರು. ಆದರೆ ಅದೇ ವರ್ಷ ವಿಧಾನಸಭೆ ಚುನಾವಣೆಯಲ್ಲಿ ಹುಣಸೂರು ವಿಧಾನ ಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಸ್ಪರ್ಧಿಸಿ ಗೆಲ್ಲುವ ಮೂಲಕ ಮೊದಲ ಬಾರಿ ವಿಧಾನ ಸಭೆ ಪ್ರವೇಶಿಸಿದರು. 1999ರ ಸಾರ್ವತ್ರಿಕ ಚುನಾವಣೆಯಲ್ಲಿ ಮತ್ತೆ ಸೋತರು. 2004ರ ಚುನಾವಣೆಯಲ್ಲಿ ಹುಣಸೂರು ವಿಧಾನ ಸಭಾ ಕ್ಷೇತ್ರದಿಂದ ಸ್ಪರ್ಧಿಸಿ, 2ನೇ ಬಾರಿ ಶಾಸಕರಾದರು. 2007ರಲ್ಲಿ ಸಚಿವರಾಗಿ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾಗಿಯೂ ಕಾರ್ಯ ನಿರ್ವಹಿಸಿದರು. 2013ರ ವಿಧಾನಸಭಾ ಚುನಾವಣೆಯಲ್ಲಿ ಚಾಮುಂಡೇಶ್ವರಿ ಕ್ಷೇತ್ರದಿಂದ ಗೆದ್ದರು. 2018ರ ಚುನಾವಣೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು 36,042 ಮತಗಳ ಭಾರೀ ಅಂತರದಲ್ಲಿ ಮಣಿಸಿದರು. ಆ ವೇಳೆ ಉನ್ನತ ಶಿಕ್ಷಣ ಸಚಿವರಾಗಿ ಸೇವೆ ಸಲ್ಲಿಸಿದರು. 2023ರಲ್ಲಿ ಇದೇ ಕ್ಷೇತ್ರದಿಂದ ಹ್ಯಾಟ್ರಿಕ್ ಗೆಲುವು ದಾಖಲಿಸಿದ್ದಾರೆ.

ಜೀವನದಲ್ಲಿ ಏನೆಲ್ಲಾ ಬದಲಾವಣೆ, ಬೆಳವಣಿಗೆ ಆದರೂ ಕೃಷಿಯಿಂದ ಎಂದೂ ವಿಮುಖರಾಗಿಲ್ಲ. ವಿದೇಶಿ ಪ್ರವಾಸಕ್ಕೆ ಹೋದಾಗಲೆಲ್ಲಾ ಅಲ್ಲಿನ ವ್ಯವಸಾಯ ಪದ್ಧತಿ ತಿಳಿದು ತಮ್ಮ ಭೂಮಿಯಲ್ಲಿ ಪ್ರಯೋಗಿಸಿ, ಯಶಸ್ವಿಯಾದರೆ ಆ ಬಗ್ಗೆ ರೈತರಿಗೆ ಅರಿವು ಮೂಡಿಸುವ ಜಿಟಿಡಿ, ಓರ್ವ ಯಶಸ್ವಿ ರೈತ.

ತನ್ನೊಂದಿಗೆ ಇತರರನ್ನೂ ಬೆಳೆಸುವ ಸಹಕಾರಿ

ಕೃಷಿಕರ ಕೈ ಬಲಪಡಿಸುವ ಸಹಕಾರ ಕ್ಷೇತ್ರದಲ್ಲೂ ಜಿಟಿಡಿ ಅವರು ಮೈಲಿಗಲ್ಲು ಸ್ಥಾಪಿಸಿದ್ದಾರೆ. ಸ್ವಗ್ರಾಮ ಗುಂಗ್ರಾಲ್ ಛತ್ರ ಸಹಕಾರಿ ಸಂಘದ ಕಾರ್ಯದರ್ಶಿಯಾಗಿ 1970ರಲ್ಲಿ ಸಹಕಾರ ಕ್ಷೇತ್ರಕ್ಕೆ ಅಡಿಯಿಟ್ಟ ಇವರು, ಎರಡೇ ವರ್ಷದಲ್ಲಿ ಸಂಘದ ಸದಸ್ಯರಿಗೆ ಶೇ.4ರ ಬಡ್ಡಿದರದಲ್ಲಿ ಸಾಲ ಸೌಲಭ್ಯ ಕಲ್ಪಿಸಿ, ಗಮನ ಸೆಳೆದವರು. ಅಲ್ಲದೆ ಪ್ರತಿಯೊಂದು ಮನೆಗೂ ವಿದ್ಯುತ್ ಸಂಪರ್ಕಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ನಂತರ ಕಾರ್ಯದರ್ಶಿ ಹುದ್ದೆಗೆ ರಾಜೀನಾಮೆ ನೀಡಿ ಸಂಘದ ಅಧ್ಯಕ್ಷರಾಗಿ ಆಡಳಿತ ಚುಕ್ಕಾಣಿ ಹಿಡಿದರು. 1983ರಲ್ಲಿ ಸಹಕಾರ ಕ್ಷೇತ್ರದ ಮತ್ತೊಂದು ಹಂತಕ್ಕೆ ಹೆಜ್ಜೆ ಇಟ್ಟು, ಮೈಸೂರು ತಾಲೂಕು ಎಪಿಎಂಸಿ ಚುನಾವಣೆಯಲ್ಲಿ ಗೆಲುವು ಸಾಧಿಸಿ, ಉಪಾಧ್ಯಕ್ಷರಾದರು. ಆ ವೇಳೆ ಸಹಕಾರಿ ಮತ್ತು ಮಾರುಕಟ್ಟೆ ಸಚಿವರಾಗಿದ್ದ ಆರ್.ಎಲ್. ಜಾಲಪ್ಪನವರೊಂದಿಗೆ ತರಕಾರಿ ನಿಯಂತ್ರಣ ಕಾಯ್ದೆ ಜಾರಿಗೆ ಹೋರಾಟ ನಡೆಸಿದ್ದರು. 1986ರಲ್ಲಿ ಟಿಎಪಿಸಿಎಂಎಸ್ ನಿರ್ದೇಶಕರಾಗಿ, ನಂತರ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರಾಗಿ, ಮೈಸೂರು ವಿಭಾಗದಿಂದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರಾಗಿ, ಮೂರೂವರೆ ವರ್ಷ ಕರ್ನಾಟಕ ರಾಜ್ಯ ಸಹಕಾರ ಮಂಡಳದ ಅಧ್ಯಕ್ಷರಾಗಿ, ರಾಷ್ಟ್ರೀಯ ಸಹಕಾರಿ ಯೂನಿಯನ್ ನಿರ್ದೇಶಕರಾಗಿ ಹಂತ ಹಂತವಾಗಿ ಮೇಲೆ ಬಂದು ಸಹಕಾರಿ ಕ್ಷೇತ್ರದ ಧುರೀಣರಾದರು. 2001ರಿಂದ 2015ರವರೆಗೆ ಮತ್ತೆ ಕರ್ನಾಟಕ ರಾಜ್ಯ ಸಹಕಾರ ಮಹಾ ಮಂಡಳದ ಅಧ್ಯಕ್ಷರಾಗಿ, ಸಹಕಾರಿ ಕ್ಷೇತ್ರದ ಚುನಾಯಿತ ಪ್ರತಿನಿಧಿಗಳ ಸಂಘದ ಸದಸ್ಯರಾಗಿ, 2006-2013ರವರೆಗೆ ಕರ್ನಾಟಕ ರಾಜ್ಯ ವಿಮಾ ಸಹಕಾರಿ ಸಂಘದ ಸಂಸ್ಥಾಪಕ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದರು. 2021ರ ಮಾರ್ಚ್ 28ರಂದು ಕರ್ನಾಟಕ ರಾಜ್ಯ ಸಹಕಾರಿ ಮಹಾಮಂಡಳದ ನಿರ್ದೇಶಕರಾಗಿ, 2021ರ ಏಪ್ರಿಲ್ 6ರಂದು ಕರ್ನಾಟಕ ರಾಜ್ಯ ಸಹಕಾರಿ ಮಹಾಮಂಡಳದ ಅಧ್ಯಕ್ಷರಾಗಿ ಮತ್ತೊಮ್ಮೆ ಅವಿರೋಧವಾಗಿ ಆಯ್ಕೆಯಾದರು. ಸಹಕಾರ ಕ್ಷೇತ್ರದ ಪ್ರತಿ ಹೆಜ್ಜೆಯಲ್ಲೂ ತಮ್ಮೊಂದಿಗೆ ಇತರರನ್ನೂ ಬೆಳೆಸುವ ಮೂಲಕ ಉತ್ತಮ ಸಹಕಾರಿಯಾದರು.

ಅರಸಿ ಬಂದ ಪ್ರಶಸ್ತಿ-ಪುರಸ್ಕಾರಗಳು

ಸಹಕಾರ ಕ್ಷೇತ್ರದಲ್ಲಿ ನಾಯಕತ್ವಕ್ಕಿಂತ ಮುಂದಾಳತ್ವ ಮುಖ್ಯ. ಎಲ್ಲರನ್ನೂ ಒಟ್ಟಿಗೆ ಕರೆದುಕೊಂಡು ಮುನ್ನಡೆದರೆ ಮಾತ್ರ ಯಶಸ್ಸು ಸಾಧ್ಯ. ಈ ಮಾರ್ಗದಿಂದಲೇ ಜಿಟಿಡಿ, ಸಹಕಾರಿ ಕ್ಷೇತ್ರದ ಹೆಮ್ಮರವಾಗಲು ಸಾಧ್ಯವಾಗಿದ್ದು. ನೆದರ್‌ಲ್ಯಾಂಡ್, ಸ್ವೀಡನ್, ಬ್ರೆಜಿಲ್, ಫ್ರಾನ್ಸ್, ಇಂಗ್ಲೆಂಡ್, ಪೋಲೆಂಡ್, ಬ್ಯಾಂಕಾಕ್, ಸಿಡ್ನಿ ಸೇರಿದಂತೆ ಹಲವು ದೇಶಗಳ ಸಹಕಾರಿ ಕ್ಷೇತ್ರದ ಅಧ್ಯಯನದ ಅನುಭವದ ಆಧಾರದಲ್ಲಿ ಇಲ್ಲಿ ಸಾಕಷ್ಟು ಸುಧಾರಣೆಗಳನ್ನು ತಂದಿದ್ದಾರೆ. ಸಹಕಾರಿ ಕ್ಷೇತ್ರದಲ್ಲಿ ಆರಂಭದಿಂದಲೂ ಹಲವು ಸಹಕಾರ ಸಂಘಗಳು ಹಾಗೂ ಸಂಸ್ಥೆಗಳ ಪ್ರಶಸ್ತಿ-ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ. ಮೈಸೂರು ವಿಭಾಗದ ಅತ್ಯುತ್ತಮ ಕಾರ್ಯದರ್ಶಿ ಪ್ರಶಸ್ತಿ, ಭಾರತ ರತ್ನ ವಿಕಾಸ ಪ್ರಶಸ್ತಿ, ಜೀವನಶ್ರೇಷ್ಠ ಪ್ರಶಸ್ತಿ, ಸಹಕಾರ ಕ್ಷೇತ್ರದ ರಾಯಭಾರಿ ಬಿರುದು ಪುರಸ್ಕಾರ, ಸಹಕಾರ ಶಿರೋಮಣಿ ಹೀಗೆ ಹಲವು ಪ್ರಶಸ್ತಿಗಳು ಜಿಟಿಡಿಗೆ ಸಂದಿವೆ.

■ ಎಸ್.ಬಿ.ದೇವರಾಜ

ವಿವಿಧ ಹಂತಗಳಲ್ಲಿ ಸಂಘಟನೆ; ಜನಸೇವೆ

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಯಶಸ್ವಿ ರಾಜಕೀಯ ಪಯಣದಲ್ಲಿ ಜೊತೆಗಿದ್ದವರಲ್ಲಿ ಜಿಟಿಡಿಯವರೂ ಒಬ್ಬರು. ಸಂಘಟನೆ ಮೂಲಕ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸುವಲ್ಲಿ ಇವರು ನಿಸ್ಸೀಮರಾಗಿದ್ದವರು. 1987ರಿಂದ 90ರವರೆಗೆ ಜಿಲ್ಲಾ ಯುವ ಜನತಾದಳದ ಉಪಾಧ್ಯಕ್ಷರಾಗಿ, 1990-2000ದವರೆಗೆ ಜಿಲ್ಲಾ ಗ್ರಾಮಾಂತರ ಜನತಾದಳದ ಮಹಾ ಪ್ರಧಾನ ಕಾರ್ಯದರ್ಶಿಯಾಗಿ ಪಕ್ಷ ಬಲಪಡಿಸಿದ್ದರು. ಕರ್ನಾಟಕ ರಾಜ್ಯ ಜಿಲ್ಲಾ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರ ಸಂಘಟನೆಯ ರಾಜ್ಯ ಅಧ್ಯಕ್ಷರಾಗಿ ನೂರು ದಿನದಲ್ಲಿ 235 ಗ್ರಾಮ ಪಂಚಾಯಿತಿಗಳಲ್ಲಿ ವಾಸ್ತವ್ಯ ಹೂಡುವ ಮೂಲಕ ಜನರಿಗೆ ಸವಲತ್ತು ಕಲ್ಪಿಸಿದ್ದರು. ಹೆಚ್.ಡಿ. ದೇವೇಗೌಡರು ಮುಖ್ಯಮಂತ್ರಿ ಯಾಗಿದ್ದಾಗ ಮೈಸೂರಲ್ಲಿ ಪ್ರಪ್ರಥಮ ಬಾರಿಗೆ ಜನತಾ ದರ್ಶನ ಏರ್ಪಡಿಸಿ ದಾಖಲೆ ಬರೆದರು. ಕರ್ನಾಟಕ ಪ್ರದೇಶ ಜನತಾದಳ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ, 2000-2007ರವರೆಗೆ ಜೆಡಿಎಸ್ ಜಿಲ್ಲಾ ಗ್ರಾಮಾಂತರ ಅಧ್ಯಕ್ಷರಾಗಿ ಕೆಲಸ ಮಾಡಿದರು. ಈ ಸಂದರ್ಭದಲ್ಲೇ ರಾಜ್ಯದಲ್ಲೇ ಮೊದಲಿಗೆ ಮೈಸೂರು ಜಿಪಂ ಸೇರಿದಂತೆ ಇತರೆ ಸ್ಥಳೀಯ ಸಂಸ್ಥೆಗಳಲ್ಲಿ ಜೆಡಿಎಸ್ ಅಧಿಕಾರ ಹಿಡಿದಿದ್ದು ವಿಶೇಷ. ಹೀಗೆ ಸಾಧಿಸುವ ಛಲದಿಂದಲೇ ಜೀವನದಲ್ಲಿ ಪ್ರತಿ ಹೆಜ್ಜೆಯಿಟ್ಟಿರುವ ಜಿಟಿಡಿ ಸದ್ಯ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರಾಗಿ ಪಕ್ಷ ಸಂಘಟನೆಗೆ ಕಟಿಬದ್ಧರಾಗಿದ್ದಾರೆ.

ಬೆಂಗಳೂರು ತಲುಪಿದ ಕ್ಯಾಪ್ಟನ್ ಪ್ರಾಂಜಲ್ ಪಾರ್ಥಿವ ಶರೀರ: ಗಣ್ಯರಿಂದ ಗೌರವ ನಮನ



ಬೆಂಗಳೂರು : ಕಾಶ್ಮೀರದ ರಜೌರಿ ಜಿಲ್ಲೆಯಲ್ಲಿ ಬುಧವಾರ ಉಗ್ರರೊಂದಿಗೆ ನಡೆದ ಎನ್‌ಕೌಂಟರ್‌ನಲ್ಲಿ ಹುತಾತ್ಮರಾದ 63 ನೇ ರಾಷ್ಟ್ರೀಯ ರೈಫಲ್ಸ್‌ನ ಯೋಧ ಕ್ಯಾಪ್ಟನ್ ಎಂ.ವಿ. ಪ್ರಾಂಜಲ್ ಅವರ ಪಾರ್ಥಿವ ಶರೀರ ಬೆಂಗಳೂರು ತಲುಪಿದೆ.

ಬೆಂಗಳೂರಿನ ಹೆಚ್‌ಎಎಲ್ ವಿಮಾನ ನಿಲ್ದಾಣ ತಲುಪಿದ ಕ್ಯಾಪ್ಟನ್ ಪ್ರಾಂಜಲ್ ಪಾರ್ಥಿವ ಶರೀರಕ್ಕೆ ಗಣ್ಯರು ಪುಷ್ಪಗುಚ್ಛ ಸಮರ್ಪಿಸಿ ಗೌರವ ಸಲ್ಲಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಸಂಸದ ತೇಜಸ್ವಿ ಸೂರ್ಯ, ಇಂಧನ ಸಚಿವ ಕೆಜೆ ಜಾರ್ಜ್, ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಸೇರಿದಂತೆ ಇತರರು ಇದ್ದರು.

ಯೋಧ ಪ್ರಾಂಜಲ್ ಅವರು ಮೂಲತಃ ಮೈಸೂರು ಜಿಲ್ಲೆಯವರಾಗಿದ್ದು, ಅವರ ಕುಟುಂಬಸ್ಥರು ಆನೇಕಲ್‌ನ ಜಿಗಣಿಯ ನಂದನವನ ಬಡಾವಣೆಯಲ್ಲಿ ವಾಸವಿದ್ದಾರೆ. ಪ್ರಾಂಜಲ್ ಮಂಗಳೂರು ರಿಫೈನರಿ ಮತ್ತು ಪೆಟ್ರೋ ಕೆಮಿಕಲ್ಸ್ ಲಿಮಿಟೆಡ್ (MRPL)ನ ಮಾಜಿ ನಿರ್ದೇಶಕ ಎಂ ವೆಂಕಟೇಶ್ ಅವರ ಏಕೈಕ ಪುತ್ರರಾಗಿದ್ದರು. ಹೆಚ್‌ಎಎಲ್‌ನಿಂದ ನಿವಾಸದತ್ತ ಪ್ರಾಂಜಲ್ ಪಾರ್ಥಿವ ಶರೀರವನ್ನು ಕೊಂಡೊಯ್ಯ ಲಾಗಿದ್ದು, ನಾಳೆ ಬೆಳಗ್ಗೆ ಸಾರ್ವಜನಿಕರಿಗೆ ಅಂತಿಮ ದರ್ಶನದ ವ್ಯವಸ್ಥೆ ಮಾಡ ಲಾಗಿದೆ ಬಳಿಕ ಸೇನಾ ಗೌರವ ಗಳೊಂದಿಗೆ ಬೆಂಗಳೂರು-ಹೊಸೂರು ಹೆದ್ದಾರಿಯ ಕೂಡ್ಲು ವಿದ್ಯುತ್ ಚಿತಾಗಾರದಲ್ಲಿ ಅಂತ್ಯಕ್ರಿಯೆ ನಡೆಯಲಿದೆ.

ಪೈಪ್‌ಲೈನ್ ಕಾಮಗಾರಿ; ಕಾರಂಜಿಕೆರೆ ರಸ್ತೆ ಬಂದ್

ಮೈಸೂರು, ನ.24(ಎಂಕೆ)- ಪೈಪ್‌ಲೈನ್ ಕಾಮಗಾರಿ ಹಿನ್ನಲೆ ಕಾರಂಜಿ ಕೆರೆ ರಸ್ತೆ(ಕಾರಂಜಿ ಕೆರೆ ಏರಿ ರಸ್ತೆ)ಯನ್ನು ಬಂದ್ ಮಾಡಲಾಗಿದೆ.

ಕಾರಂಜಿ ಕೆರೆಯ ಬಳಿಯ ಪಂಪ್ ಹೌಸ್‌ನಿಂದ ಮೃಗಾಲಯದ ಹಿಂಭಾಗದ ಮೈದಾನದಲ್ಲಿ(ಸರ್ಕಸ್ ನಡೆಯುವ ಮೈದಾನ)ನ ವಸಂತ ಮಹಲ್ ಒಳಗಿರುವ ನಗರಪಾಲಿಕೆಯ ಟ್ಯಾಂಕ್‌ಗೆ ನೀರು ಸರಬರಾಜು ಮಾಡುವ ಪೈಪ್‌ಲೈನ್ ಕಾಮಗಾರಿ ಹಿನ್ನಲೆಯಲ್ಲಿ ಕಾರಂಜಿ ಕೆರೆ ರಸ್ತೆ ಬಂದ್ ಮಾಡಲಾಗಿದೆ.



ಸುಮಾರು 40 ಲಕ್ಷ ರೂ.ವೆಚ್ಚದಲ್ಲಿ ಪೈಪ್‌ಲೈನ್ ಕಾಮಗಾರಿ ನಡೆಯುತ್ತಿದ್ದು, ಕಾರಂಜಿಕೆರೆ ಪಂಪ್‌ಹೌಸ್‌ನಿಂದ ಟ್ಯಾಂಕ್‌ಗೆ ನೀರು ಸರಬರಾಜುಗೊಂಡರೆ ನಜರ್‌ಬಾದ್, ಇಟ್ಟಿಗೆಗೂಡು, ವೆಂಕಟಲಿಂಗಯ್ಯ ಬಡಾವಣೆ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ನೀರಿನ ಸಮಸ್ಯೆ ಬಗೆಹರಿಸಲಿದೆ ಎಂದು ನಗರ ಪಾಲಿಕೆ ವಾರ್ಡ್.52ರ ಮಾಜಿ ಸದಸ್ಯೆ ಛಾಯಾದೇವಿ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಸುಮಾರು 15-20 ದಿನ: ದಸರಾ ಸಂದರ್ಭದಲ್ಲಿ ವಾಹನಗಳ ದಟ್ಟಣೆ ಹೆಚ್ಚಾಗಿರುವುದರಿಂದ ತಡವಾಗಿಯೇ ಕಾಮಗಾರಿ ಆರಂಭಿಸಲಾಗಿದೆ. ಕಾಮಗಾರಿಯು ತ್ವರಿತವಾಗಿ ನಡೆಯುತ್ತಿದ್ದು, 15-20 ದಿನಗಳವರೆಗೆ ಕಾರಂಜಿಕೆರೆ ರಸ್ತೆ ಬಂದ್ ಆಗಿರಲಿದೆ. ರಾಣಾ ಪ್ರತಾಪ ಸಿಂಹ ವೃತ್ತದಿಂದ(ಗಾಲ್ಫ್ ಕ್ಲಬ್‌ಗೆ ಹೋಗುವ ಮಾರ್ಗದ ವೃತ್ತ) ಜಂಬೋ ಸರ್ಕಸ್ ನಡೆಯುವ ಮೈದಾನದವರೆಗೂ ರಸ್ತೆಯನ್ನು ಸಂಪೂರ್ಣ ಬಂದ್ ಮಾಡಲಾಗಿದೆ. ಈ ರಸ್ತೆಯಲ್ಲಿ ಸಂಚರಿಸುತ್ತಿದ್ದ ವಾಹನ ಸವಾರರು ಕಾಮಗಾರಿ ಮುಗಿಯುವವರೆಗೆ ಸಹಕರಿಸುವಂತೆ ಕೋರಿದ್ದಾರೆ.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	(ದೂ: 2521923)
ಗರಡಿ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಬ್ಯಾಡ್ ಮ್ಯಾನರ್ಸ್ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಟೈಗರ್-3 (ಹಿಂದಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಶುಗರ್ ಫ್ಯಾಕ್ಟರಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಸಪ್ತ ಸಾಗರದಾಚೆ ಎಲ್ಲೋ-ಸೈಡ್ B(ಕ)	2 ಪ್ರದರ್ಶನಗಳು
ರಾಜಕಮಲ್	
ಆಧಿಕೇಶವ (ತೆ)	4 ಪ್ರದರ್ಶನಗಳು
ಸಂಗಂ	
ಗರಡಿ (ಕ)	4 ಪ್ರದರ್ಶನಗಳು
ಲಿಡೋ	
ಶುಗರ್ ಫ್ಯಾಕ್ಟರಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಗರಡಿ (ಕ)	4 ಪ್ರದರ್ಶನಗಳು
ಪ್ರಭಾ	
ಟಗರು ಫಲ್ಯ(ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	**ಟೈಗರ್ 3(ಹಿಂ):** ಬೆ.10.20ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, **ಟಗರುಪಲ್ಯ (ಕ):** ಮ.1.20ಕ್ಕೆ.
ಸ್ಕ್ರೀನ್ 2	**ದಿ ವೆಕೆಂಟ್ ಹೌಸ್ (ಕ):** ಬೆ.11ಕ್ಕೆ, **ರಾಜಯೋಗ (ಕ):** ಮ.1.15ಕ್ಕೆ, **ನೇತ್ರಂ (ಕ):** ಸಂ.4.30ಕ್ಕೆ, **ಗರಡಿ (ಕ):** ರಾ.7.10ಕ್ಕೆ, **ಸ್ಪಾರ್ಕ್ ಲೈಫ್ (ತೆ):** ರಾ.10ಕ್ಕೆ.
ಸ್ಕ್ರೀನ್ 3	**ಟ್ರೋಲ್ಸ್ ಬ್ಯಾಂಡ್ ಟುಗೆದರ್ (3ಡಿ)(ಇಂ):** ಬೆ.11ಕ್ಕೆ, ಮ.3.35ಕ್ಕೆ, ಸಂ.5.30ಕ್ಕೆ, **ಬೆಂಬಿಡದ ನಾವಿಕ (ಕ):** ಮ.1ಕ್ಕೆ, **ಶೇಶಮ್ ಮೈಕ್ ಇಲ್ ಫಾತಿಮಾ (ಮ):** ರಾ.7.30ಕ್ಕೆ, **ದಿ ಹಂಗರ್ ಗೇಮ್ಸ್ (ಇಂ):** ರಾ.10.10ಕ್ಕೆ.
ಸ್ಕ್ರೀನ್ 4	**ಸಪ್ತ ಸಾಗರದಾಚೆ ಎಲ್ಲೋ 2 (ಕ):** ಬೆ.10.05ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
LIVE THE MOVIE
ದೂ : 2533444 / 2433456

ಸ್ಕ್ರೀನ್ 1	**ಸಪ್ತ ಸಾಗರದಾಚೆ ಎಲ್ಲೋ 2 (ಕ):** ಬೆ.9.40ಕ್ಕೆ, ಮ.12.50ಕ್ಕೆ, ಸಂ.4ಕ್ಕೆ, ರಾ.7.10ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	**ಸಪ್ತ ಸಾಗರದಾಚೆ ಎಲ್ಲೋ 2 (ಕ):** ಬೆ.9ಕ್ಕೆ, ಮ.12.10ಕ್ಕೆ, ಸಂ.3.20ಕ್ಕೆ, ಸಂ.6.30ಕ್ಕೆ, ರಾ.9.40ಕ್ಕೆ.
ಸ್ಕ್ರೀನ್ 3	**ಟೈಗರ್ 3 (ಹಿಂ):** ಬೆ.9.10ಕ್ಕೆ, ಮ.12.30ಕ್ಕೆ, ಮ.3.50ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 4	**ಮಂಗಳವಾರಂ (ತೆ):** ಬೆ.9.10ಕ್ಕೆ, ಮ.12.25ಕ್ಕೆ, ಸಂ.6.45ಕ್ಕೆ, **ಗರಡಿ (ಕ):** ಮ.3.40ಕ್ಕೆ, **ಟೈಗರ್ 3 (ಹಿಂ):** ರಾ.10ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821-2973519

ಸ್ಕ್ರೀನ್ 1	**ದಿ ವೆಕೆಂಟ್ ಹೌಸ್ (ಕ):** ಬೆ.11ಕ್ಕೆ, ಸಂ.4.10ಕ್ಕೆ, **ರಾಜಯೋಗ (ಕ):** ಮ.1.05ಕ್ಕೆ, ಸಂ.6.15ಕ್ಕೆ, **ಟಗರುಪಲ್ಯ (ಕ):** ರಾ.9.15ಕ್ಕೆ.
ಸ್ಕ್ರೀನ್ 2	**ಸಪ್ತ ಸಾಗರದಾಚೆ ಎಲ್ಲೋ 2 (ಕ):** ಬೆ.10ಕ್ಕೆ, ಮ.1.15ಕ್ಕೆ, ರಾ.7.30ಕ್ಕೆ, **ಟೈಗರ್ 3 (ಹಿಂ):** ಸಂ.4.20ಕ್ಕೆ.
ಸ್ಕ್ರೀನ್ 3	**ಟೈಗರ್ 3(ಹಿಂ):** ಬೆ.11ಕ್ಕೆ, **ಸಪ್ತ ಸಾಗರದಾಚೆ ಎಲ್ಲೋ 2 (ಕ):** ಮ.3.45ಕ್ಕೆ, ಸಂ.6.35ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	**ಟಗರುಪಲ್ಯ (ಕ):** ಬೆ.10.30ಕ್ಕೆ, ಸಂ.4.10ಕ್ಕೆ, ಸಂ.6.50ಕ್ಕೆ, **ಟೈಗರ್ 3 (ಹಿಂ):** ಮ.1.05ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಫ್ಲೋಸ್ಟ್ (ಕ): ಬೆ.9ಕ್ಕೆ, ಬೆ.10.20ಕ್ಕೆ, ಮ.1.15ಕ್ಕೆ, ಮ.3.20ಕ್ಕೆ, ರಾ.7.35ಕ್ಕೆ, ರಾ.9.45ಕ್ಕೆ, ರಾ.10.30ಕ್ಕೆ, **12th ಫೇಲ್ (ಹಿಂ):** ಮ.3.50ಕ್ಕೆ, **ಭಗವಂತ್ ಕೇಸರಿ (ತೆ):** ರಾ.7.05ಕ್ಕೆ, **ಗಣಪತ್: ಎ ಹೀರೋ (ಹಿಂ):** ಸಂ.4.10ಕ್ಕೆ, **ಕಿಲ್ಲರ್ಸ್ ಆಫ್ ಫ್ಲವರ್ ಮೂನ್ (ಇಂ):** ಬೆ.10ಕ್ಕೆ, ಮ.2.05ಕ್ಕೆ, ಸಂ.6.10ಕ್ಕೆ, ರಾ.10.15ಕ್ಕೆ, **ಲಿಯೋ (ಕ):** ಮ.12.45ಕ್ಕೆ, **ಲಿಯೋ (ತ):** ಬೆ.11.55ಕ್ಕೆ, ಸಂ.4.10ಕ್ಕೆ, ಸಂ.6.15ಕ್ಕೆ, ರಾ.9.40ಕ್ಕೆ, ರಾ.10.30ಕ್ಕೆ, **ಮುಜಿಬ್ ದಿ ಮೇಕಿಂಗ್ ಆಫ್ ಎ ನೇಷನ್ (ಹಿಂ):** ರಾ.10ಕ್ಕೆ, **ಟಗರುಪಲ್ಯ (ಕ):** ಮ.1ಕ್ಕೆ, ರಾ.7ಕ್ಕೆ, **ತೇಜಸ್ (ಹಿಂ):** ಬೆ.11.05ಕ್ಕೆ, ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಅಕ್ರಮ ಚಟುವಟಿಕೆಗಳ ತಾಣವಾಗಿರುವ ನರಸೀಪುರ ಪುರಸಭಾ ನೂತನ ಕಟ್ಟಡ

ಕಾಮಗಾರಿ ಪೂರ್ಣಗೊಂಡಿದ್ದರೂ ಉದ್ಘಾಟನೆಗೆ ಕಾದು ನಿಂತಿರುವ ಕಚೇರಿ

ಎಸ್. ಕುಮಾರ್

ತಿ.ನರಸೀಪುರ, ನ.24– ಪಟ್ಟಣದ ಕಾವೇರಿ ವಸತಿ ಗೃಹದ ಮುಂಭಾಗ ನಿರ್ಮಿಸಿರುವ ಪುರಸಭಾ ಕಚೇರಿಯ ನೂತನ ಕಟ್ಟಡ ಉದ್ಘಾಟನೆಗೊಳ್ಳದೇ ಅನಾಥವಾಗಿದ್ದು, ಪುಂಡು-ಪೋಕರಿಗಳು ಮತ್ತು ಕುಡುಕರಿಗೆ ತಾಣವಾಗಿದೆ.

ಸುಮಾರು ಆರು ಕೋಟಿ ರೂ. ವೆಚ್ಚದಲ್ಲಿ ಬೃಹದಾಕಾರ ಕಟ್ಟಡ ನಿರ್ಮಾಣವಾಗಿ ವರ್ಷಗಳೇ ಉರುಳಿದರೂ ಉದ್ಘಾಟನೆಗೊಳ್ಳದ ಕಾರಣ ಅಕ್ರಮ ಚಟುವಟಿಕೆಗಳಿಗೆ ಅವಕಾಶ ನೀಡಿದಂತಾಗಿದೆ. 2016-17ನೇ ಸಾಲಿನಲ್ಲಿ ಆಗಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪುರಸಭಾ ಕಚೇರಿಗೆ ಭೂಮಿ ಪೂಜೆ ನೆರವೇರಿಸಿದ್ದರು.

ಕಟ್ಟಡ ಸಂಪೂರ್ಣಗೊಂಡಿದ್ದು, 6 ವರ್ಷಗಳಿಂದ ಉದ್ಘಾಟನೆಗೊಳ್ಳದ ಕಾರಣ ಕಟ್ಟಡದ ಸುತ್ತಮುತ್ತ ಗಿಡಗಂಟೆಗಳ ಬೆಳೆದು ನಿಂತಿದೆ. ಇದಕ್ಕೆ ಗೇಟ್ ಕೂಡ ಇಲ್ಲದೆ ಪುಂಡಪೋಕರಿಗಳು, ಕುಡುಕರು ಹಗಲು-ರಾತ್ರಿಯನ್ನದೆ ಕುಡಿದು ಮಜಾ ಮಾಡಲು ಬಳಸಿಕೊಳ್ಳುತ್ತಿದ್ದಾರೆ.



ಈ ಹಿಂದೆ ಪಟ್ಟಣ ಪಂಚಾಯಿತಿಯಾಗಿದ್ದು ಒಟ್ಟು 11 ಸದಸ್ಯರಿದ್ದರು. ಆಗಿನ ಪಪಂ 11 ವಾರ್ಡ್‌ಗಳಿಗೆ ಸೀಮಿತವಾಗಿತ್ತು ನಂತರ ಪಟ್ಟಣದ ಜನಸಂಖ್ಯೆ ಹೆಚ್ಚಾಗುತ್ತಿದ್ದಂತೆ ಇದನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸಲಾಯಿತು. ಆಲುಗೂಡು ಹಾಗೂ ಬೈರಾಪುರ ಗ್ರಾಪಂ ಎರಡನ್ನು ಒಳಗೊಂಡಂತೆ ಪುರಸಭೆಯಾಗಿ ಮೇಲ್ದರ್ಜೆಗೆ ಅನುಮೋದನೆ ದೊರೆತು 11 ವಾರ್ಡ್‌ಗಳಿಂದ 23 ವಾರ್ಡ್‌ಗಳನ್ನು ರಚಿಸಲಾಯಿತು.

ಹಾಲಿ ಕಟ್ಟಡವು ತುಂಬಾ ಚಿಕ್ಕದಾಗಿದ್ದು ಸಭೆ ಸಮಾರಂಭಗಳು ಮತ್ತು ಇನ್ನಿತರ ಕಾರ್ಯಕ್ರಮಗಳನ್ನು ಮಾಡಲು ಜಾಗ ಸಾಕಾಗುವುದಿಲ್ಲ. ಸಾರ್ವಜನಿಕರಿಗೂ ಜಾಗ ಸಾಲದು ಎಂದು ಸದಸ್ಯರುಗಳು ತಿಳಿಸಿದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಅನುದಾನದಡಿಯಲ್ಲಿ ಸುಮಾರು 6 ಕೋಟಿಗೂ ಹೆಚ್ಚು ಹಣ ನೀಡಿ ಕಟ್ಟಡ ನಿರ್ಮಾಣ ಮಾಡಿಸಿದ್ದಾರೆ.

ಹೊಸ ಕಟ್ಟಡದ ಸುತ್ತ ವಿದ್ಯುತ್ ದೀಪಗಳಿಲ್ಲ ಇಲ್ಲಿ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಜಿಲ್ಲಾ ಹಾಗೂ ತಾಲೂಕು ಆಡಳಿತದ ಬಗ್ಗೆ ಸಾರ್ವಜನಿಕರಿಂದ ಆಕ್ಷೇಪ ಹಾಗೂ ಆಡಳಿತದ ಬೇಜವಾಬ್ದಾರಿತನದ ಬಗ್ಗೆ ಆಕ್ರೋಶ ವ್ಯಕ್ತವಾಗಿದೆ.



ಪುರಸಭೆಯ ಹೊಸ ಕಟ್ಟಡ ಕಾಮಗಾರಿ ಮುಗಿದಿದ್ದು, ಮುಖ್ಯಮಂತ್ರಿಗಳ ದಿನಾಂಕ ನಿಗದಿಗೋಸ್ಕರ ನಾವು ಕಾಯುತ್ತಿದ್ದೇವೆ. ಅವರ ದಿನಾಂಕ ನಿಗದಿಯಾದ ತಕ್ಷಣವೇ ಕಚೇರಿ ಉದ್ಘಾಟನೆಗೊಳ್ಳಲಿದೆ. ಅದಲ್ಲದೆ ನಾವು ಯತೀಂದ್ರ ಸಿದ್ದರಾಮಯ್ಯ ಹಾಗೂ ಸಚಿವ ಮಹಾದೇವಪ್ಪನವರ ಗಮನಕ್ಕೂ ಈ ವಿಚಾರ ತಂದಿದ್ದೇವೆ. ಕಟ್ಟಡ ಉದ್ಘಾಟನೆ ಬಗ್ಗೆ ಚರ್ಚಿಸಿದ್ದೇವೆ. ಕ್ಷೇತ್ರದ ಶಾಸಕರು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಮುಖ್ಯಮಂತ್ರಿಗಳು ದಿನಾಂಕ ನಿಗದಿಯಾದ ತಕ್ಷಣವೇ ಕಟ್ಟಡ ಉದ್ಘಾಟನೆ ನೆರವೇರಿಸುತ್ತೇವೆ.

– ವಸಂತ ಕುಮಾರಿ, ಪುರಸಭಾ ಮುಖ್ಯಾಧಿಕಾರಿ.



ಟಿ.ನರಸೀಪುರ ಪಟ್ಟಣ ಪಂಚಾಯಿತಿ 11 ವಾರ್ಡ್‌ಗಳಿಗೆ ಸೀಮಿತವಾಗಿತ್ತು. ಇಲ್ಲಿನ ಜನಸಂಖ್ಯೆಗನುಗುಣವಾಗಿ ಪುರಸಭೆಯಾಗಿ ಮೇಲ್ದರ್ಜೆಗೇರಿಸಲಾಯಿತು. ಆದರೆ ಅಭಿವೃದ್ಧಿ ಮಾತ್ರ ಶೂನ್ಯ. ಸರ್ಕಾರದಿಂದ ಕೋಟ್ಯಾಂತರ ರೂ. ಖರ್ಚು ಮಾಡಿ ಕಟ್ಟಡ ನಿರ್ಮಾಣ ಮಾಡಿ ಸಾರ್ವಜನಿಕವಾಗಿ ಉಪಯೋಗಕ್ಕೆ ಬಾರದೆ ಇರುವುದು ದುರದೃಷ್ಟಕರ. ಹಾಲಿ ಮುಖ್ಯಮಂತ್ರಿಗಳ ತವರು ಕ್ಷೇತ್ರ ಮತ್ತು ಜಿಲ್ಲಾ ಉಸ್ತುವಾರಿಗಳ ಕ್ಷೇತ್ರವಾಗಿದ್ದರೂ ಇಂಥ ಕೆಲಸಗಳು ವಿಳಂಬವಾಗುತ್ತಿರುವುದು ಈ ಭಾಗದ ದುರ್ದೈವ.

– ಅರ್ಜುನ್ ರಮೇಶ್, ಪುರಸಭಾ ಸದಸ್ಯರು.

ಮದ್ದೂರು ಬಳಿ ಅಪಘಾತ: ಹುಣಸೂರು ನಿವಾಸಿ ಸಾವು



ಹುಣಸೂರು, ನ.24– ಎರಡು ಬೈಕ್‌ಗಳ ನಡುವೆ ಡಿಕ್ಕಿ ಸಂಭವಿಸಿ ಹುಣಸೂರಿನ ನಿವಾಸಿಯೊಬ್ಬರು ಸ್ಥಳದಲ್ಲೆ ಮೃತಪಟ್ಟು, ಅವರ ಪತ್ನಿ ಸಣ್ಣಪುಟ್ಟ ಗಾಯಗಳಿಂದ ಪಾರಾಗಿರುವ ಘಟನೆ ಮೈಸೂರು-ಬೆಂಗಳೂರು ರಸ್ತೆಯ ಮದ್ದೂರು ತಾಲೂಕಿನ ರುದ್ರಾಕ್ಷಿಪುರ ಬಳಿ ನಿನ್ನೆ ರಾತ್ರಿ ಸಂಭವಿಸಿದೆ. ಹುಣಸೂರು ನಗರದ ಕಲ್ಕುಣಿಕೆಯ ಹೌಸಿಂಗ್ ಬೋರ್ಡ್ ಕಾಲೋನಿಯ ವಾಸಿ ಆಟೋ ಚಾಲಕರ ಸಂಘದ ಮಾಜಿ ಅಧ್ಯಕ್ಷ ಸನಾವುಲ್ಲಾ ಅವರ ಪುತ್ರ ಸಾದಿಕ್ ಅಹಮದ್(42) ಮೃತಪಟ್ಟಿದ್ದು, ಇವರ ಪತ್ನಿ ಸಭಿನಾ ಅವರಿಗೆ ಗಾಯಗಳಾಗಿದ್ದು, ಆಸ್ಪತ್ರೆಗೆ ಸೇರಿಸಲಾಗಿದೆ.

ನಿನ್ನೆ ಸಾದಿಕ್ ತಮ್ಮ ಬಜಾಜ್ ಪ್ಲಾಟಿನಂ ಬೈಕ್ (ಕೆ.ಎ-45 ಇ.ಬಿ-0200)ನಲ್ಲಿ ಸಂಬಂಧಿಕರ ಮನೆಗೆ ಹೋಗಿ ವಾಪಸ್ ಬರುತ್ತಿದ್ದಾಗ ಮದ್ದೂರು ತಾಲೂಕಿನ ರುದ್ರಾಕ್ಷಿಪುರ ಗ್ರಾಮದ ಬಳಿ ಎದುರಿನಿಂದ ಬಂದ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಈ ಘಟನೆ ಸಂಭವಿಸಿದೆ.

ಈ ಸಂಬಂಧ ಮದ್ದೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ. ಮೃತರು ಪತ್ನಿ, ಮೂವರು ಮಕ್ಕಳು ಹಾಗೂ ತಂದೆ ತಾಯಿಯನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಹುಣಸೂರು ನಗರದ ಸಬ್ಬಿರ್‌ನಗರದ ಮುಸ್ಲಿಂ ಸಮಾಜದ ರುದ್ರಭೂಮಿಯಲ್ಲಿ ಇಂದು ನೆರವೆರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ದಿಶಾ ಸಮಿತಿ ಸಭೆ

ಮೈಸೂರು: ನ.28 ರಂದು ಬೆಳಿಗ್ಗೆ 10 ಗಂಟೆಗೆ ಲೋಕಸಭಾ ಸದಸ್ಯ ಪ್ರತಾಪ್ ಸಿಂಹ ಅವರ ಅಧ್ಯಕ್ಷತೆಯಲ್ಲಿ 2023-24ನೇ ಸಾಲಿನ ತ್ರೈ ಮಾಸಿಕದ ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಉಸ್ತುವಾರಿ ಸಮಿತಿ (ದಿಶಾ ಸಮಿತಿ) ಸಭೆಯನ್ನು ಜಿಪಂ ಅಬ್ದುಲ್ ನಜೀರ್‌ಸಾಬ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಶಿವಕುಮಾರ್ ನಿಧನ



ಸರಗೂರು: ನಿಲುವಾಗಿಲು ಮತ್ತು ತುಂಬಸೋಗೆ ಮಹದೇಶ್ವರ ಸ್ವಾಮಿ ಜಾತ್ರಾ ಕಮಿಟಿ ಕಾರ್ಯದರ್ಶಿ ಹಾಗೂ ಜೈನ ಸಮಾಜದ ಮುಖಂಡ ಶಿವಕುಮಾರ್(55) ಶುಕ್ರವಾರ ಹೃದಯಾಘಾತದಿಂದ ನಿಧನರಾಗಿದ್ದಾರೆ. ಮೃತರು ಇಬ್ಬರು ಪುತ್ರ, ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಶುಕ್ರವಾರ ನಿಲುವಾಗಿಲು ಗ್ರಾಮದ ಮೃತರ ಜಮೀನಿನಲ್ಲಿ ಅಂತ್ಯಕ್ರಿಯೆ ನೆರವೇರಿತು.

ಹುಣಸೂರಲ್ಲಿ ಶಾಸಕರ ಏಳು ವಲಯ ಕಚೇರಿ

ಹಿರೀಕ್ಯಾತನಹಳ್ಳಿ, ನ.24– ಹುಣಸೂರು ತಾಲೂಕಿನ ಏಳು ಭಾಗಗಳಲ್ಲಿ ಶಾಸಕರ ವಲಯ ಕಚೇರಿಗಳನ್ನು ತೆರೆಯಲಾಗುವುದು ಎಂದು ಶಾಸಕ ಜಿ.ಡಿ. ಹರೀಶ್ ಗೌಡ ತಿಳಿಸಿದ್ದಾರೆ.

ಹುಣಸೂರು ತಾಲೂಕಿನ ಗಾವಡಗೆರೆ ಹೋಬಳಿ ಕೇಂದ್ರವಾದ ಗಾವಡಗೆರೆಯಲ್ಲಿ ಶಾಸಕರ ವಲಯ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿ ತಾಲೂಕಿನ ಹನಗೋಡು, ಕಸಬಾ, ಬಿಳಿಕೆರೆ, ಗಾವಡಗೆರೆ ಹೋಬಳಿಗಳ ಜೊತೆಗೆ ಹುಣಸೂರು ಪಟ್ಟಣದ ನಗರಸಭೆ ಕಚೇರಿಯಲ್ಲಿ ಈಗಾಗಲೇ ಕಚೇರಿ ಪ್ರಾರಂಭವಾಗಿದೆ. ಜೊತೆಗೆ ಹಲವು ಹೋಬಳಿಗಳಿಗೆ ದೂರವಾಗಿರುವ ಮತ್ತು ಹೆಚ್ಚು ಜನ ಸಂಪರ್ಕವಿರುವ ಗ್ರಾಮಗಳಾದ ಚಿಲ್ಕುಂದ ಹಾಗೂ ರತ್ನಪುರಿ ಗ್ರಾಮಗಳಲ್ಲಿ ಶಾಸಕರ ವಲಯ ಕಚೇರಿ ತೆರೆಯಲಾಗುವುದು ಎಂದರು.

ಜನರು ತಮ್ಮ ಕಷ್ಟ ಹಾಗೂ ಸಮಸ್ಯೆಗಳನ್ನು ಹೇಳಿಕೊಳ್ಳಲು ತಾಲೂಕು ಕೇಂದ್ರಕ್ಕೆ ಬರುವುದನ್ನು ತಪ್ಪಿಸಲು ಹೋಬಳಿ ಕೇಂದ್ರಗಳಲ್ಲಿ ನಮ್ಮ ಪ್ರತಿನಿಧಿಗೆ ತಮ್ಮ ಸಮಸ್ಯೆಯ ಅಹವಾಲುಗಳನ್ನು ಸಲ್ಲಿಸಿದರೆ ನಾನು ಅಂತಹ ಸಮಸ್ಯೆಗಳನ್ನು ಪ್ರತಿದಿನ ತರಿಸಿಕೊಂಡು ಅದನ್ನು ಬಗೆ ಹರಿಸಲು ಸಹಾಯವಾಗುವುದರ ಜೊತೆಗೆ ಅಧಿಕಾರಿಗಳಿಗೆ ನೇರವಾಗಿ ಹೇಳಿ ಕೆಲಸ ಮಾಡಿಸುವುದಾಗಿ ಹೇಳಿದರು.



ಶಾಸಕರಿಗೆ ನೇರವಾಗಿ ಅರ್ಜಿ ನೀಡಿ ಸಮಸ್ಯೆಗಳನ್ನು ಪರಿಹರಿಸಿಕೊಳ್ಳುವ ಬಯಕೆ ಇದ್ದರೆ ನಾನು ಕ್ಷೇತ್ರದಲ್ಲೇ ಇರುತ್ತೇನೆ. ಅಲ್ಲಿಯೇ ಭೇಟಿಯಾಗಿ ಸಮಸ್ಯೆ ಬಗೆಹರಿಸಿಕೊಳ್ಳಬಹುದು. ಜೊತೆಗೆ ರೈತರಿಗೆ ಹೋಬಳಿ ಕೇಂದ್ರದಲ್ಲಿ ಕಚೇರಿ ತೆರೆಯುವುದರ ಉದ್ದೇಶ ರೈತರಿಗೆ ಕೆಲಸದ ಒತ್ತಡ ಇನ್ನಿತರ ಸಮಸ್ಯೆಗಳಿಂದ ತಾಲೂಕು ಕಚೇರಿಗಳಿಗೆ ಬರಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಒಂದು ಹೊಸತನದ ಯೋಜನೆಯನ್ನು ಹೊಂದಿರುವು ದಾಗಿ ಹೇಳಿದರು. ಗ್ರಾಮ ಪಂಚಾಯಿತಿ ಅಧ್ಯಕ್ಷೆ ಧನಲಕ್ಷ್ಮಿ ಮಂಜುನಾಥ್, ಉಪಾಧ್ಯಕ್ಷೆ ಸವಿತಾ ದಿನೇಶ್, ಮಾಜಿ ಅಧ್ಯಕ್ಷ ಹೊನ್ನಪ್ಪ ರಾವ್ ಕಾಳಿಂಗೆ, ಬಿಳಿಗೆರೆ ಗ್ರಾಮ ಪಂಚಾಯಿತಿ ಸದಸ್ಯ ಪ್ರಭು, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಹಿರೀಕ್ಯಾತನಹಳ್ಳಿ ಬಿ.ನಾಗರಾಜ್, ಹಾಗೂ ಹಲವಾರು ಕಾರ್ಯಕರ್ತರು ಹಾಜರಿದ್ದರು.

ನಾಳೆ ಹಳೆ ವಿದ್ಯಾರ್ಥಿಗಳಿಂದ ಗುರುವಂದನ ಕಾರ್ಯಕ್ರಮ

ಹೆಚ್.ಡಿ.ಕೋಟೆ: ಹಳೆ ವಿದ್ಯಾರ್ಥಿಗಳಿಂದ ಗುರುವಂದನ ಕಾರ್ಯಕ್ರಮವನ್ನು ಹೆಚ್.ಡಿ.ಕೋಟೆ ಪಟ್ಟಣದಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ನ.26 ರಂದು ಹಮ್ಮಿಕೊಂಡಿದ್ದಾರೆ ಎಂದು ಪುರಸಭಾ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಐಡಿಯಾ ವೆಂಕಟೇಶ್ ತಿಳಿಸಿದರು.

ಪಟ್ಟಣದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜಿನಲ್ಲಿ ವ್ಯಾಸಂಗ ಮಾಡಿದಂತ ವಿದ್ಯಾರ್ಥಿಗಳು ಸೇರಿ, ಗುರುವಂದನ ಕಾರ್ಯಕ್ರಮವನ್ನು ನಡೆಸುತ್ತಿದ್ದು, ಈ ಕಾರ್ಯಕ್ರಮಕ್ಕೆ, ಕಾಲೇಜಿನಲ್ಲಿ ವ್ಯಾಸಂಗ ಮಾಡಿದಂತ ಎಲ್ಲಾ ಹಳೆಯ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ವಕೀಲ ಮಂಜುನಾಥ್, ಶಿವಪ್ರಸಾದ್ ಬೋವಿ ಕಾಲೋನಿ, ಮೂರ್ತಿ, ಮಾದೇವಯ್ಯ, ಟಿ.ಎನ್. ಪ್ರಕಾಶ್, ಗುರುಸ್ವಾಮಿ, ಹಾಜರಿದ್ದರು.

ಸಹಕಾರ ಸಂಘದ ಅಭಿವೃದ್ಧಿಗೆ ಶ್ರಮಿಸುವೆ

ಸಹಕಾರ ಸಪ್ತಾಹ ಕಾರ್ಯಕ್ರಮದಲ್ಲಿ ಶಾಸಕ ಅನಿಲ್ ಚಿಕ್ಕಮಾದು ಭರವಸೆ



ಸರಗೂರು, ನ.24– ಸಹಕಾರ ಇಲಾಖೆಯಿಂದ ಹೆಚ್ಚಿನ ಅನುದಾನ ತಂದು ಸಹಕಾರ ಸಂಘದ ಅಭಿವೃದ್ಧಿಗೆ ಶಕ್ತಿಮೀರಿ ಶ್ರಮಿಸುವುದಾಗಿ ಶಾಸಕ ಅನಿಲ್ ಚಿಕ್ಕಮಾದು ಭರವಸೆ ನೀಡಿದ್ದಾರೆ.

ಪಟ್ಟಣದ ನಾಮಧಾರಿಗೌಡ ಸಮುದಾಯ ಭವನದಲ್ಲಿ ಸೋಮವಾರ ನಡೆದ 70ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಕ್ಷೇತ್ರಕ್ಕೆ ಸಹಕಾರ ಸಚಿವ ರಾಜಣ್ಣ ಅವರನ್ನು ಕರೆತಂದು ಸಹಕಾರ ಇಲಾಖೆ ಅಭಿವೃದ್ಧಿಗೆ ಅನುದಾನವನ್ನು ಬಿಡುಗಡೆ ಮಾಡಿಸಿಕೊಳ್ಳಲಾಗುವುದು. ಸಹಕಾರ ಸಂಘಗಳ ಏಳಿಗೆಗೆ ಸದಾ ನನ್ನ ಸಹಕಾರ ಇರುತ್ತದೆ ಎಂದರು.

ಸಹಕಾರ ಸಂಘಗಳಿಲ್ಲದಿದ್ದರೆ ರಾಷ್ಟ್ರೀಕೃತ ಬ್ಯಾಂಕ್‌ಗಳಿಂದ ರೈತರು ಸಾಲ ಪಡೆಯಲು ತುಂಬಾ ಕಷ್ಟಕರವಾಗುತ್ತಿತ್ತು. ಸರಕಾರದ ಸೌಲಭ್ಯಗಳೂ ಸಮರ್ಪಕವಾಗಿ ಸಿಗುತ್ತಿರಲಿಲ್ಲ. ಹೀಗಾಗಿ ಸಹಕಾರ ಸಂಘಗಳಿಂದ ರೈತರಿಗೆ ಅನುಕೂಲವಾಗಿದ್ದು, ಎಲ್ಲರೂ ಸದ್ಬಳಕೆ ಮಾಡಿಕೊಳ್ಳಬೇಕು. ಸಾಲ ಪಡೆದ ರೈತರು ಸಕಾಲಕ್ಕೆ ಮರುಪಾವತಿ ಮಾಡಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಡಾದ ಮಾಜಿ ಅಧ್ಯಕ್ಷ, ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಡಾ.ಎಚ್.ವಿ.ರಾಜೀವ್ ಮಾತನಾಡಿ, ಎಲ್ಲರನ್ನು ಸಹಕಾರ ಕ್ಷೇತ್ರಕ್ಕೆ ಕರೆತರಬೇಕು. ಒಂದಲ್ಲ ಒಂದು ಸಹಕಾರ ಕ್ಷೇತ್ರದಲ್ಲಿ ಗುರುತಿಸಿಕೊಳ್ಳಬೇಕು. ಆ ಮೂಲಕ ಸಹಕಾರ ಕ್ಷೇತ್ರವನ್ನು ಬಲಿಷ್ಠಗೊಳಿಸಬೇಕು. ಯಶಸ್ವಿನಿ ಯೋಜನೆಯನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಜನತೆಗೆ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಮೈಮುಲ್ ನಿರ್ದೇಶಕ ಕೆ.ಈರೇಗೌಡ ಮಾತನಾಡಿ, ಸಹಕಾರ ಸಂಘಗಳಲ್ಲಿ ರಾಜಕೀಯ ಬೆರೆಸಿದರೆ ಸಂಘದ ಅಳಿವು ಖಚಿತ. ಇದರಿಂದಾಗಿ ಯಾವುದೇ ಕಾರಣಕ್ಕೂ ರಾಜಕೀಯ ಬೆರಸಬಾರದು. ಹ್ಯಾಂಡ್ ಪೋಸ್ಟ್‌ನ ಮೈಮುಲ್ ಉಪ ಕಚೇರಿ ಪಕ್ಕದಲ್ಲಿ ಸಹಕಾರ ಭವನ ನಿರ್ಮಾಣಕ್ಕೆ ನಿವೇಶನ ಗುರುತಿಸಲಾಗಿದೆ. ಇದಕ್ಕೆ ಸಹಕಾರ ಅಗತ್ಯ ಕ್ಷೇತ್ರದಲ್ಲಿರುವ ಎಲ್ಲಾ ಸಂಘಗಳಿಗೂ ಸಮರ್ಪಕವಾಗಿ ಅನುದಾನ, ಸರಕಾರದ ಸೌಲಭ್ಯಗಳನ್ನು ಸಿಗುವಂತೆ ನೋಡಿಕೊಳ್ಳಲಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಉತ್ತಮ ಸಹಕಾರ ಸಂಘಗಳಾದ ಗೊಲ್ಲನಬೀಡು, ಚೊಕ್ಕಡನಹಳ್ಳಿ, ಬಿ.ಮಟಕೆರೆ, ಗಿರಿಜನ ಮೀನುಗಾರಿಕೆ ಸಹಕಾರ ಸಂಘದ ಅಧ್ಯಕ್ಷರು, ಕಾರ್ಯನಿರ್ವಾಹಣಾಧಿಕಾರಿಗಳನ್ನು ಸನ್ಮಾನಿಸಲಾಯಿತು. ಕೆಐಸಿಎಂ ಉಪನ್ಯಾಸಕ ಎಸ್.ಮಹದೇವಪ್ಪ 'ಸಹಕಾರ ಶಿಕ್ಷಣ ಹಾಗೂ ತರಬೇತಿಯ ಪರಿಷ್ಕರಣೆ' ವಿಷಯ ಕುರಿತು ಮಾತನಾಡಿದರು.

ಮೈಮುಲ್ ಉಪಾಧ್ಯಕ್ಷ ಬಿ.ಎನ್.ಸದಾನಂದ, ದ್ರಾಕ್ಷಾಯಿಣಿ ಬಸವರಾಜಪ್ಪ, ಲ್ಯಾಂಪ್ಸ್ ಸಹಕಾರ ಮಹಾಮಂಡಳದ ನಿರ್ದೇಶಕ ಡಿ.ಕಾವೇರ, ತಾಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ಅಧ್ಯಕ್ಷ ಬಸವರಾಜಪ್ಪ, ವಿಎಸ್‌ಎಸ್‌ನ ಅಧ್ಯಕ್ಷ ಬಸವರಾಜು, ಬಿಡುಗಲು ಡೈರಿ ಅಧ್ಯಕ್ಷ ಬಿ.ಆರ್.ರಾಮರಾಜೇ ಅರಸ್, ಮೈಮುಲ್‌ನ ವ್ಯವಸ್ಥಾಪಕ ನಿರ್ದೇಶಕ ಬಿ.ಎಸ್.ವಿಜಯಕುಮಾರ್, ವ್ಯವಸ್ಥಾಪಕ ದಿವಾಕರ್, ಎಂಸಿಡಿಸಿಸಿ ಬ್ಯಾಂಕ್‌ನ ಸಿಒ ಎ.ಎಸ್.ವಿನೋದ್‌ಕುಮಾರ್, ವ್ಯವಸ್ಥಾಪಕ ಪಿ.ಎಸ್.ಹರೀಶ್, ಡಾ.ಸಣ್ಣತಮ್ಮೇಗೌಡ, ಹಿರಿಯ ವಿಸ್ತರಣಾಧಿಕಾರಿಗಳಾದ ಆರೀಫ್ ಇಕ್ಬಾಲ್, ರಾಮಪ್ಪ ಬಾರ್ಕಿ, ಜಯಂತ್‌ಕುಮಾರ್, ಯೋಗೇಶ್, ಜಗದಾಂಬ, ಕಾಂಗ್ರೆಸ್ ಮುಖಂಡರಾದ ಪಿ.ರವಿ, ಶಂಭುಲಿಂಗನಾಯಕ, ಬಿ.ಮಟಕೆರೆ ಅಣ್ಣಯ್ಯಸ್ವಾಮಿ ಜಿನ್ನಹಳ್ಳಿ ರಾಜನಾಯಕ, ಸೇರಿದಂತೆ ಇನ್ನಿತರರು ಹಾಜರಿದ್ದರು.


ಶಿವರಾಜನಾಯಕ ನಿಧನ



ಹಿರೀಕ್ಯಾತನಹಳ್ಳಿ, ನ.24– ಹುಣಸೂರು ತಾಲೂಕಿನ ಗಾವಡಗೆರೆ ಹೋಬಳಿಯ ಮುಳ್ಳೂರು ಗ್ರಾಪಂ ಸದಸ್ಯ ಮಾಚಬಾಯನಹಳ್ಳಿ ಗ್ರಾಮದ ಶಿವರಾಜನಾಯಕ (46) ಗುರುವಾರ ಸಂಜೆ ಅನಾರೋಗ್ಯದಿಂದ ನಿಧನರಾದರು.

ಇವರ ಅಂತ್ಯಕ್ರಿಯೆ ಶುಕ್ರವಾರ ಮಧ್ಯಾಹ್ನ 2 ಗಂಟೆಗೆ ಅವರ ಜಮೀನಿನಲ್ಲಿ ನಡೆಯಿತು. ಮೃತರು ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ, ಸಹೋದರಿ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಸಂತಾಪ: ಗ್ರಾಮ ಪಂಚಾಯಿತಿ ಅಧ್ಯಕ್ಷ ಉಪಾಧ್ಯಕ್ಷ, ಸದಸ್ಯರು ಹಾಗೂ ಪಿಡಿಒ ಸೇರಿದಂತೆ ಕಚೇರಿಯ ಸಿಬ್ಬಂದಿಗಳು, ಮುಖಂಡರು ಅಂತಿಮ ದರ್ಶನ ಪಡೆದು ಸಂತಾಪ ಸೂಚಿಸಿದರು.



Happy Birthday
ಮಾಜಿ ಮಂತ್ರಿಗಳು ಹಾಗೂ
ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ
ಜನಪ್ರಿಯ ಶಾಸಕರಾದ
ಸನ್ಮಾನ್ಯ ಶ್ರೀ ಜಿ.ಟಿ. ದೇವೇಗೌಡ
ರವರಿಗೆ
ಹುಟ್ಟುಹಬ್ಬದ ಶುಭಾಶಯಗಳು
ಚಾಮುಂಡೇಶ್ವರಿ
ತಾಯಿಯು ಶ್ರೀಯುತರಿಗೆ
ರಾಜಕೀಯ ರಂಗದಲ್ಲಿ
ಉನ್ನತ ಸ್ಥಾನವನ್ನು
ಆಯಸ್ಸು, ಅಧಿಕಾರ,
ಯಶಸ್ಸನ್ನು ಕರುಣಿಸಲಿ
ಎಂದು ಪ್ರಾರ್ಥಿಸುವವರು,
ಶ್ರೀ ಶ್ರೀಕಾಂತ್
ಉದ್ಯಮಿಗಳು
ಎಸ್.ಆರ್. ವೈನ್ಸ್ & ಎಸ್.ಡಿ. ವೈನ್ಸ್
ಹಾಗೂ ಸಮಾಜ ಸೇವಕರು, ಜಯಪುರ
ಜಯಪುರ ಗ್ರಾಮ ಪಂಚಾಯಿತಿಯ ವ್ಯಾಪ್ತಿಯ
ಎಲ್ಲಾ ಮುಖಂಡರು ಹಾಗೂ ಸಮಸ್ತ ನಾಗರೀಕರು
PUBLIC GRAPHICS
9986925428